ಸಂಪುಟ: 05 ಸಂಚಿಕೆ: 72 ಪುಟಗಳು: 08 ಸೋಮವಾರ 26 ಮೇ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833

₹5

# ಉದಯ ವಾಹಿನಿ

UV

ಸರ್ವ ಸಮಾನತೆಯ
ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ತಾಳ್ಮೆಯನ್ನು ಎಂದಿಗೂ ಕಳೆದುಕೊಳ್ಳಬಾರದು, ಇದು ಸೂಕ್ತ ನಿರ್ಧಾರಗಳನ್ನು ತೆಗೆದುಕೊಳ್ಳುವಲ್ಲಿ ನಮಗೆ ಸಹಾಯ ಮಾಡುತ್ತದೆ. ಒಬ್ಬರ ಸಾಮರ್ಥ್ಯಕ್ಕೆ ಅನುಗುಣವಾಗಿ ಪ್ರಯತ್ನಗಳನ್ನು ಮಾಡಬೇಕು.

## ಭಾರತ 2047 ಅಸಮಾನತೆ ತೊಡೆದು ಹಾಕುವ ಸಾಧನವಾಗಬೇಕು: ಸಿಎಂ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ರಾಜ್ಯದ ಮಾದರಿಯಲ್ಲೇ ಎಲ್ಲರನ್ನು ಒಳಗೊಳ್ಳುವ ಅಭಿವೃದ್ಧಿ ಮಾದರಿಯನ್ನು ಕೇಂದ್ರ ಸರಕಾರವು ಅನುಸರಿಸಬೇಕು. ಆ ಮೂಲಕ ಭಾರತ 2047ರ ಘೋಷಣೆ ಸಾರ್ಥಕತೆ ಪಡೆಯಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದಿಸಿದ್ದಾರೆ. ಭಾರತ 2047 ಎಂಬುದು ಕೇವಲ ಘೋಷಣೆಯಾಗದೆ ಅಸಮಾನತೆಯನ್ನು ತೊಡೆದು ಹಾಕುವ ಸಾಧನವಾಗಬೇಕು. ಹಿಮಾಲಯದ ಅಂಚಿನಲ್ಲಿರುವ ರಾಜ್ಯಗಳು, ಗಂಗಾ ಬಯಲಿನ ಪ್ರದೇಶಗಳು ಮತ್ತು ಕಾವೇರಿ ಕಣಿವೆಯ ರಾಜ್ಯಗಳನ್ನು ಏಕರೂಪದಲ್ಲಿ ಅಭಿವೃದ್ಧಿಪಡಿಸುವ ಹಾಗೂ ಅಭಿವೃದ್ಧಿಯ ಪಥದಲ್ಲಿ ಕರೆದೊಯ್ಯುವ ಧ್ಯೆಯವನ್ನು ಭಾರತ ಒಳಗೊಳ್ಳಬೇಕು ಎಂದು ಸಿದ್ದರಾಮಯ್ಯ ಪ್ರತಿಪಾದಿಸಿದ್ದಾರೆ. ಸಾಮಾಜಿಕ ನ್ಯಾಯ, ಆರ್ಥಿಕ ಸಮಾನತೆ ಜೊತೆಗೆ ಸಾಮಾಜಿಕ ಸಾಮರಸ್ಯ ಮತ್ತು ಸೌಹಾರ್ದದ ಹಾದಿಯನ್ನು ಅಳವಡಿಸಿಕೊಳ್ಳುವ ಅವಶ್ಯಕತೆ ಇದೆ ಎಂದರು.

## 'ಬ್ರಹ್ಮೋಸ್' ಬ್ರಹ್ಮಾಸ್ತ್ರ: ಭಾರತ ರಷ್ಯಾ ಮಹತ್ವದ ಮಾತುಕತೆ

• **ಉದಯವಾಹಿನಿ, ನವದೆಹಲಿ**

ಆಪರೇಷನ್ ಸಿಂದೂರ್ ಕಾರ್ಯಾಚರಣೆಯಲ್ಲಿ ಬ್ರಹ್ಮೋಸ್ ಕ್ಷಿಪಣಿಯ ಪರಾಕ್ರಮವನ್ನು ಜಗತ್ತು ಕಂಡಿದೆ. ಭಾರತ ಮತ್ತು ರಷ್ಯಾ ಜಂಟಿಯಾಗಿ ನಿರ್ಮಿಸಿರುವ ಬ್ರಹ್ಮೋಸ್ ಜಗತ್ತಿನ ಅತ್ಯಂತ ಶಕ್ತಿಶಾಲಿ ಕ್ಷಿಪಣಿಗಳಲ್ಲಿ ಒಂದಾಗಿದೆ.

ಇದೀಗ, ಭಾರತ ಮತ್ತು ರಷ್ಯಾ ಮತ್ತೆ ಜಂಟಿಯಾಗಿ ಬ್ರಹ್ಮೋಸ್ ಕ್ಷಿಪಣಿಯ ಹೊಸ ಮತ್ತು ಹೆಚ್ಚು ಶಕ್ತಿಶಾಲಿಯಾದ ಆವೃತ್ತಿಯನ್ನು (ಸೂಪರ್ ಬ್ರಹ್ಮೋಸ್) ತಯಾರಿಸಲು ಮುಂದಾಗಿವೆ. ಈ ಹೊಸ ಬ್ರಹ್ಮೋಸ್ ಕ್ಷಿಪಣಿಯನ್ನು ಇತ್ತೀಚಿಗೆ ಉದ್ಘಾಟನೆಗೊಂಡಿರುವ ಉತ್ತರ ಪ್ರದೇಶದ ಬ್ರಹ್ಮೋಸ್ ಉತ್ಪಾದನಾ ಘಟಕದಲ್ಲಿ ತಯಾರಿಸಲಾಗುತ್ತದೆ ಎಂದು ವರದಿಯಾಗಿದೆ. ಈ ಹೊಸ ಕ್ಷಿಪಣಿ ತಯಾರಿಕೆಗೆ ರಷ್ಯಾ ಭಾರತಕ್ಕೆ ಸಂಪೂರ್ಣ ತಾಂತ್ರಿಕ ಬೆಂಬಲವನ್ನು ನೀಡಿದೆ. ಈ ಹೊಸ ಕ್ಷಿಪಣಿ ತಯಾರಿಕೆಗೆ ಸಂಬಂಧಿಸಿದಂತೆ ಎರಡೂ ದೇಶಗಳ ನಡುವಿನ ಮೊದಲ ಹಂತದ ಮಾತುಕತೆ ಪೂರ್ಣಗೊಂಡಿದೆ.

## ರಾಜ್ಯಪಾಲ ಗೆಹ್ಲೋಟ್ - ಸಿಎಂ ಸಿದ್ದರಾಮಯ್ಯ ಭೇಟಿ

• **ಉದಯವಾಹಿನಿ, ಬೆಂಗಳೂರು**

ಕೆಲ ಮಹತ್ವದ ವಿಧೇಯಕಗಳಿಗೆ ಅಂಕಿತ ಹಾಕಲು ನಿರಾಕರಿಸಿದ್ದ ರಾಜ್ಯಪಾಲರು ಆ ವಿಧೇಯಕಗಳನ್ನು ರಾಷ್ಟ್ರಪತಿಗಳ ಪರಾಮರ್ಶೆಗೆ ಶಿಫಾರಸು ಮಾಡಿದ ಬೆನ್ನಲ್ಲೇ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರನ್ನು ರಾಜಭವನದಲ್ಲಿ ಭಾನುವಾರ ಭೇಟಿಯಾದ ಸಿಎಂ ಸಿದ್ದರಾಮಯ್ಯ ಭೇಟಿ ಮಾಡಿರುವುದು ಕುತೂಹಲ ಮೂಡಿಸಿದೆ. ಮುಖ್ಯವಾಗಿ ಸರಕಾರಿ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಶೇಕಡಾ 4 ರಷ್ಟು ಮೀಸಲು ಕಲ್ಪಿಸುವ 'ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿನ ಪಾರದರ್ಶಕತೆ' (ಕೆಟಿಪಿಪಿ) ತಿದ್ದುಪಡಿ ವಿಧೇಯಕವನ್ನು ರಾಷ್ಟ್ರಪತಿಗಳ ಪರಾಮರ್ಶೆಗೆ ಶಿಫಾರಸು ಮಾಡಿ ರಾಜ್ಯಪಾಲರು ಹಿಂದಿರುಗಿಸಿದ್ದರು. ಹಾಗಿದ್ದರೂ ಪುನರ್ ಪರಿಶೀಲಿಸುವಂತೆ ಕೋರಿ ರಾಜ್ಯ ಸರಕಾರ ಮತ್ತೆ ಆ ವಿಧೇಯಕವನ್ನು ರಾಜ್ಯಪಾಲರಿಗೆ ಸಲ್ಲಿಸಿದೆ. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ತಿದ್ದುಪಡಿ ವಿಧೇಯಕ, ಕರ್ನಾಟಕ ಸಹಕಾರಿ ಸಂಘಗಳ (ತಿದ್ದುಪಡಿ) ವಿಧೇಯಕ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕವನ್ನೂ ರಾಷ್ಟ್ರಪತಿಗಳ ಪರಿಶೀಲನೆಗೆ ಶಿಫಾರಸು ಮಾಡಿ ರಾಜ್ಯಪಾಲರು ಸರಕಾರಕ್ಕೆ ವಾಪಾಸ್ ಕಳಿಸಿದ್ದಾರೆ.

## ಮೇ 31ರವರೆಗೆ ನಿಲ್ಲಲ್ಲ ಮಳೆ! ಕರಾವಳಿ ಜಿಲ್ಲೆಗಳಿಗೆ ರೆಡ್ ಅಲರ್ಟ್

• **ಉದಯವಾಹಿನಿ, ಬೆಂಗಳೂರು**

ಒಂದು ವಾರ ಮುಂಚೆಯೇ ಕೇರಳದ ಮೂಲಕ ನೈರುತ್ಯ ಮುಂಗಾರು ಕರ್ನಾಟಕದ ಕರಾವಳಿಯನ್ನು ಪ್ರವೇಶ ಮಾಡಿದೆ. ಇದರ ಪರಿಣಾಮ ಕರ್ನಾಟಕದ ಬಹುತೇಕ ಎಲ್ಲಾ ಭಾಗಗಳ ಮೇಲೂ ಆಗುತ್ತಿದ್ದು, ಒಂದು ವಾರ ರಾಜ್ಯದ ಹಲವು ಕಡೆ ವ್ಯಾಪಕವಾಗಿ ಮಳೆ ಸುರಿಯುವ ಸಾಧ್ಯತೆ ಇದೆ. ಈಗಾಗಲೇ ಮಂಗಳೂರು ಸೇರಿದಂತೆ ಕರಾವಳಿಯ ಹಲವು ಪ್ರದೇಶಗಳಲ್ಲಿ ಧಾರಾಕಾರ ಮಳೆ ಸುರಿದಿದೆ. ಹವಾಮಾನ ಇಲಾಖೆಯು ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಿದೆ. ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಶಿವಮೊಗ್ಗ, ಕೊಡಗು ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಎಚ್ಚರಿಕೆ ನೀಡಲಾಗಿದೆ.

ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತದಿಂದಾಗಿ ಮುಂಗಾರು ಬೇಗನೆ ಪ್ರವೇಶ ಮಾಡಿದೆ. ಮುಂದಿನ 3 ದಿನಗಳಲ್ಲಿ ಮಹಾರಾಷ್ಟ್ರ, ಕರ್ನಾಟಕ, ಆಂಧ್ರಪ್ರದೇಶ, ತಮಿಳುನಾಡು ರಾಜ್ಯಗಳಲ್ಲಿ ಮಳೆಯಾಗಲಿದೆ. ದಕ್ಷಿಣ ಜಿಲ್ಲೆಯಲ್ಲಿ ಈಗಾಗಲೇ ಮಳೆಯಿಂದ ಅವಾಂತರಗಳು ಸೃಷ್ಟಿಯಾಗಿವೆ. ಎಲ್ಲೆಂದರಲ್ಲಿ ಮರಗಳು ಉರುಳಿ ಬೀಳುತ್ತಿವೆ, ರಸ್ತೆಯ ತಗ್ಗು ಪ್ರದೇಶಗಳಿಗೆ ನೀರು ಹರಿದು ಬಂದು ಕೃತಕ ಪ್ರವಾಹ ಸೃಷ್ಟಿಯಾಗುತ್ತಿದೆ. ಮತ್ತೊಂದು ಕಡೆ ಮರಗಳು ಬಿದ್ದು ವಾಹನಗಳು ಜಖಂ ಆಗುತ್ತಿವೆ. ನೀರಿನಲ್ಲಿ ವಾಹನ ಸಂಚಾರ ಮಾಡೋಕೆ ಸವಾರರು ಪರದಾಡುತ್ತಿದ್ದಾರೆ.




■ ಸಾಬೂನು ಹಚ್ಚಿದ್ರೆ ಬೆಳ್ಳಗಾಗಲ್ಲ ■ ಜನರ ಟ್ಯಾಕ್ಸ್ ವೇಸ್ಟ್ ಮಾಡ್ಬೇಡಿ ■ ರಾಯಭಾರಿಗಳನ್ನೇ ನೇಮಕ ಮಾಡುವ ಅಗತ್ಯವಿಲ್ಲ ■ ತಮನ್ನಾ ರಾಯಭಾರತ್ವಕ್ಕೆ ರಮ್ಯಾ ಲೇವಡಿ

# ತಮನ್ನಾಗೆ ರಾಯಭಾರಿ ಹೊಣೆ ಕನ್ನಡಿಗರಿಗಿಲ್ಲ ಮನ್ನಣೆ

### ಸೆಲೆಬ್ರಿಟಿಗಳು ಬಳಸುತ್ತಾರೆ ಎಂಬ ಮಾತ್ರಕ್ಕೆ ಜನರು ವಸ್ತುಗಳನ್ನು ಖರೀದಿಸುವುದಿಲ್ಲ

ಈಗ ಜನರು ಬದಲಾಗುತ್ತಿದ್ದಾರೆ. ಅವರಿಗೆ ಯಾವುದು ಸರಿ, ತಪ್ಪು ಎಲ್ಲಾವೂ ತಿಳಿದಿದೆ. ಸೆಲೆಬ್ರಿಟಿಗಳು ಏನನ್ನ ಬಳಸುತ್ತಾರೆ ಎಂದು ನೋಡಿ ಅವರು ವಸ್ತುಗಳನ್ನು ಕೊಂಡುಕೊಳ್ಳುವುದಿಲ್ಲ. ಆ ಕಾಲ ಇಲ್ಲ ಈಗ. ನಾವು ಸೋಪ್ ಬಳಸಿದರೆ ನಟಿಯ ರೀತಿ ಆಗುವುದಿಲ್ಲ ಎಂಬುದು ಜನತೆಗೆ ಚೆನ್ನಾಗಿ ಗೊತ್ತಿದೆ. ಜನರು ಅದನ್ನು ಮೆಚ್ಚಿ ಖರೀದಿಸಿ ಬಳಸಬೇಕೆಂದರೆ ವಸ್ತುವಿನ ಗುಣಮಟ್ಟವಿರಬೇಕು ಅದು ಎಲ್ಲಾರಿಗೂ ತಿಳಿದಿದೆ ಎಂದು ಹೇಳಿದ್ದಾರೆ.




**6.2 ಕೋಟಿ ರೂ. ತೆತ್ತು ನೇಮಕ**




ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಸ್ಥಾಪಿಸಿದ ಸಂಸ್ಥೆಗಳಲ್ಲಿ ಒಂದಾಗಿದ್ದ ಮೈಸೂರು ಸೋಪ್ಸ್ ಮತ್ತು ಡಿಟರ್ಜೆಂಟ್ಸ್ ಲಿಮಿಟೆಡ್ಗೆ ಪರಭಾಷೆ ನಟಿ ತಮನ್ನಾ ಭಾಟಿಯಾ ಅವರನ್ನು ರಾಯಭಾರಿಯನ್ನಾಗಿ ಮಾಡಿದ್ದು ಅತ್ಯಂತ ಅಸಂಬದ್ಧ ಹಾಗೂ ಬೇಜವಾಬ್ದಾರಿಯುತ ನಿರ್ಧಾರ. 1916ರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಈ ಸಂಸ್ಥೆ ಕಟ್ಟಲು ಪ್ರಮುಖ ಪಾತ್ರ ವಹಿಸಿದ್ದರು. ಈ ಸಂಸ್ಥೆಯ ಸೋಪ್ ದಶಕಗಳಿಂದಲೂ ಎಲ್ಲಾರ ಮನೆಯಲ್ಲಿ ಸ್ಥಾನ ಪಡೆದಿತ್ತು. ಈ ಸಂಸ್ಥೆಯ ಬಹುತೇಕ ವಸ್ತುಗಳನ್ನು ಬಳಸುತ್ತಿದ್ದವರೇ ಕನ್ನಡಿಗರು. ಇಂಥ ಸಂಸ್ಥೆಗೆ ಪರಭಾಷೆ ನಟಿಯನ್ನು ರಾಯಭಾರಿಯನ್ನಾಗಿ ಮಾಡಿದ್ದು ಹುಚ್ಚುತನ

**-ಯದುವೀರ್ ಒಡೆಯರ್, ಮೈಸೂರು ಸಂಸದ**



'ಕನ್ನಡ ಚಿತ್ರರಂಗದಲ್ಲಿ ಬಹಳಷ್ಟು ಪ್ರತಿಭಾವಂತ ನಟಿಯರಿದ್ದರು. ಅವರಲ್ಲಿ ಒಬ್ಬರನ್ನು ಆಯ್ಕೆ ಮಾಡಬಹುದಿತ್ತು. ಆದರೆ ಈಗಾಗಲೇ ಬಹುಭಾಷಾ ನಟಿ ತಮನ್ನಾ ಭಾಟಿಯಾ ಅವರನ್ನು ಮಾಡಲಾಗಿದೆ. ಈ ಬಗ್ಗೆ ಮಾತನಾಡುವುದು ಅಪ್ರಸ್ತುತ

**-ಜಮೀರ್ ಅಹಮ್ಮದ್, ವಸತಿ ಸಚಿವ**



ಕನ್ನಡದಲ್ಲೇ ಸಾಕಷ್ಟು ನಟಿಯರು ಇದ್ದಾರೆ. ನಮಗೆ ಮೊದಲ ಆದ್ಯತೆ ಕೊಡಲಿ. ಪ್ರಾದೇಶಿಕವಾಗಿ ರೋ ಪ್ರಾಜೆಕ್ಟ್‌ಗಳಿಗೆ ನಮ್ಮ ನಟಿಯರ ಆಯ್ಕೆ ಆಗಬೇಕು. ನಮ್ಮ ಸ್ಥಳೀಯ ಬ್ರ್ಯಾಂಡ್ ಅಂದಾಗ ನಾವು ಫ್ರೀಯಾಗಿ ಎಷ್ಟೋ ಜಾಹೀರಾತು ಮಾಡಿದ್ದೀವಿ. ಆರು ಕೋಟಿ ಕೊಟ್ಟು ಹೊರಗಡೆಯಿಂದ ನಟಿಯರನ್ನು ತರೋ ಅವಶ್ಯಕತೆ ಇರಲಿಲ್ಲ.

**-ರಾಗಿಣಿ, ನಟಿ**

• **ಉದಯವಾಹಿನಿ, ಬೆಂಗಳೂರು**


ಮೈಸೂರು ಸ್ಯಾಂಡಲ್‌ಸೋಪ್‌ಗೆ ಟಾಲಿವುಡ್ ನಟಿ ತಮನ್ನಾ ಭಾಟಿಯಾ ರಾಯಭಾರಿಯಾಗಿದ್ದು, ಸರ್ಕಾರ ಈ ನಿರ್ಧಾರ ಹಲವರ ಕೆಂಗಣ್ಣಿಗೆ ಗುರಿಯಾಗುವಂತೆ ಮಾಡಿದೆ. ಈ ನಿರ್ಧಾರ ಅವಿವೇಕ ಎಂದು ಟೀಕೆ ಮಾಡಿದ್ದಾರೆ. ಇನ್ನೂ ಸ್ಯಾಂಡಲ್‌ವುಡ್ ಕ್ವೀನ್ ರಮ್ಯಾ ಸಹ ಸರ್ಕಾರದ ಕಿವಿ ಹಿಂಡಿದ್ದಾರೆ.

ಕರ್ನಾಟಕದಲ್ಲಿ ಮೈಸೂರು ಸ್ಯಾಂಡಲ್ ಸೋಪ್‌ಗೆ ದೀರ್ಘ ಇತಿಹಾಸವಿದೆ, ಪರಂಪರೆಯಿದೆ. ಪ್ರತಿ ಕನ್ನಡಿಗರು ಅದರ ರಾಯಭಾರಿಗಳು. ಮೈಸೂರು ಸ್ಯಾಂಡಲ್ ಸೋಪ್ ಅನ್ನು ಜಗತ್ತಿಗೆ ಪರಿಚಯಿಸಲು ಪ್ರತಿಯೊಬ್ಬರನ್ನೂ ಒಗ್ಗೂಡಿಸಿ. ಅದನ್ನು ಕನ್ನಡಿಗರು ಪ್ರೀತಿಯಿಂದ ಖುಷಿಯಿಂದ ಮಾಡುತ್ತಾರೆ. ಆ್ಯಪಲ್ ಬಹಳ ಯಶಸ್ವಿ ಉದ್ಯಮವಾಗಿ ಬೆಳೆದಿದೆ, ಆದರೆ ಅದಕ್ಕೆ ಸಂಭಾವನೆ ನೀಡಿ ನೇಮಿಸಿದ ಬ್ರಾಂಡ್ ಅಂಬಾಸಿಡರ್ ಅಗತ್ಯ ಇರಲಿಲ್ಲ ಎಂದು ಕೂಡ ನಟಿ ರಮ್ಯಾ ಖಂಡನೆ ವ್ಯಕ್ತಪಡಿಸಿದ್ದಾರೆ.

**ಜನರ ತೆರಿಗೆ ಹಣ ವ್ಯರ್ಥ ಮಾಡ್ಬೇಡಿ:** ಇತ್ತೀಚೆಗೆ ಟೆಕ್ನಾಲಜಿ ಭಾರಿ ಮುಂದುವರೆದಿದೆ. ಮೊಬೈಲ್‌ನಲ್ಲೇ ಎಷ್ಟೋ ಜನ ವಸ್ತುಗಳನ್ನ ಪ್ರಮೋಟ್ ಮಾಡಿಕೊಳ್ಳುತ್ತಾರೆ. ಒಂದು ವಸ್ತುವನ್ನು ಮಾರುಕಟ್ಟೆಯಲ್ಲಿ ಪ್ರಚಾರ ಮಾಡಲು ಹತ್ತಾರು ದಾರಿಗಳಿರುತ್ತವೆ. ಇಂತಹ ಕಾಲಘಟ್ಟದಲ್ಲಿ ರಾಯಭಾರಿ ನೇಮಕ ಮಾಡಿ ಪ್ರಚಾರ ಮಾಡುವ ಅಗತ್ಯವಿಲ್ಲ. ಮೈಸೂರು ಸ್ಯಾಂಡಲ್ ಸೋಪ್‌ಗೆ ಬ್ರ್ಯಾಂಡ್ ಅಂಬಾಸಿಡರ್ ಅವಶ್ಯಕತೆ ಇಲ್ಲ. ಜನರ ತೆರಿಗೆ ಹಣ ವ್ಯರ್ಥ ಮಾಡ್ತಿದ್ದಾರೆ ಅಷ್ಟೆ ಇನ್ನೇನು ಇಲ್ಲ ಎಂದು ಸ್ಯಾಂಡಲ್‌ವುಡ್ ನಟಿ ರಮ್ಯಾ ಇನ್‌ಸ್ಟಾಗ್ರಾಮ್‌ನಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ.


**ಸರ್ಕಾರದ ನಿರ್ಧಾರಕ್ಕೆ ಕರವೇ ಕಿಡಿ:** ಮೈಸೂರು ಸೋಪ್ಸ್ ಮತ್ತು ಡಿಟರ್ಜೆಂಟ್ಸ್ ಲಿಮಿಟೆಡ್ ತನ್ನ ಬ್ರಾಂಡ್ ಅಂಬಾಸೆಡರ್ ಆಗಿ ಬಾಲಿವುಡ್ ನಟಿ ತಮನ್ನಾ ಭಾಟಿಯಾ ಅವರನ್ನು 6.2 ಕೋಟಿ ರೂಪಾಯಿ ತೆತ್ತು ನೇಮಕ ಮಾಡಿರುವುದು ಅವಿವೇಕದ, ಅಸಂಬದ್ಧ, ಅನೈತಿಕ, ಬೇಜವಾಬ್ದಾರಿಯುತ ತೀರ್ಮಾನವಾಗಿದೆ. ಮೈಸೂರು ಸೋಪ್ಸ್ ಸಂಸ್ಥೆ ಕರ್ನಾಟಕ ಸರ್ಕಾರದ ಸ್ವಾಮ್ಯದ ಕಂಪನಿ. 1916ರಲ್ಲಿ ಮೈಸೂರು ಸಂಸ್ಥಾನದ ಮಹಾರಾಜ ಕೃಷ್ಣರಾಜ ಒಡೆಯರ್ ಅವರು ಸ್ಥಾಪಿಸಿದರು. ಈ ಕಂಪನಿಯು ಕರ್ನಾಟಕದಲ್ಲಿ ಅತ್ಯಂತ ಜನಪ್ರಿಯ ಬ್ರಾಂಡ್‌ಗಳಲ್ಲಿ ಒಂದಾಗಿದೆ ಮತ್ತು ಇದರ ಪ್ರಾಥಮಿಕ ಗ್ರಾಹಕರು ಕನ್ನಡಿಗರಾಗಿದ್ದಾರೆ ಎನ್ನುವ ಕನಿಷ್ಠ ತಿಳಿವಳಿಕೆ ಈ ನೇಮಕ ಮಾಡುವಾಗ ಇರಲಿಲ್ಲವೇ ಐತಿಹಾಸಿಕ ಮತ್ತು ಸಾಂಸ್ಕೃತಿಕ ಮೌಲ್ಯವುಳ್ಳ ಕಂಪನಿಯ ಬ್ರಾಂಡ್ ಅಂಬಾಸಿಡರ್ ಆಗಿ ಬಾಲಿವುಡ್ ನಟಿ ತಮನ್ನಾ ಭಾಟಿಯಾ ಅವರೇ ಬೇಕಿತ್ತೆ ಎಂದು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ಅಧ್ಯಕ್ಷ ನಾರಾಯಣ ಗೌಡ ಅವರು ಕಿಡಿಕಾರಿದ್ದಾರೆ. ಈ ನೇಮಕಕ್ಕಾಗಿ ಕರ್ನಾಟಕ ಸರ್ಕಾರವು 6.20 ಕೋಟಿ ರೂಪಾಯಿಗಳ ಭಾರೀ ಮೊತ್ತವನ್ನು ವ್ಯಯಿಸಿರುವುದು ಇನ್ನಷ್ಟು ಆಕ್ಷೇಪಾರ್ಹವಾಗಿದೆ. ಈ ನಿರ್ಧಾರದ ವಿರುದ್ಧ ನಮ್ಮ ತೀವ್ರ ವಿರೋಧವನ್ನು ಈ ಮೂಲಕ ದಾಖಲಿಸುತ್ತೇವೆ. ಮೈಸೂರು ಸೋಪ್ಸ್ ಮತ್ತು ಡಿಟರ್ಜೆಂಟ್ಸ್ ಲಿಮಿಟೆಡ್ ಕರ್ನಾಟಕ ಸರ್ಕಾರದ ಸ್ವಾಮ್ಯದ ಕಂಪನಿಯಾಗಿದೆ.

ಈ ಕಂಪನಿಯ ಬ್ರಾಂಡ್ ಅಂಬಾಸಿಡರ್ ಆಗಿ ತಮನ್ನಾ ಭಾಟಿಯಾ ಅವರನ್ನು ನೇಮಿಸಲು ಸರ್ಕಾರವು 6.20 ಕೋಟಿ ರೂಪಾಯಿಗಳ ಭಾರೀ ಮೊತ್ತವನ್ನು ವ್ಯಯಿಸಿರುವುದು ಸಂಪೂರ್ಣವಾಗಿ ಅನಗತ್ಯ ಮತ್ತು ಜವಾಬ್ದಾರಿಯಿಲ್ಲದ ನಿರ್ಧಾರವಾಗಿದೆ. ಈ ಹಣವನ್ನು ಕರ್ನಾಟಕದ ಜನರ ಒಳಿತಿಗಾಗಿ, ಉದಾಹರಣೆಗೆ ಶಿಕ್ಷಣ, ಆರೋಗ್ಯ, ಅಥವಾ ಉದ್ಯೋಗ ಸೃಷ್ಟಿಗೆ ಬಳಸಬಹುದಾಗಿತ್ತು. ಸರ್ಕಾರವು ಜನರ ತೆರಿಗೆ ಹಣವನ್ನು ಈ ರೀತಿ ವ್ಯರ್ಥವಾಗಿ ಖರ್ಚು ಮಾಡಿರುವುದು ಖಂಡನೀಯವಾಗಿದೆ ಎಂದು ಹೇಳಿದ್ದಾರೆ.



### ಫ್ರೀಯಾಗಿ ರಾಯಭಾರಿ ಆಗ್ತೀನಿ

ಮೈಸೂರು ಸ್ಯಾಂಡಲ್ ಸೋಪ್‌ಗೆ ರಾಯಭಾರಿಯಾಗಿ ತಮನ್ನಾನೂ ಬೇಡ, ಸುಮನ್ನಾನೂ ಬೇಡ. ಉಚಿತವಾಗಿ ನಾನೇ ರಾಯಭಾರಿ ಆಗ್ತೀನಿ ಎಂದು ಕನ್ನಡ ಹೋರಾಟಗಾರ ವಾಟಾಳ್ ನಾಗರಾಜ್ ಹೇಳಿದ್ದಾರೆ. ನಟಿ ತಮನ್ನಾ ಭಾಟಿಯಾ ಅವರಿಗೆ 6.20 ಕೋಟಿ ರೂ. ಸಂಭಾವನೆ ನೀಡಿ ಮೈಸೂರು ಸ್ಯಾಂಡಲ್ ಸೋಪ್‌ಗೆ ಪ್ರಚಾರ ರಾಯಭಾರಿಯನ್ನಾಗಿ ನೇಮಿಸಿದ ರಾಜ್ಯ ಸರಕಾರದ ನಿರ್ಧಾರ ಖಂಡಿಸಿದರು. ಕನ್ನಡದ ಶ್ರೀಮಂತ ಪರಂಪರೆಯಾಗಿರುವ ಶ್ರೀಗಂಧ ಮತ್ತು ಅದರಿಂದ ತಯಾರಿಸುವ ಮೈಸೂರು ಸ್ಯಾಂಡಲ್ ಸೋಪ್‌ಗೆ ಪ್ರಚಾರ ರಾಯಭಾರಿಯಾಗಲು ಕನ್ನಡದ ಪ್ರಖ್ಯಾತ ನಟ, ನಟಿಯರು ಉಚಿತವಾಗಿ ಸೇವೆ ಸಲ್ಲಿಸಲು ಮುಂದೆ ಬರುತ್ತಾರೆ ಎಂದು ಹೇಳಿದರು.



### ವಿಜಯೇಂದ್ರ ಆರೋಪ

ಮೈಸೂರು ಸ್ಯಾಂಡಲ್ ಸೋಪ್‌ಗೆ ರಾಯಭಾರಿಯನ್ನಾಗಿ ತಮನ್ನಾ ಭಾಟಿಯಾ ಅವರನ್ನು ರಾಜ್ಯ ಸರ್ಕಾರ ನೇಮಿಸಿದೆ. ಈ ನಾಡಿನ ನೆಲ, ಜಲ, ಭಾಷೆ, ಸಂಸ್ಕೃತಿಯನ್ನು ಉಳಿಸಿಕೊಂಡು ಹೋಗಬೇಕಾದುದು ರಾಜ್ಯದ ಕರ್ತವ್ಯ. ಕೆಎಸ್‌ಡಿಎಲ್ ಸಂಸ್ಥೆ ಕಾಂಗ್ರೆಸ್ ಸರ್ಕಾರ ಹುಟ್ಟು ಹಾಕಿದ್ದಲ್ಲ. ಮೈಸೂರು ಮಹಾರಾಜರ ಕನಸಿನ ಕೂಸು. ಅಂತಹ ಸಂಸ್ಥೆಗೆ ರಾಯಭಾರಿಯಾಗಿ ಕರ್ನಾಟಕದಲ್ಲಿ ಯಾರೂ ಸಿಗಲಿಲ್ಲವೇ ಪರಿಣಿತರ ಸಲಹೆ ಪಡೆದುಕೊಂಡೆವು ಎಂದು ಮಂತ್ರಿಗಳು ಹೇಳುತ್ತಿದ್ದಾರೆ. ಇದಕ್ಕೆ ಪರಿಣಿತರ ಸಲಹೆ ಯಾಕೆ ಬೇಕು ಆ ಪರಿಣಿತರು ಯಾರು ಆ ಪರಿಣಿತರಲ್ಲಿ ಜಮೀರ್ ಅಹಮ್ಮದ್ ಇದ್ದಾರಾ ಯಾರ್ಯಾರು ಇದ್ದಾರೆ ಪರಿಣಿತರು ಅಂದ್ರೆ, ಇದನ್ನು ರಾಜ್ಯದ ಜನತೆ ಪ್ರಶ್ನೆ ಮಾಡುತ್ತಿದ್ದಾರೆ. ತಮನ್ನಾ ಭಾಟಿಯಾ ಅವರನ್ನು ಕರೆತರುತ್ತಿರುವುದು ಕನ್ನಡಿಗರಿಗೆ ಮಾಡುತ್ತಿರುವ ಅವಮಾನ ಎಂದು ಹೇಳಿದ್ದರು.

### ರಾಯಭಾರಿ ಆಯ್ಕೆಗೆ ಕಾರಣ

- ನಿರ್ದಿಷ್ಟ ದಿನ, ವಿಭಾಗಕ್ಕೆ ಲಭ್ಯತೆ
- ಸಾಮಾಜಿಕ ಮಾಧ್ಯಮಗಳಲ್ಲಿ ಅವರ ಉಪಸ್ಥಿತಿ
- ಬ್ರ್ಯಾಂಡ್, ಉತ್ಪನ್ನ ಮತ್ತು ಗುರಿ ಪ್ರೇಕ್ಷಕರೊಂದಿಗೆ ಹೊಂದಾಣಿಕೆ
- ಮಾರುಕಟ್ಟೆ ಫಿಟ್ ಮತ್ತು ರೀಚ್
- 2028 ರ ವೇಳೆಗೆ ಕೆಎಸ್‌ಡಿಎಲ್ ವಾರ್ಷಿಕ 5000 ಕೋಟಿ ಆದಾಯವನ್ನು ತಲುಪುವುದು ನಮ್ಮ ದೃಷ್ಟಿ ಹೊಂದಿದೆ.

# ಬಿಜೆಪಿ 18 ಶಾಸಕರ ಅಮಾನತು ರದ್ದು: ಸ್ಪೀಕರ್ ಘೋಷಣೆ

• **ಉದಯವಾಹಿನಿ, ಬೆಂಗಳೂರು**

ವಿಧಾನಸಭೆ ಸ್ಪೀಕರ್ ಪೀಠಕ್ಕೆ ಅಗೌರವ ತೋರಿಸಿದ ಹಿನ್ನೆಲೆ ಅಮಾನತುಗೊಂಡಿದ್ದ 18 ಬಿಜೆಪಿ ಶಾಸಕರಿಗೆ ಬಿಗ್ ರಿಲೀಫ್ ಸಿಕ್ಕಿದೆ. ಈ ಎಲ್ಲಾ ಶಾಸಕರ ಅಮಾನತನ್ನು ರದ್ದುಪಡಿಸುವುದಾಗಿ ಸ್ಪೀಕರ್ ಯುಟಿ ಖಾದರ್ ತಿಳಿಸಿದ್ದಾರೆ.

ಈ ಸಂಬಂಧ, ಸ್ಪೀಕರ್ ಯುಟಿ ಖಾದರ್ ಹಾಗೂ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಭಾನುವಾರ ನಡೆದ ಸಭೆಯಲ್ಲಿ ಈ ನಿರ್ಣಯನ್ನು ತೆಗೆದುಕೊಳ್ಳಲಾಗಿದೆ. ಇನ್ನು ಯಾವುದೇ ಷರತ್ತು ಹಾಕುವುದಿಲ್ಲ. ನಾವೆಲ್ಲ ಶಾಸಕ ಮಿತ್ರರು, ಕಠಿಣ ಕ್ರಮ ತೆಗದುಕೊಂಡಿದ್ದೆ, ಈಗ ಅವರಿಗೆ ಅರ್ಥವಾಗಿದೆ ಎಂದುಕೊಳ್ಳುತ್ತೇನೆ. ಮುಂದಿನ ದಿನಗಳಲ್ಲಿ ಈ ರೀತಿ ಮಾಡಲ್ಲ ಎಂದು ಭಾವಿಸಿದ್ದೇನೆ ಎಂದು ಖಾದರ್ ಅವರು ಹೇಳಿದರು.



### ಯಾರೆಲ್ಲಾ ಅಮಾನತು ಆಗಿದ್ದರು

● ದೊಡ್ಡಣ್ಣ ಗೌಡ ಪಾಟೀಲ್ ● ಸಿ ಕೆ ರಾಮಮೂರ್ತಿ ● ಅಶ್ವತ್ಥ ನಾರಾಯಣ ● ಎಸ್ ಆರ್ ವಿಶ್ವನಾಥ್ ● ಬೈರತಿ ಬಸವರಾಜ ● ಎಂ ಆರ್ ಪಾಟೀಲ್ ● ಚನ್ನ ಬಸಪ್ಪ ● ಬಿ ಸುರೇಶ್ ಗೌಡ ● ಡಾ. ಭರತ್ ಶೆಟ್ಟಿ ● ಮುನಿರತ್ನ ● ಬಸವರಾಜ ಮತ್ತಿಮೋಡ್ ● ಧೀರಜ್ ಮುನಿರಾಜು ● ಡಾ ಚಂದ್ರು ಲಮಾಣಿ ● ಉಮನಾಥ್ ಕೋಟ್ಯಾನ್ ● ಶರಣು ಸಲಗಾರ್ ● ಶೈಲೇಂದ್ರ ಬೆಲ್ದಾಳೆ ● ಯಶಪಾಲ್ ಸುವರ್ಣ ● ಹರೀಶ್ ಬಿ ಪಿ

ಕಳೆದ ವಿಧಾನಸಭಾ ಅಧಿವೇಶನ ನಡೆದ ಸಂದರ್ಭದಲ್ಲಿ ಮಾರ್ಚ್ 21 ರಂದು ಸದನದಲ್ಲಿ ಘಟನೆ ನಡೆದಿತ್ತು. ಸಾಕಷ್ಟು ಬಾರಿ ಅವರ ಅಮಾನತನ್ನು ಹಿಂಪಡೆಯುವಂತೆ ಸ್ಪೀಕರ್ ಬಳಿ ಬಿಜೆಪಿ ಹಾಗೂ ಇತರೆ ನಾಯಕರು ಮನವಿ ಮಾಡಿದ್ದರು. ಆದರೆ, ಸ್ಪೀಕರ್ ಒಪ್ಪಿರಲಿಲ್ಲ.

ಸದ್ಯ ಭಾನುವಾರ ನಡೆದ ಸಭೆಯಲ್ಲಿ ಸಿಎಂ, ಡಿಸಿಎಂ, ವಿರೋಧ ಪಕ್ಷದ ನಾಯಕ, ಉಪ ಸಭಾಧ್ಯಕ್ಷರು, ಸಚಿವರುಗಳು ಭಾಗವಹಿಸಿದ್ದು, ಈ ವೇಳೆ ಅಮಾನತು ರದ್ದು ಮಾಡುವ ನಿರ್ಧಾರ ಕೈಗೊಂಡಿದ್ದಾರೆ.

### ಏನೆಲ್ಲಾ ನಿರ್ಬಂಧ ವಿಧಿಸಲಾಗಿತ್ತು

- ವಿಧಾನಸಭೆಯ ಸಭಾಂಗಣ, ಲಾಬಿ ಮತ್ತು ಗ್ಯಾಲರಿಗಳಿಗೆ ಪ್ರವೇಶಿಸುವಂತಿಲ್ಲ.
- ಸದಸ್ಯರಾಗಿರುವ ವಿಧಾನಮಂಡಲದ/ವಿಧಾನ ಸಭೆಯ ಸ್ಥಾಯಿ ಸಮಿತಿಗಳ ಸಭೆಗಳಲ್ಲಿಯೂ ಭಾಗವಹಿಸುವಂತಿಲ್ಲ.
- ಕಾರ್ಯಕಲಾಪಗಳ ಪಟ್ಟಿಯಲ್ಲಿ ಹೆಸರಿನಲ್ಲಿ ಯಾವುದೇ ವಿಷಯವನ್ನು ನಮೂದು ಮಾಡತಕ್ಕದಲ್ಲ.
- ಅಮಾನತ್ತಿನ ಅವಧಿಯಲ್ಲಿ ನೀಡುವ ಯಾವುದೇ ಸೂಚನೆಗಳನ್ನು ಸ್ವೀಕರಿಸಲಾಗುವುದಿಲ್ಲ.

# ಕರ್ನಾಟಕದ 6 ಜಿಲ್ಲೆಗಳಲ್ಲಿ ಕೊರೋನಾ ಸೋಂಕು ಪತ್ತೆ! ಟೆಸ್ಟ್ ಕಡ್ಡಾಯ

● ಬೆಂಗಳೂರು ಹೊರತುಪಡಿಸಿ ಇತರೆ 5 ಜಿಲ್ಲೆಗಳಲ್ಲಿ ಸೋಂಕು ದೃಢ ● ಉಸಿರಾಟ ಸಮಸ್ಯೆಯಿರುವವರಿಗೆ ಟೆಸ್ಟ್ ಕಡ್ಡಾಯ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕದಲ್ಲಿ ಕೊರೋನಾ ಸೋಂಕು ಮತ್ತೆ ಕಾಣಿಸಿಕೊಂಡಿದ್ದು, ಬೆಂಗಳೂರಿಗಷ್ಟೇ ಸೀಮಿತವಾಗಿಲ್ಲ. ರಾಜ್ಯದ ಇತರೆ 5 ಜಿಲ್ಲೆಗಳಿಗೆ ಹರಡಿದೆ. ಸದ್ಯ 6 ಜಿಲ್ಲೆಗಳಲ್ಲಿ ಪಾಸಿಟಿವ್ ಕೇಸ್‌ಗಳಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ. ಆರೋಗ್ಯ ಇಲಾಖೆ ನೀಡಿರುವ ಅಂಕಿ ಅಂಶ ಪ್ರಕಾರ, ಕರ್ನಾಟಕದಲ್ಲಿ 38 ಕೊರೋನಾ ಕೇಸ್‌ಗಳು ದೃಢಪಟ್ಟಿವೆ. ಒಬ್ಬರು ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದು, ಬೆಂಗಳೂರಿನಲ್ಲಿ ವಯೋವೃದ್ಧರೊಬ್ಬರು ಮೃತಪಟ್ಟಿದ್ದಾರೆ.

**ತೀವ್ರ ಉಳಿಸಿರಾಟ ಸಮಸ್ಯೆ ಇದ್ದವರಿಗೆ ಕೋವಿಡ್ ಪರೀಕ್ಷೆ ದೃಢ:** ರಾಜ್ಯದಲ್ಲಿ ಕೋವಿಡ್ ಸೋಂಕಿತ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಾರಿ ಹಾಗೂ ಉಸಿರಾಟದ ಸಮಸ್ಯೆಯಿಂದ ಬಳಲುತ್ತಿರುವವರನ್ನು ಕಡ್ಡಾಯವಾಗಿ ಕೋವಿಡ್ ಪರೀಕ್ಷೆಗೆ ಒಳಪಡಿಸಲು ಸೂಚಿಸಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ಕೋವಿಡ್ ತಾಂತ್ರಿಕ ಸಮಿತಿಯೊಂದಿಗೆ ಸಭೆ ನಡೆಸಿ, ರಾಜ್ಯದಲ್ಲಿ ಕಂಡುಬಂದಿರುವ ಕೋವಿಡ್ ಪ್ರಕರಣಗಳ ಕುರಿತು ಚರ್ಚಿಸಲಾಯಿತು. ಸೋಂಕು ತಡೆಗೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡಿದ್ದೇವೆ. ಕೇಂದ್ರ ಸರಕಾರದೊಂದಿಗೂ ಸಂಪರ್ಕದಲ್ಲಿದ್ದೇವೆ. ದೇಶದಲ್ಲಿ ಒಟ್ಟು 257 ಕೊರೋನಾ ಸೋಂಕಿತ ಪ್ರಕರಣ ದಾಖಲಾಗಿವೆ. ಉಸಿರಾಟ ಹಾಗೂ ಹೃದಯ ಸಂಬಂಧಿ ಕಾಯಿಲೆಯಿಂದಾಗಿ ಆಸ್ಪತ್ರೆಗೆ ದಾಖಲಾಗಿರುವವರ ಮಾದರಿ ಸಂಗ್ರಹಿಸಿ, ಕಡ್ಡಾಯವಾಗಿ ಕೋವಿಡ್ ಪರೀಕ್ಷೆಗೊಳಪಡಿಸಲು ಆಸ್ಪತ್ರೆಗಳಿಗೆ ಸೂಚನೆ ನೀಡಲಾಗಿದೆ, ಎಂದು ಹೇಳಿದರು.

**257 ಕೊರೋನಾ ಸೋಂಕಿತ ಪ್ರಕರಣ**



**ಕೊಂಚ ಏರಿಕೆಯಾಗಿದೆ ಎಂದ ಆರೋಗ್ಯ ಸಚಿವ;** ಒಂದು ತಿಂಗಳಿಗೆ ಬೇಕಾಗುವಷ್ಟು ಪರೀಕ್ಷಾ ಕಿಟ್‌ಗಳನ್ನು ಸಿದ್ಧಪಡಿಸಿಟ್ಟುಕೊಳ್ಳಲಾಗುವುದು. ಅಗತ್ಯವಿದ್ದಾಗ ಮಾತ್ರ ಕೋವಿಡ್ ಪರೀಕ್ಷೆ ಮಾಡಲಾಗುವುದು. ರಾಜ್ಯದಲ್ಲಿ ಕಳೆದ ಒಂದು ವಾರದಲ್ಲಿ ಕೋವಿಡ್ ಸೋಂಕಿತ ಪ್ರಕರಣಗಳಲ್ಲಿ ಕೊಂಚ ಏರಿಕೆ ಕಂಡಿದ್ದು, ಒಟ್ಟು 35 ಮಂದಿ ಸೋಂಕಿತರು ಪತ್ತೆಯಾಗಿದ್ದಾರೆ. ಬೆಂಗಳೂರಿನಲ್ಲಿಯೇ 32 ಪ್ರಕರಣಗಳು ವರದಿಯಾಗಿವೆ. ಕೋವಿಡ್ ಸೋಂಕಿನ ಬಗ್ಗೆ ಜನರು ಆತಂಕ ಪಡುವ ಅಗತ್ಯವಿಲ್ಲ.

| ಯಾವ ಜಿಲ್ಲೆಯಲ್ಲಿ ಎಷ್ಟು ಸಕ್ರಿಯ ಕೇಸ್ | |
|---|---|
| ಬೆಂಗಳೂರು | 32 |
| ಮೈಸೂರು | 2 |
| ಬೆಂಗಳೂರು ಗ್ರಾಮಾಂತರ | 1 |
| ದಕ್ಷಿಣ ಕನ್ನಡ | 1 |
| ವಿಜಯಪುರ | 1 |
| ಬಳ್ಳಾರಿ | 1 |

ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯಿಂದ ಅಗತ್ಯ ಮಾರ್ಗಸೂಚಿ ಹೊರಡಿಸಲಾಗಿದೆ, ಎಂದರು.

ಆರೋಗ್ಯ ಇಲಾಖೆಯ ಮಾರ್ಗಸೂಚಿಯಂತೆ ಮುಂಜಾಗ್ರತಾ ಕ್ರಮಗಳನ್ನು ಪಾಲಿಸಬೇಕು. ಸದ್ಯ ಮಾಸ್ಕ್ ಧರಿಸುವುದನ್ನು ಕಡ್ಡಾಯಗೊಳಿಸಿಲ್ಲ. ಬಾಣಂತಿಯರು ಹಾಗೂ ಗರ್ಭಿಣಿಯರಿಗೆ ಮಾಸ್ಕ್ ಧರಿಸುವಂತೆ ಸೂಚಿಸಲಾಗಿದೆ.

ಸ್ವಚ್ಛತೆಗಾಗಿ ಸ್ಯಾನಿಟೈಸರ್ ಬಳಸಬೇಕು. ಸಾರ್ವಜನಿಕರ ಪ್ರಯಾಣಕ್ಕೆ ಯಾವುದೇ ಅಡ್ಡಿಯಿಲ್ಲ. ಎಂದಿನಂತೆ ಸಹಜವಾಗಿ ಜೀವನ ಸಾಗಿಸಬಹುದಾಗಿದೆ, ಎಂದು ಹೇಳಿದರು.

**ಈ ದಿನದ ದರ** | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,808/Gram24ct ₹8,990/Gram22ct | ಬೆಳ್ಳಿ: ₹99.90/Gram

## ಗಜೇಂದ್ರ ಮೋಕ್ಷ (ಪ್ರವಚನ)



• ಉದಯವಾಹಿನಿ, ಬೆಂಗಳೂರು

ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ಮೇ 26 ರಿಂದ 31ರ ವರೆಗೆ ಪ್ರತಿದಿನ ಸಂಜೆ 6-30ಕ್ಕೆ ಶ್ರೀ ಹನುಮೇಶಾಚಾರ್ಯರಿಂದ ಗಜೇಂದ್ರ ಮೋಕ್ಷ ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ, ಮಲ್ಲೇಶ್ವರಂ, ಬೆಂಗಳೂರು-560003

## ಮಲ್ಲೇಶ್ವರಂ, ರಾಜಾಜಿನಗರದ ಇಬ್ಬರಿಗೆ ಕೊರೋನಾ ಪಾಸಿಟಿವ್

• ಉದಯವಾಹಿನಿ, ಬೆಂಗಳೂರು

ಮಹಾಮಾರಿ ಕೊರೋನಾ ರಾಜ್ಯಕ್ಕೆ ಮತ್ತೆ ವಕ್ಕರಿಸಿಕೊಂಡಿದ್ದು, ಮಲ್ಲೇಶ್ವರಂ, ರಾಜಾಜಿನಗರದ ಇಬ್ಬರಿಗೆ ಕೋವಿಡ್ ಪಾಸಿಟಿವ್ ಕಾಣಿಸಿದೆ. ಮಲ್ಲೇಶ್ವರಂನ 45 ವರ್ಷದ ವ್ಯಕ್ತಿಗೆ, ರಾಜಾಜಿನಗರದ 38 ವರ್ಷದ ವ್ಯಕ್ತಿಗೆ ಕೊರೋನಾ ಪಾಸಿಟಿವ್ ಕಾಣಿಸಿಕೊಂಡಿದೆ. ಯಾವುದೇ ಟ್ರಾವೆಲ್ ಹಿಸ್ಟರಿ ಇಲ್ಲದೇ ಇವರಿಬ್ಬರಿಗೂ ಕೋವಿಡ್ ಕಾಣಿಸಿ ಕೊಂಡಿದ್ದು, ಇಬ್ಬರನ್ನು ಹೋಂ ಐಸೋಲೇಷನ್‌ನಲ್ಲಿ ಇರಿಸಲಾಗಿದೆ. ಬೆಂಗಳೂರಿನಲ್ಲಿ ವೈಟ್‌ಫೀಲ್ಡ್‌ನ 84 ವರ್ಷದ ವೃದ್ಧ ಮೇ 17ರಂದು ಕೊರೋನಾಗೆ ಬಲಿಯಾಗಿದ್ದಾರೆ.

ಮೇ 13ರಂದು ಆಸ್ಪತ್ರೆಗೆ ದಾಖಲಾಗಿದ್ದ ಅವರು, ಕೊರೋನಾಗೆ ತುತ್ತಾಗಿ ಮೃತಪಟ್ಟಿದ್ದಾರೆ. ರಾಜ್ಯದಲ್ಲಿ ಒಟ್ಟು 38 ಸಕ್ರಿಯ ಕೋವಿಡ್ ಕೇಸ್ ಇವೆ. ಬೆಂಗಳೂರಿನಲ್ಲಿ 9 ತಿಂಗಳ ಮಗು ಸೇರಿ ಒಟ್ಟು ಮೂರು ಜನ ಮಕ್ಕಳಿಗೆ ಕೋವಿಡ್ ಪಾಸಿಟಿವ್‌ಬಂದಿದೆ. ಸದ್ಯ ಎಲ್ಲಾ ಮಕ್ಕಳು ಆರೋಗ್ಯವಾಗಿದ್ದಾರೆ ಎಂದು ತಿಳಿದು ಬಂದಿದೆ. ರಾಜ್ಯದಲ್ಲಿ 108 ಮಂದಿಗೆ ಕೊರೋನಾ ಟೆಸ್ಟ್ ಮಾಡಲಾಗಿದ್ದು, ಈ ಪೈಕಿ ಐವರಿಗೆ ಕೋವಿಡ್ ಬಂದಿದೆ. ಬೆಂಗಳೂರಲ್ಲಿ 2, ಮೈಸೂರು 2 ಹಾಗೂ ವಿಜಯನಗರದಲ್ಲಿ ಒಂದು ಕೋವಿಡ್ ಕೇಸ್ ಪತ್ತೆಯಾಗಿತ್ತು.

## ಸೂಕ್ಷ್ಮಗಳನ್ನು ಸೆರೆ ಹಿಡಿಯುವ ಸ್ತ್ರೀ ಬರಹಗಾರರು: ವಿಮರ್ಶಕ ಬಸವರಾಜ ಕಲ್ಲುಡಿ

• ಉದಯವಾಹಿನಿ, ಬೆಂಗಳೂರು

ಕಳೆದೊಂದು ದಶಕದಿಂದ ಅತ್ಯಂತ ಸಂಕೀರ್ಣವಾಗಿ ಜನಜೀವನದ ಹಲವು ಸೂಕ್ಷ್ಮಗಳನ್ನು ಸೆರೆ ಹಿಡಿಯುತ್ತಿರುವವರು ಸ್ತ್ರೀ ಬರಹಗಾರರು ಎಂದು ವಿಮರ್ಶಕ ಬಸವರಾಜ ಕಲ್ಲುಡಿ ಅಭಿಮತ ವ್ಯಕ್ತಪಡಿಸಿದರು.ಬಹುರೂಪಿ ಸಂಸ್ಥೆ ನಗರದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಕಾರ್ಯನಿರ್ವಾಹಕ ಸಂಪಾದಕ ರವೀಂದ್ರ ಭಟ್ಟ ಅವರ ಬರೆಯದ ಕತೆಗಳು ಹಾಗೂ ಪತ್ರಕರ್ತೆ ಭಾರತಿ ಹೆಗಡೆ ಅವರ ಉಪ್ಪಾಗೆ ಹರಳು' ಪುಸ್ತಕ ಬಿಡುಗಡೆ ಮಾಡಿ, ಮಾತನಾಡಿದರು. ಹಿಂದಿನ ಸ್ತ್ರೀ ಬರಹಗಾರರಿಗೂ ಈಗಿನ ಬರಹಗಾರರಿಗೂ ವ್ಯತ್ಯಾಸವಿದೆ. ಹಿಂದೆ ಕ್ರಾಂತಿಕಾರಿ ಕಥನ ಮಾದರಿಯನ್ನು ಅನುಸರಿಸಲಾಗುತ್ತಿತ್ತು. ಕಾಲ ಬದಲಾದಂತೆ ಆ ಬರಹದ ಮಿತಿಗಳನ್ನು ತಿಳಿದ ಲೇಖಕಿಯರು, ಜನಜೀವನದ ಹಲವು ಸೂಕ್ಷ್ಮಗಳನ್ನು ಅಕ್ಷರ ರೂಪಕ್ಕೆ ತರುತ್ತಿದ್ದಾರೆ.

ಬಂಗಾಳಿ ಲೇಖಕಿ ಮಹಾಶ್ವೇತಾ ದೇವಿ ಅವರ ಆಯಾಮಗಳು ಕನ್ನಡ ಬರಹಗಾರ್ತಿಯರಲ್ಲಿ ಬರುವ ಕಾಲ ದೂರವಿಲ್ಲ ಎಂದು ಹೇಳಿದರು. ಬರೆಯದ ಕತೆಗಳು ಕೃತಿಯ ಬಗ್ಗೆ ಮಾತನಾಡಿದ ಲೇಖಕಿ ಡಾ. ವಸುಂಧರ ಭೂಪತಿ, ಕನ್ನಡಕ್ಕೆ ಈ ರೀತಿಯ ಬರಹ ಹೊಸದು. ಲೇಖಕರು ಸುದ್ದಿ, ಸಂದರ್ಶನಕ್ಕೆ ಹೋದಾಗ ಸ್ಥಳದಲ್ಲಿ ನಡೆದ ಘಟನೆಗಳನ್ನು ವಿವರಿಸಿದ್ದಾರೆ. ಕಿರಿದಾದ ಕತೆಗಳಲ್ಲಿ ಹಿರಿದಾದ ಅರ್ಥಗಳಿವೆ. ನೀತಿ ಕೂಡ ಹೊಂದಿದ್ದು, ಸರಳವಾಗಿ ನಿರೂಪಿಸಲಾಗಿದೆ' ಎಂದು ಹೇಳಿದ ಅವರು, ಪುಸ್ತಕದಲ್ಲಿ ಬರುವ ಕೆಲ ಘಟನೆಗಳನ್ನು ಸ್ಮರಿಸಿಕೊಂಡರು.

## ಐಪಿಎಸ್ ಅಧಿಕಾರಿ ಅಲೋಕ್ ಕುಮಾರ್ ವಿರುದ್ಧದ ನೋಟಿಸ್‌ಗೆ ಸಿಬಿಐ ತಡೆ!

• ಉದಯವಾಹಿನಿ, ಬೆಂಗಳೂರು

2019ರ ಆಡಿಯೋ ಲೀಕ್ ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರಾಗಿರುವ ಹಿರಿಯ ಐಪಿಎಸ್ ಅಧಿಕಾರಿ ಅಲೋಕ್ ಕುಮಾರ್ ಅವರ ವಿರುದ್ಧ ಇಲಾಖಾ ತನಿಖೆಗೆ ಸೂಚಿಸಿ ಮುಖ್ಯ ಕಾರ್ಯದರ್ಶಿ ನೀಡಿದ್ದ ನೋಟಿಸ್‌ಗೆ ಕೇಂದ್ರೀಯ ಆಡಳಿತ ನ್ಯಾಯಮಂಡಳಿ ತಡೆ ನೀಡಿದೆ. ಮಾಹಿತಿ ಹಕ್ಕು ಕಾಯಿದೆಯಡಿ ರಾಜ್ಯ ಸರ್ಕಾರವು 2024 ರ ಮೇ 6 ರಂದು ನೀಡಿದ ಉತ್ತರದ ಪ್ರಕಾರ ಇಲಾಖಾ ತನಿಖೆಯನ್ನು ಈಗಾಗಲೇ ಕೈಬಿಡಲಾಗಿದೆ. ಕೇಂದ್ರೀಯ ತನಿಖಾ ದಳ (ಸಿಬಿಐ) ಕೂಡ ಈ ಪ್ರಕರಣದಲ್ಲಿ 'ಬಿ' ರಿಪೋರ್ಟ್ ಸಲ್ಲಿಸಿದೆ. ಆಡಿಯೋ ಲೀಕ್ ಗೆ ಸಂಬಂಧಿಸಿದಂತೆ ತನ್ನ ವಿರುದ್ಧ ಯಾವುದೇ ಸಾಕ್ಷ್ಯಾಧಾರಗಳಿಲ್ಲ ಎಂದು ಸಿಬಿಐ ನಿರ್ಣಾಯಕವಾಗಿ ದೃಢಪಡಿಸಿದೆ ಎಂದು ಅಲೋಕ್ ಕುಮಾರ್ ವಾದಿಸಿದ್ದಾರೆ. ಡಿಜಿಪಿ ಹುದ್ದೆಗೆ ಮುಂಬಡ್ತಿ ನೀಡಲು ಇಲಾಖಾ ಬಡ್ತಿ ಸಮಿತಿ ತನ್ನ ಹೆಸರನ್ನು ಅಂತಿಮಗೊಳಿಸಬೇಕಾಗಿದ್ದ ಕೆಲ ದಿನಗಳ ಮುನ್ನಾ 1969ರ ಅಖಿಲ ಭಾರತ ಸೇವೆಗಳ (ಶಿಸ್ತು ಮತ್ತು ಮೇಲ್ಮನವಿ) ನಿಯಮ 8(4)ರ ಅಡಿಯಲ್ಲಿ 2025ರ ಮೇ 9ರಂದು ಅಧಿಸೂಚನೆ ಹೊರಡಿಸಲಾಗಿದೆ. ಡಿಜಿ, ಐಜಿಪಿ ಹುದ್ದೆಗೆ ಪರಿಗಣಿಸಲು ಕೇಂದ್ರ ಲೋಕಸೇವಾ ಆಯೋಗಕ್ಕೆ ರವಾನಿಸಲು ಏಪ್ರಿಲ್ 23, 2025 ರಂದು ನನ್ನ ವಿವರಗಳನ್ನು ತೆಗೆದುಕೊಂಡ ನಂತರ ಈ ನೋಟಿಸ್ ನೀಡಲಾಗಿದೆ ಎಂದು ಅಲೋಕ್ ಕುಮಾರ್ ಆರೋಪಿಸಿದ್ದಾರೆ. ಇದೇ ಆರೋಪದ ಮೇಲೆ ಹಿಂದೆ ಇಲಾಖಾ ವಿಚಾರಣೆಯನ್ನು ಆರಂಭಿಸಲಾಗಿತ್ತು.

## ವಿಭೂತಿಪುರ ಕೆರೆಯಲ್ಲಿ ಆಫ್ರಿಕನ್ ಕ್ಯಾಟ್ ಫಿಶ್; ಪುನಶ್ಚೇತನಕ್ಕೆ ಭಾರಿ ಹಿನ್ನಡೆ!

• ಉದಯವಾಹಿನಿ, ಬೆಂಗಳೂರು

ಮುಂಗಾರು ಪೂರ್ವ ಮಳೆಯ ಹಿನ್ನೆಲೆಯಲ್ಲಿ ಮಹಾದೇವಪುರ ವಲಯದ ಸುಮಾರು 45 ಎಕರೆ ವಿಸ್ತೀರ್ಣದ ವಿಭೂತಿಪುರ ಕೆರೆಯಲ್ಲಿ ಆಫ್ರಿಕನ್ ಕ್ಯಾಟ್ ಫಿಶ್ ಕಂಡುಬಂದಿವೆ. ಇದರಿಂದ ಕೆರೆಯ ಪುನಶ್ಚೇತನಕ್ಕೆ ಭಾರಿ ಹಿನ್ನಡೆಯಾಗಿದೆ. ಈಗಾಗಲೇ ಕೆರೆ ಮತ್ತು ಬಫರ್ ಝೋನ್ ಒತ್ತುವರಿ ಮಾಡಲಾಗಿದೆ ಎಂದು ಹೇಳುತ್ತಿದ್ದ ವಾಯುವಿಹಾರಿ ಮತ್ತು ಕೆರೆ ಸಂರಕ್ಷಣೆ ಕಾರ್ಯಕರ್ತರು, ಈಗ ಮಳೆಯಿಂದಾಗಿ ಕೆರೆಗೆ ಕೊಳಕು ನೀರು ನುಗ್ಗಿದ್ದು, ನಿಷೇಧಿತ ಆಫ್ರಿಕನ್ ಕ್ಯಾಟ್ ಫಿಶ್‌ಗಳು ಕೆರೆಯಲ್ಲಿ ಬಿಡುಬಿಟ್ಟಿರುವುದಾಗಿ ತಿಳಿಸಿದ್ದಾರೆ. ವಾಯು ವಿಹಾರಿ ರವಿಕುಮಾರ್ ಮಾತನಾಡಿ, ಹತ್ತು ದಿನಗಳ ಹಿಂದೆ ಕೆರೆಯಲ್ಲಿ ನೀರಿನ ಪ್ರಮಾಣ ಕಡಿಮೆ ಇದ್ದಾಗ ಈ ಮೀನುಗಳು ಸಣ್ಣ ಜಾಗಗಳಲ್ಲಿ ಕಂಡುಬರುತ್ತಿದ್ದವು. ಆದರೆ ಮಳೆಯ ನಂತರ ಕೆರೆ ತುಂಬೆಲ್ಲಾ ಕಾಣಸಿಗುತ್ತಿವೆ ಎಂದರು. ಕಳೆದ ವರ್ಷ ಕೆರೆಯ ಕಳಪೆ ನಿರ್ವಹಣೆ, ಅತಿಕ್ರಮಣ ಕುರಿತು ಲೋಕಾಯುಕ್ತರ ಗಮನಕ್ಕೆ ತಂದಿದ್ದ ಸತ್ಯವಾಣಿ ಶ್ರೀಧರ್ ಮಾತನಾಡಿ, ಏಪ್ರಿಲ್ ಆರಂಭದವರೆಗೂ ಅಧಿಕಾರಿಗಳು ಹೂಳು ತೆಗೆಯುತ್ತಿದ್ದರು, ಭಾರಿ ಮಳೆಗೆ ಇಡೀ ಕೆರೆಯಲ್ಲಿ ಗಲೀಜು ನೀರು ತುಂಬಿದ್ದು, ಈಗ ಈ ಮಾರಣಾಂತಿಕ ಮೀನುಗಳನ್ನು ಹೊರಗೆ ತೆಗೆಯುವುದು ಕಷ್ಟ ಎಂದು ತಿಳಿಸಿದರು. ಆಫ್ರಿಕನ್ ಕ್ಯಾಟ್ ಫಿಶ್' ಅಪಾಯಕಾರಿ ಜಾತಿಗಳಾಗಿದ್ದು, ಸ್ಥಳೀಯ ಜಾತಿಯ ಮೀನುಗಳ ಬೆಳವಣಿಗೆಗೆ ಅವಕಾಶ ನೀಡುವುದಿಲ್ಲ. ಇವು ಹೊಟ್ಟೆಬಾಕತನದ ಮೀನುಗಳು ಎಂದು ಖ್ಯಾತ ಪರಿಸರ ತಜ್ಞ ಡಾ.ಯಲ್ಲಪ್ಪ ರೆಡ್ಡಿ ಹೇಳಿದ್ದಾರೆ. ಈ ಜಾತಿಯ ಮೀನುಗಳು ಕೆರೆ ವ್ಯವಸ್ಥೆಯನ್ನು ಹಾಳುಮಾಡುತ್ತವೆ. ಇವುಗಳು ಸ್ಥಳೀಯ ಮೀನುಗಳನ್ನು ತಿನ್ನುವುದರಿಂದ ವಲಸೆ ಹಕ್ಕಿಗಳ ಮೇಲೆ ಪರಿಣಾಮ ಬೀರುತ್ತದೆ. ಪಕ್ಷಿಗಳಿಗೆ ಮೀನು ಸಿಗದಿದ್ದರೆ ಹೊಸ ಆವಾಸಸ್ಥಾನವನ್ನು ಹುಡುಕುತ್ತವೆ. ಇಂತಹ ಮೀನುಗಳನ್ನು ಮುಂಬೈನಲ್ಲಿ ಸ್ಥಳೀಯ ಮೀನುಗಾರರು ಮಾರಾಟ ಮಾಡುತ್ತಾರೆ ಮತ್ತು ಅದು ಜೀವಂತವಾಗಿದ್ದರೆ, ಹೆಚ್ಚಿನ ಆದಾಯವನ್ನು ಪಡೆಯುತ್ತದೆ ಎಂದು ಅವರು ಹೇಳಿದರು.

# ಜೂ.1 ರಿಂದ ಸಾರ್ವಜನಿಕರಿಗೆ ಪ್ರವೇಶ, ಶುಲ್ಕ ಪ್ರಕಟ

## ಪ್ರವಾಸೋದ್ಯಮ ಸಚಿವ ಎಚ್. ಕೆ. ಪಾಟೀಲ್, ಗೈಡೆಡ್ ಟೂರ್ ಅನ್ನು ಬಹಳ ಚಿಂತನೆ ಮಾಡಿ ಆರಂಭ

• ಉದಯವಾಹಿನಿ, ಬೆಂಗಳೂರು



**ವಿಧಾನಸೌಧ ಗೈಡೆಡ್ ಟೂರ್‌ಗೆ ಚಾಲನೆ**

ಇತಿಹಾಸದಲ್ಲಿಯೇ ಪ್ರಪ್ರಥಮ ಬಾರಿಗೆ ವಿಧಾನಸಭೆಯ ಸಭಾಂಗಣದ ವೀಕ್ಷಣೆಗೆ ಸಾರ್ವಜನಿಕರಿಗೆ ಅವಕಾಶ ಮಾಡಿ ಕೊಡಲಾಗುತ್ತಿದೆ. ಪ್ರವಾಸೋದ್ಯಮ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯಿಂದ ವಿಧಾನಸೌಧ ಗೈಡೆಡ್ ಟೂರ್‌ಗೆ ಚಾಲನೆ ನೀಡಲಾಯಿತು.

ಸಮಾರಂಭದಲ್ಲಿ ಮಾತನಾಡಿದ ಪ್ರವಾಸೋದ್ಯಮ ಸಚಿವ ಎಚ್. ಕೆ. ಪಾಟೀಲ್, ಗೈಡೆಡ್ ಟೂರ್ ಅನ್ನು ಬಹಳ ಚಿಂತನೆ ಮಾಡಿ ಆರಂಭಿಸಲಾಗುತ್ತಿದೆ. ಇಂದಿನಿಂದ ವಿಧಾನಸೌಧ ಕಟ್ಟಡ ಸಾರ್ವಜನಿಕರ ಪ್ರವಾಸಕ್ಕೆ ಮುಕ್ತವಾಗಿದೆ. ಜಗತ್ತಿನಲ್ಲೇ ಅತ್ಯಂತ ಸುಂದರ ಕಟ್ಟಡ ವಿಧಾನಸೌಧವಾಗಿದ್ದು, ಪ್ರಜಾಪ್ರಭುತ್ವದ ದೇಗುಲ. ಆಸಕ್ತರಿಗೆ, ವಿದ್ಯಾರ್ಥಿಗಳಿಗೆ, ಜನರಿಗೆ ಇದರ ದರ್ಶನ ಮಾಡಿಸುವ ಉದ್ದೇಶ ಹೊಂದಲಾಗಿದೆ ಎಂದು ತಿಳಿಸಿದರು. ಗೈಡೆಡ್ ಟೂರ್ ಮನರಂಜನೆಯ ಪ್ರವಾಸ ಅಲ್ಲ.

ಇಲ್ಲಿಗೆ ಬಂದವರು ಜ್ಞಾನ ಪಡೆದು ಹೋಗಬೇಕು, ತಮ್ಮ ಕನಸುಗಳಿಗೆ ಚುರುಕು ಕೊಡಬೇಕು, ಪ್ರಜಾಪ್ರಭುತ್ವ ಗಟ್ಟಿ ಮಾಡುವ ಛಲ ಬರಬೇಕು. ಒಮ್ಮೆ ಸುತ್ತಿ ಬರೋಣ ಅಂತ ಇಲ್ಲಿಗೆ ಬರೋದಲ್ಲ ಎಂದು ಅವರು ಎಚ್ಚರಿಕೆ ನೀಡಿದರು. ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಹಿಂದೆ ನಾವು ವಿದ್ಯಾರ್ಥಿಗಳಾಗಿದ್ದಾಗ ವಿಧಾನಸೌಧ ನೋಡಲು ಬಂದಿದ್ದೆವು. ಆಗ ಪಾಸ್ ಕೇಳಿದ್ವಿ ಆದರೆ ಪಾಸ್ ಕೊಡಲು ನಿರಾಕರಿಸಿದರು. ಯಾಕೆ ಅಂದರೆ ನೀವೇ ಬಸವರಾಜ ಹೊರಟ್ಟಿ ಅನ್ನೋದಕ್ಕೆ ಏನು ಸಾಕ್ಷಿ ಅಂದರು. ಯಾವುದಾದರೂ ಐಡೆಂಟಿಟಿ ಕಾರ್ಡ್ ಕೇಳಿದರು ಇಲ್ಲ ಅಂದೆ. ಅದಕ್ಕೆ ಪಾಸ್ ಕೊಡಲೇ ಇಲ್ಲ. ಬಳಿಕ ಮತ್ತೊಬ್ಬರ ಮೂಲಕ ಪಾಸ್ ತೆಗೆದುಕೊಂಡು ವಿಧಾನಸೌಧ ನೋಡಿದೆವು. ಬಳಿಕ ಶಾಸಕರಾದ್ರೆ ಮಾತ್ರ ಇಲ್ಲಿಗೆ ಬರಲು ಸಾಧ್ಯ ಎಂದು ಹೇಳಿದ್ದರು ಎಂದು ಹಳೆಯ ನೆನಪು ಮೆಲುಕು ಹಾಕಿದರು.

**ರಾಜಕೀಯ ಸ್ಟಡಿ ಮಾಡಲು ಪೊಲಿಟಿಕಲ್ ಕಾಲೇಜು ಮಾಡಲು ಚಿಂತನೆ:** ವಿಧಾನಸೌಧದಲ್ಲಿ ಪುಸ್ತಕ ಮೇಳ ಮಾಡಿದ್ದೆವು. ಆಗ ಜನರನ್ನ ಒಳಗೆ ಬಿಟ್ವಿ. ಆದರೆ ಅನೇಕರು ಅದಕ್ಕೆ ವಿರೋಧ ಮಾಡಿದರು.

ವಿಧಾನಸೌಧದ ಬಗ್ಗೆ ಎಲ್ಲರೂ ತಿಳಿಯಲಿ ಎಂಬುದು ನಮ್ಮ ಉದ್ದೇಶವಾಗಿದೆ. ರಾಜಕೀಯ ಸ್ಟಡಿ ಮಾಡಲು ಪೊಲಿಟಿಕಲ್ ಕಾಲೇಜು ಮಾಡಲು ಚಿಂತನೆ ಮಾಡಿದ್ದೇವೆ. ಈ ಬಗ್ಗೆ ಸಿಎಂ ಜೊತೆ ಚರ್ಚೆ ಮಾಡುತ್ತೇವೆ. ಬಂದಿರೋ ಮಕ್ಕಳು ಕಾರ್ಯಕ್ರಮ ನೋಡಿ ಹೋಗ್ತೀರ. ಆದರೆ ರಾಜಕೀಯ ಅಂದ್ರೆ ಏನು ಅಂತ ಸ್ಟಡಿ ಮಾಡಲು ಅನುಕೂಲ ಆಗಲಿದೆ ಎಂದು ಬಸವರಾಜ ಹೊರಟ್ಟಿ ತಿಳಿಸಿದರು.

### ಜೂನ್ 1 ರಿಂದ ಪ್ರಾರಂಭ: ಶುಲ್ಕ ನಿಗದಿ

**ಜೂನ್ 1ರಿಂದ ವಿಧಾನಸೌಧ ಟೂರ್ ಗೈಡ್ ಪ್ರಾರಂಭವಾಗಲಿದೆ. ವಯಸ್ಕರಿಗೆ ರೂ. 50, 16 ವರ್ಷ ಮೇಲ್ಪಟ್ಟ ವಯಸ್ಕರಿಗೆ ರೂ. 50 ಶುಲ್ಕ ನಿಗದಿಪಡಿಸಲಾಗಿದೆ. 15 ವರ್ಷ ಕೆಳಗಿನ ಮಕ್ಕಳಿಗೆ ಉಚಿತ ಪ್ರವೇಶ ಇರಲಿದೆ. ಪ್ರತಿ ಭಾನುವಾರ, 2 ಮತ್ತು 4ನೇ ಶನಿವಾರ ವಿಧಾನಸೌಧ ಟೂರ್ ವ್ಯವಸ್ಥೆ ಇರುತ್ತದೆ. ಬೆಳಗ್ಗೆ 8 ರಿಂದ ಸಂಜೆ 5 ಗಂಟೆಗೆ ಸಮಯ ನಿಗದಿ ಮಾಡಲಾಗಿದೆ. ಇದಕ್ಕಾಗಿ ಆಸಕ್ತರು KSTDC ಆನ್ ಲೈನ್ ಮೂಲಕ ಬುಕ್ ಮಾಡಬೇಕು. 30 ಜನರನ್ನು ಒಳಗೊಂಡ ಗ್ರೂಪ್‌ನ್ನು ಪ್ರತಿ ಪ್ರವಾಸಕ್ಕೆ ನಿಗದಿ ಮಾಡಲಾಗುತ್ತದೆ. ಒಂದು ಗ್ರೂಪ್‌ಗೆ 90 ನಿಮಿಷಗಳ ಅವಧಿ ಇರಲಿದ್ದು, ಒಂದು ದಿನಕ್ಕೆ 300 ಜನರಿಗೆ ಮಾತ್ರ ಪ್ರವೇಶಕ್ಕೆ ಅವಕಾಶ ಇರಲಿದೆ. ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಗೈಡ್ ಮಾಹಿತಿ ನೀಡುವರು. ವಿಧಾನಸೌಧದ ಗೇಟ್ ನಂಬರ್ 3ರಿಂದ ಪ್ರವೇಶ ಕಲ್ಪಿಸಲಾಗುವುದು.**

## ಡೆಲಿವರಿ ಬಾಯ್ ಪ್ರಚೋದಿಸಿ ಪೆಟ್ಟು ತಿಂದ ಬೆಂಗಳೂರು ಉದ್ಯಮಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಮತ್ತೊಂದು ರೋಡ್ ರೇಜ್ ಪ್ರಕರಣ ಬೆಳಕಿಗೆ ಬಂದಿದ್ದು, ಡೆಲಿವರಿ ಬಾಯ್ ಉದ್ಯಮಿ ಮೇಲೆ ಹಲ್ಲೆ ಮಾಡಿರುವ ವಿಡಿಯೋ ವ್ಯಾಪಕ ವೈರಲ್ ಆಗುತ್ತಿದೆ.

ಬೆಂಗಳೂರಿನ ಬಸವೇಶ್ವರನಗರದಲ್ಲಿ ಈ ಘಟನೆ ನಡೆದಿದ್ದು, ವಿಳಾಸ ತಪ್ಪಾಗಿದ್ದಕ್ಕೆ ಸಂಬಂಧಿಸಿದಂತೆ ನಡೆದ ಗಲಾಟೆಯಲ್ಲಿ ಗ್ರಾಹಕನ ಮೇಲೆ ಡೆಲಿವರಿ ಯುವಕ ಹಲ್ಲೆ ನಡೆಸಿದ್ದಾರೆ. ಇದೀಗ ಬಸವೇಶ್ವರನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಡೆಲಿವರಿ ಯುವಕ ವಿಷ್ಣುವರ್ಧನ್ ವಿರುದ್ಧ ಗ್ರಾಹಕ ಶಶಾಂಕ್ ಅವರು ದೂರು ನೀಡಿದ್ದಾರೆ.

ಮೂಲಗಳ ಪ್ರಕಾರ ಮೇ 21ರಂದು ZEPTO ಆ್ಯಪ್‌ವೊಂದರಲ್ಲಿ ಶಶಾಂಕ್ ಅವರ ಪತ್ನಿ ಕೆಲ ವಸ್ತುಗಳನ್ನು ಆರ್ಡರ್ ಮಾಡಿದ್ದರು. ಡೆಲಿವರಿ ಬಾಯ್ ಬಂದಾಗ ಶಶಾಂಕ್ ಅವರ ನಾದಿನಿ ಸಾಮಗ್ರಿ ತೆಗೆದುಕೊಳ್ಳಲು ಮನೆಯಿಂದ ಹೊರಕ್ಕೆ ಬಂದಿದ್ದರು. ಆ ಸಂದರ್ಭದಲ್ಲಿ ವಿಳಾಸ ತಪ್ಪು ನೀಡಿದ್ದೀರಿ ಎಂದು ಡೆಲಿವರಿ ಯುವಕ ಪ್ರಶ್ನೆ ಮಾಡಿದ್ದ. ಇದೇ ವಿಚಾರಕ್ಕೆ ಇಬ್ಬರ ಮಧ್ಯೆ ಮಾತಿನ ಚಕಮಕಿ ನಡೆಯುತ್ತಿತ್ತು. ಇದನ್ನು ಗಮನಿಸಿದ ಶಶಾಂಕ್ ಅವರು ಹೊರಗಡೆ ಬಂದು ಪ್ರಶ್ನೆ ಮಾಡಿ ಡೆಲಿವರಿ ಬಾಯ್ ಮೇಲೆ ಎಗರಾಡಿದ್ದಾರೆ.

ಆಗ ಗಲಾಟೆ ವಿಕೋಪಕ್ಕೆ ತಿರುಗಿ ಇಬ್ಬರೂ ಪರಸ್ಪರ ಕೈಕೈ ಮಿಲಾಯಿಸಿದ್ದಾರೆ. ಹಲ್ಲೆ ನಡೆಸಿದ ದೃಶ್ಯಗಳು ಅದೇ ಮನೆಯಲ್ಲಿ ಅಳವಡಿಸಿದ್ದ ಸಿ.ಸಿ.ಟಿ.ವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಸದ್ಯ ಈ ಘಟನೆ ಕುರಿತು ಶಶಾಂಕ್ ಬಸವೇಶ್ವರನಗರ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು, ಎಫ್‌ಐಆರ್ ದಾಖಲಾಗಿದೆ. ಹಲ್ಲೆಯಿಂದ ಕಣ್ಣಿಗೆ ಗಾಯವಾಗಿದೆ ಎಂದು ಶಶಾಂಕ್ ಆರೋಪಿಸಿದ್ದಾರೆ.

## ಮತ್ತೆ ಟೋಯಿಂಗ್ ಆರಂಭ: ವಾಹನ ಸವಾರರಿಗೆ ಡಿಸಿಎಂ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಬೆಂಗಳೂರಿನಲ್ಲಿ 2022 ರಲ್ಲಿ ಸ್ಥಗಿತಗೊಂಡಿದ್ದ ವಾಹನಗಳ ಟೋಯಿಂಗ್ ಅನ್ನು ಮತ್ತೆ ಆರಂಭವಾಗಲಿದ್ದು, ರಸ್ತೆಯಲ್ಲಿ ಎಲ್ಲೆಂದರಲ್ಲಿ ವಾಹನ ನಿಲ್ಲಿಸುವವರಿಗೆ ಉಪ ಮುಖ್ಯಮಂತ್ರಿ ಡಿಕೆಶಿ ಅವರು ಖಡಕ್ ಎಚ್ಚರಿಕೆ ಕೊಟ್ಟಿದ್ದಾರೆ. ಇಂದು ಸುರಂಗ ರಸ್ತೆ ನಿರ್ಮಾಣ ಹಾಗೂ ಕಾವೇರಿ ಆರತಿ ಕಾರ್ಯಕ್ರಮದ ಪೂರ್ವಭಾವಿ ಸಭೆ ನಡೆಸಿದ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಡಿಸಿಎಂ, ಈ ಹಿಂದೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಸ್ಥಗಿತಗೊಂಡಿದ್ದ ಟೋಯಿಂಗ್ ಮತ್ತೆ ಆರಂಭಿಸುವುದಾಗಿ ಹೇಳಿದ್ದಾರೆ.

ರಸ್ತೆಗಳ ಮೇಲೆ ನಿಲ್ಲಿಸಿದ ವಾಹನಗಳನ್ನು ಟೋಯಿಂಗ್ ಮಾಡುತ್ತೇವೆ. 21 ದಿನಗಳಲ್ಲಿ ಆ ವಾಹನಗಳನ್ನು ಹರಾಜು ಹಾಕುತ್ತೇವೆ ಎಂದು ಡಿಕೆ ಶಿವಕುಮಾರ್ ತಿಳಿಸಿದ್ದಾರೆ.


ವಾಹನ ಟೋಯಿಂಗ್ ವಿರುದ್ಧ ಜನಾಕ್ರೋಶ ವ್ಯಕ್ತವಾದ ಹಿನ್ನೆಲೆಯಲ್ಲಿ 2022ರ ಫೆಬ್ರವರಿಯಲ್ಲಿ ಟೋಯಿಂಗ್ ಬಂದ್ ಆಗಿತ್ತು. ಕೆಲವು ಹೊಸ ನಿಯಮ, ಗೈಡ್ ಲೈನ್ಸ್‌ನೊಂದಿಗೆ ಟೋಯಿಂಗ್ ಪ್ರಾರಂಭಿಸಲಾಗುವುದು ಎಂದು ಈ ಹಿಂದಿನ ಸರ್ಕಾರ ಹೇಳಿತ್ತು. ಆದರೆ, ಮತ್ತೆ ಟೋಯಿಂಗ್ ಪ್ರಾರಂಭವಾಗಿರಲಿಲ್ಲ. ಇದೀಗ ಮತ್ತೆ ಟೋಯಿಂಗ್ ಆರಂಭಿಸುವುದಾಗಿ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿಕೆ ಶಿವಕುಮಾರ್ ಹೇಳಿದ್ದಾರೆ.

### ಟ್ರಾಫಿಕ್ ಸಮಸ್ಯೆಗೆ ಕಡಿವಾಣ

**ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಡೆಯುವ ಮೆಟ್ರೋ ಕಾಮಗಾರಿಗಳ ಪಕ್ಕದಲ್ಲಿ ಸರ್ವೀಸ್ ರಸ್ತೆ ನಿರ್ಮಾಣ ಮಾಡುತ್ತೇವೆ. ಇದರಿಂದ ಟ್ರಾಫಿಕ್ ಸಮಸ್ಯೆ ಕಡಿಮೆಯಾಗುತ್ತದೆ. ಟನಲ್ ರೋಡ್ ನಿರ್ಮಾಣಕ್ಕೆ ಬಿಜೆಪಿ ಮತ್ತು ಜೆಡಿಎಸ್‌ನ ಎಲ್ಲಾ ಶಾಸಕರ ಬೆಂಬಲ ಇದೆ ಎಂದು ಡಿಸಿಎಂ ತಿಳಿಸಿದ್ದಾರೆ.**

## ಬೆಳ್ಳಂದೂರು ಕೆರೆಯಲ್ಲಿ ಮತ್ತೆ ವಿಷಕಾರಿ ನೊರೆ ಹಾವಳಿ: ಅಕ್ಕಪಕ್ಕದ ನಿವಾಸಿಗಳಲ್ಲಿ ಆತಂಕ!

• ಉದಯವಾಹಿನಿ, ಬೆಂಗಳೂರು



ಕೆಲ ವರ್ಷಗಳ ಹಿಂದಷ್ಟೇ ಬೆಳ್ಳಂದೂರು ಕೆರೆಯಲ್ಲಿ ವಿಷಕಾರಿ ನೊರೆ ಕಾಣಿಸಿಕೊಂಡು ರಾಷ್ಟ್ರಮಟ್ಟದಲ್ಲಿ ಸುದ್ದಿಯಾಗಿತ್ತು. ನಂತರ ಕೆರೆ ಸ್ವಚ್ಛ ಮಾಡುವುದಾಗಿ ಹೇಳಲಾಗಿತ್ತು. ಆದರೆ ಇಲ್ಲಿಯವರೆಗೆ ಕೆರೆಯಲ್ಲಿ ಅಭಿವೃದ್ಧಿ ಆಗಲೇ ಇಲ್ಲ. ಇದೀಗ ಮತ್ತೆ ಕೆರೆಯಲ್ಲಿ ನೊರೆ ಕಾಣಿಸಿಕೊಂಡಿದ್ದು ಜನರಲ್ಲಿ ಆತಂಕ ಹೆಚ್ಚಿಸಿದೆ.

ಸಿಲಿಕಾನ್ ಸಿಟಿ ಬೆಂಗಳೂರಲ್ಲಿ ಕೆಲ ದಿನಗಳಿಂದ ಸುರಿಯುತ್ತಿರುವ ಮಳೆಯ ಬಳಿಕ ಬೆಳ್ಳಂದೂರು ಕೆರೆಯಲ್ಲಿ ಭಾರಿ ಪ್ರಮಾಣದಲ್ಲಿ ನೊರೆ ಕಾಣಿಸಿಕೊಳ್ಳುತ್ತಿದೆ. ಕೆರೆಗೆ ನೀರಿನ ಹರಿವು ಹೆಚ್ಚಾಗಿದ್ದರಿಂದ ನೊರೆ ಪ್ರಮಾಣವು ಏರಿಕೆಯಾಗಿದೆಯಂತೆ. ಬೆಳ್ಳಂದೂರು ಕೆರೆ ಕಲುಷಿತವಾಗಿದೆಂದು ಸ್ಥಳೀಯರು ಆತಂಕಗೊಂಡಿದ್ದು, ಕಲುಷಿತ ನೀರು ಕೆರೆಗೆ ಸೇರ್ಪಡೆಯಾದ ಕಾರಣ, ಮಲಿನವಾಗಿ ಕೆರೆ ಕೋಡಿಯಲ್ಲಿ ನೊರೆ ಎದ್ದು, ಗಾಳಿ ಮೂಲಕ ಜನವಸತಿ ಪ್ರದೇಶದ ಕಡೆಗೆ ಹೋಗುತ್ತಿದೆ.

ಬೆಳ್ಳಂದೂರು, ಕರಿಯಮ್ಮ ಅಗ್ರಹಾರ, ಯಮಲೂರು, ಕೆಂಪಾಪುರ, ಚಲಘಟ್ಟ, ನಾಗಸಂದ್ರ ಇಬ್ಬಲೂರು, ದೇವರ ಬೀಸನಹಳ್ಳಿ ಕಾಡುಬೀಸನಹಳ್ಳಿ ಪ್ರದೇಶದ ಜನರಿಗೆ ಮತ್ತೆ ತೊಂದರೆ ಉಂಟಾಗಿದ್ದು, ಪದೇ ಪದೇ ಬೆಳ್ಳಂದೂರು ಕೆರೆಯಲ್ಲಿ ದೊಡ್ಡ ಪ್ರಮಾಣದಲ್ಲಿ ನೊರೆ ಕಾಣಿಸಿಕೊಳ್ಳುತ್ತಿದೆ.

**ಕೆರೆಯಲ್ಲಿ ನೊರೆ ಕಾಣಿಸಿಕೊಳ್ಳಲು ಕಾರಣವೇನು**

ಇನ್ನು ಕೆರೆಯಲ್ಲಿ ನೊರೆ ಕಾಣಿಸಿಕೊಳ್ಳಲು ಕಾರಣ ಏನೆಂದರೆ ಸಂಸ್ಕರಿಸದ ಮಾಲಿನ್ಯಯುಕ್ತ ನೀರನ್ನು ಕೆರೆಗೆ ಬಿಡಲಾಗುತ್ತಿದೆಯಂತೆ. ಈ ಮಾಲಿನ್ಯಯುಕ್ತ ನೀರು ಕೆರೆಯಿಂದ ಹೊರ ಹೋಗಲು ಕನಿಷ್ಠ 10-15 ದಿನಗಳು ಬೇಕಾಗುತ್ತಂತೆ. ಈ ಅವಧಿಯಲ್ಲಿ ಸಾವಯವ ವಸ್ತುಗಳು ಕೆರೆಯ ನೀರಿನಲ್ಲಿ ಆಮ್ಲಜನಕವಿಲ್ಲದೇ ತಳ ಸೇರುತ್ತದೆ. ನಂತರ ಅದು ಕೆಸರಿನ ರೂಪವನ್ನ ಪಡೆಯುತ್ತದೆ. ಭಾರಿ ಮಳೆ ಆದ ಸಂದರ್ಭದಲ್ಲಿ ಅಪಾರ ಪ್ರಮಾಣದ ನೀರು ಹರಿದು ಬರುತ್ತದೆ. ರಾತ್ರಿ ಇಡೀ ಒಳ ಹರಿವಿನ ಪ್ರಮಾಣ ಹೆಚ್ಚಿದಂತೆ ಕೆರೆಯ ಅಡಿಯಲ್ಲಿ ಕೆಸರು ಮತ್ತು ಮಾಲಿನ್ಯದ ನೀರಿನ ಮಂಥನ ಆರಂಭವಾಗುತ್ತದೆ. ಇದು ನೊರೆ ಸೃಷ್ಟಿಯಾಗಲು ವೇದಿಕೆಯನ್ನು ಸೃಷ್ಟಿ ಮಾಡುತ್ತದೆ.

**ಕೆರೆಯ ಆಳದಲ್ಲಿ ಅಲ್ಪ ಪ್ರಮಾಣದ ನೊರೆ ಇರುತ್ತದೆ. ಮಳೆಯಿಂದಾಗಿ ಕೆರೆಯಲ್ಲಿ ಯಾವಾಗ ನೀರಿನ ಪ್ರಮಾಣ ಹೆಚ್ಚುತ್ತಾ ಹೋಗುತ್ತೋ ಆಗ 25 ಅಡಿ ಎತ್ತರದಷ್ಟು ಗಾಳಿ ಗುಳ್ಳೆಗಳು ಹಾರುತ್ತವೆ. ಈ ಗಾಳಿಗುಳ್ಳೆಗಳು ನೊರೆಯನ್ನು ಸೃಷ್ಟಿಸುತ್ತದೆ. ಕೆಲವು ವಿಸರ್ಜಿತ ಘನವಸ್ತುಗಳಲ್ಲಿ ಬ್ಯಾಕ್ಟಿರಿಯಾಗಳೂ ಇರುತ್ತವೆ. ಇವು ಕೂಡ ನೊರೆ ಸೃಷ್ಟಿಯಾಗಲು ಕಾರಣವಾಗುತ್ತದೆ. ಈ ಬಗ್ಗೆ ಮಾತನಾಡಿದ ಸ್ಥಳೀಯ ನಿವಾಸಿ ರಾಮಣ್ಣ, ಈ ನೊರೆಯಿಂದ ಅನಾರೋಗ್ಯದ ಸಮಸ್ಯೆ ಕಾಣಿಸಿಕೊಳ್ಳುತ್ತಿವೆ ಎಂದು ಹೇಳಿದ್ದಾರೆ.**

## ಯೋಜನೆ, ಹೊಣೆಗಾರಿಕೆ ತುರ್ತು ಅಗತ್ಯ

• ಉದಯವಾಹಿನಿ, ಬೆಂಗಳೂರು

ಈ ವಾರದ ಆರಂಭದಲ್ಲಿ ಬೆಂಗಳೂರಿನಲ್ಲಿ ಧಾರಾಕಾರ ಮಳೆ. ಈ ಸಂದರ್ಭದಲ್ಲಿ ಮಂಗಳವಾರ ಮಧ್ಯಾಹ್ನ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸೇರಿದಂತೆ ಕರ್ನಾಟಕದ ಹೆಚ್ಚಿನ ಕಾಂಗ್ರೆಸ್ ನಾಯಕರು, ಬೆಂಗಳೂರಿನಿಂದ ಸುಮಾರು 320 ಕಿ.ಮೀ ದೂರದಲ್ಲಿರುವ ಹೊಸಪೇಟೆಯಲ್ಲಿ ನಡೆದ ಬೃಹತ್ ಸಮಾವೇಶದಲ್ಲಿ ತಮ್ಮ ಕೇಂದ್ರ ನಾಯಕರೊಂದಿಗೆ ವೇದಿಕೆಯನ್ನು ಹಂಚಿಕೊಂಡಿದ್ದರು. ಅವರು ಸರ್ಕಾರದ ಸಾಧನೆಗಳ ಬಗ್ಗೆ ನಿರರ್ಗಳವಾಗಿ ಮಾತನಾಡುತ್ತಾ ಸರ್ಕಾರಕ್ಕೆ ಎರಡು ವರ್ಷವಾದ ಹಿನ್ನೆಲೆಯಲ್ಲಿ ಸಾಧನಾ ಸಮಾವೇಶದಲ್ಲಿ ಭಾಗವಹಿಸಿದ್ದರು.



ಅದೇ ಸಮಯದಲ್ಲಿ, ರಾಜ್ಯ ರಾಜಧಾನಿಯ ಅನೇಕ ಭಾಗಗಳಲ್ಲಿ ಜನರು ಮಳೆಯಿಂದ ಕಂಗೆಟ್ಟು ಹೋಗಿದ್ದರು. ಅನೇಕ ಕಡೆಗಳಲ್ಲಿ ಮನೆಯೊಳಗೆ ನೀರು ನುಗ್ಗಿತ್ತು. ಬೀದಿಗಳು ದೋಣಿಗಳನ್ನು ಸೇವೆಗೆ ಕರೆಸಿಕೊಂಡಿದ್ದವು. ಎಲ್ಲರಲ್ಲೂ ಹತಾಶೆ ಅಸಹಾಯಕತೆಯ ಭಾವನೆ ಇತ್ತು. ಪ್ರವಾಹವು ಮತ್ತೊಮ್ಮೆ ಬಿಬಿಎಂಪಿ ಆಡಳಿತ ಕೊರತೆ ಮತ್ತು ನಗರದ ಯೋಜಿತವಲ್ಲದ ಮತ್ತು ಅನಿಯಂತ್ರಿತ ಬೆಳವಣಿಗೆಯನ್ನು ಎತ್ತಿ ತೋರಿಸುತ್ತದೆ. ಬೆಂಗಳೂರು ನಗರ ರಾಜ್ಯದ ಆರ್ಥಿಕತೆಗೆ ಶಕ್ತಿ ನೀಡುತ್ತದೆ, ಐಟಿ ದೈತ್ಯ ಸಿಟಿ, ರಾಷ್ಟ್ರೀಯ ಖ್ಯಾತಿಯ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಗಳು ಮತ್ತು ಅಭಿವೃದ್ಧಿ ಹೊಂದುತ್ತಿರುವ ಸ್ಟಾರ್ಟ್-ಅಪ್ ಪರಿಸರ ವ್ಯವಸ್ಥೆಗೆ ನೆಲೆಯಾಗಿದೆ. ಆದರೆ ದುರದೃಷ್ಟವಶಾತ್, ವಸತಿ ಪ್ರದೇಶಗಳು ಮತ್ತು ರಸ್ತೆಗಳು ಒತ್ತುವರಿಯಾಗಿ ಮಳೆ ಬಂದಾಗ ಪ್ರವಾಹ ಉಂಟಾಗುತ್ತದೆ.

## ಘನತ್ಯಾಜ್ಯ ನಿರ್ವಹಣಾ ಬಳಕೆದಾರರ ಸೇವಾ ಶುಲ್ಕ ಕೈಬಿಡಬೇಕು

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ಸಂಸ್ಥಾಪಕ ಶ್ರೀಕಾಂತ್ ನರಸಿಂಹನ್ ಹೇಳಿಕೆ**

ಬಿಬಿಎಂಪಿಯು ತ್ಯಾಜ್ಯ ಬಳಕೆದಾರರ ಶುಲ್ಕ ನಿಗದಿಪಡಿಸಿ, ವಸೂಲಿ ಮಾಡುತ್ತಿರುವುದಕ್ಕೆ ಬೆಂಗಳೂರು ನವ ನಿರ್ಮಾಣ ಪಕ್ಷ ತೀವ್ರ ವಿರೋಧ ವ್ಯಕ್ತಪಡಿಸಿದೆ.

ತ್ಯಾಜ್ಯವನ್ನು ಉತ್ಪಾದಿಸದ ಅಥವಾ ಬಿಬಿಎಂಪಿಯ ಸೇವೆ ಪಡೆಯದ ನಾಗರಿಕರಿಗೆ ಘನತ್ಯಾಜ್ಯ ನಿರ್ವಹಣಾ ಬಳಕೆದಾರರ ಶುಲ್ಕ ವಸೂಲಿ ವಿರೋಧಿಸಿ ಶೀರ್ಷಿಕೆಯಡಿ ಆರಂಭಿಸಿರುವ ಅಭಿಯಾನಕ್ಕೆ ನಗರದಾದ್ಯಂತ 2,800 ಕ್ಕೂ ಹೆಚ್ಚು ಜನರು ಬೆಂಬಲ ವ್ಯಕ್ತಪಡಿಸಿದ್ದಾರೆ ಎಂದು ಪಕ್ಷ ಹೇಳಿಕೊಂಡಿದೆ. ಇದು ಶೋಷಣೆಯಾಗಿದ್ದು, ಯಾರು ಪಾವತಿಸಬೇಕು ಮತ್ತು ಯಾರು ಪಾವತಿಸಬಾರದು ಎಂದು ತಿಳಿಯದೆ ಬಿಬಿಎಂಪಿ ಹೇಗೆ ಶುಲ್ಕವನ್ನು ಸಂಗ್ರಹಿಸುತ್ತದೆ ಎಂದು BNP ಸಂಸ್ಥಾಪಕ ಶ್ರೀಕಾಂತ್ ನರಸಿಂಹನ್ ಹೇಳಿದ್ದಾರೆ.

ನಾಗರಿಕರ ತೀವ್ರ ವಿರೋಧದ ನಂತರ ಏಪ್ರಿಲ್ 20, 2025 ರ ಸುಮಾರಿಗೆ ಬೃಹತ್-ತ್ಯಾಜ್ಯ ಉತ್ಪಾದಕರು ಎಂಬ ವಿನಾಯಿತಿಯನ್ನು ಪರಿಚಯಿಸಲಾಗಿದೆ. ಈ ಹೊತ್ತಿಗೆ ಬೃಹತ್ ತ್ಯಾಜ್ಯ ಉತ್ಪಾದಕ ಎಂದು ವರ್ಗೀಕರಿಸಲಾದ ಅಪಾರ್ಟ್‌ಮೆಂಟ್‌ಗಳಲ್ಲಿ ವಾಸಿಸುವ ಸಾವಿರಾರು ನಿವಾಸಿಗಳು ಈಗಾಗಲೇ ಶುಲ್ಕವನ್ನು ಪಾವತಿಸಿದ್ದಾರೆ. ಹಲವರು ದುಪ್ಪಟ್ಟು ಪಾವತಿ ಮಾಡಿದ್ದಾರೆ. ಸಣ್ಣ ಅಪಾರ್ಟ್ಮೆಂಟ್ ಸಂಕೀರ್ಣಗಳನ್ನು (100 ಯೂನಿಟ್‌ಗಳ ಅಡಿಯಲ್ಲಿ) ಬೃಹತ್ ತ್ಯಾಜ್ಯ ಉತ್ಪಾದಕರಾಗಿ ಗುರುತಿಸಲ್ಪಟ್ಟಿಲ್ಲ ಅಥವಾ ಸ್ಪಷ್ಟತೆ ನೀಡಲಾಗಿಲ್ಲ, ಇದು ಮತ್ತೆ ಡಬಲ್ ಬಿಲ್ಲಿಂಗ್‌ಗೆ ಕಾರಣವಾಗುತ್ತದೆ.

ಯಾವುದೇ ತ್ಯಾಜ್ಯವನ್ನು ಉತ್ಪಾದಿಸದಿದ್ದರೂ ಖಾಲಿ ಪ್ಲಾಟ್ ಮಾಲೀಕರಿಗೆ SWM ಶುಲ್ಕವನ್ನು ವಿಧಿಸಲಾಗಿದೆ ಎಂದು ಅವರು ದೂರಿದ್ದಾರೆ. ಘನತ್ಯಾಜ್ಯ ನಿರ್ವಹಣಾ ಬಳಕೆದಾರರ ಸೇವಾ ಶುಲ್ಕ ಕೈಬಿಡಬೇಕು ಈ ವರ್ಷ ತಪ್ಪಾಗಿ ಸಂಗ್ರಹಿಸಿದ ಶುಲ್ಕವನ್ನು ಪೂರ್ಣ ಮರುಪಾವತಿ ಮಾಡಬೇಕು ಎಂದು ಆಗ್ರಹಿಸಿ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಮತ್ತು ಕಂದಾಯ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ಅವರಿಗೆ ಬೆಂಗಳೂರು ನವ ನಿರ್ಮಾಣ ಪಕ್ಷ ಪತ್ರದ ಮೂಲಕ ಒತ್ತಾಯಿಸಿದೆ.

**ಬಿಬಿಎಂಪಿ ತಾನು ಒದಗಿಸದ ಸೇವೆಗಾಗಿ ಜನರಿಗೆ ಬಿಲ್ ನೀಡುವುದು ಹೇಗೆ ಸಮರ್ಥಿಸಿಕೊಳ್ಳುತ್ತದೆ ಯಾವುದೇ ಹೊಣೆಗಾರಿಕೆ ಇಲ್ಲ, ಸಂವಹನವಿಲ್ಲ, ಮೂಲ ತರ್ಕವೂ ಇಲ್ಲದಂತಾಗಿದೆ. ಚುನಾಯಿತ ಬಿಬಿಎಂಪಿ ಕೌನ್ಸಿಲ್ ಇಲ್ಲದೆ, ಸರ್ಕಾರವು ಏಕಪಕ್ಷೀಯವಾಗಿ ಪಾರ್ಕಿಂಗ್ ಶುಲ್ಕ ಮತ್ತು ಕಸ ಬಳಕೆದಾರರ ಶುಲ್ಕದಂತಹ ಹೊಸ ಶುಲ್ಕಗಳನ್ನು ವಿಧಿಸುತ್ತಿದೆ ಎಂದು ಆಡಳಿತ ಮಂಡಳಿಯ ಸದಸ್ಯ ಪೂಂಗೋಥೈ ಪರಮಶಿವನ್ ಹೇಳಿದ್ದಾರೆ.**

# ಪದಾಧಿಕಾರಿಗಳ ಪದಗ್ರಹಣ, ಹಿರಿಯ ಪತ್ರಕರ್ತರಿಗೆ ಸನ್ಮಾನ

## ಪತ್ರಕರ್ತರ ಸಂಘಟನೆ ಮೂಲಕ ಪತ್ರಕರ್ತರ ಸಮಸ್ಯೆಗಳು, ತಾರತಮ್ಯದ ವಿರುದ್ಧ ನಮ್ಮ ಹೋರಾಟ

• ಉದಯವಾಹಿನಿ,ಮಂಡ್ಯ



ಉದಯವಾಹಿನಿ ಚಿತ್ರ

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಮಂಡ್ಯ ಜಿಲ್ಲಾ ಘಟಕ ಉದ್ಘಾಟನೆ, ಪದಾಧಿಕಾರಿಗಳ ಪದಗ್ರಹಣ ಸಮಾರಂಭ. ಉದ್ಯಮಿ, ಸಮಾಜ ಸೇವಕರಾದ ಮಹಾಲಿಂಗಗೌಡ ಮುದ್ದನಘಟ್ಟರವರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಹುಲಿ ಅಮರನಾಥ್ ರವರು ನಗರಸಭಾ ಉಪಾಧ್ಯಕ್ಷ ಎಂ.ಪಿ. ಅರುಣ್ ಕುಮಾರ್ ರವರು, ನಗರಸಭಾ ಸದಸ್ಯ ಶ್ರೀಧರ್, ಕೆ.ಆರ್.ಪೇಟೆ ಬಿಜೆಪಿ ಮುಖಂಡರಾದ ನಾಗನಗೌಡರು, ನಗರಸಭಾ ಮಾಜಿ ಸದಸ್ಯ ಅಜ್ಜಾದ್ ಪಾಷ, ಶಿವಪ್ರಕಾಶ್ ಬಾಬು, ಮಂಡ್ಯ ಜಿಲ್ಲಾ ಘಟಕ ಅಧ್ಯಕ್ಷರಾದ ಬಿ.ಕೃಷ್ಣರವರು, ವಿವಿಧ ಜಿಲ್ಲೆಗಳ ಅಧ್ಯಕ್ಷರುಗಳು ದೀಪ ಬೆಳಗಿಸಿ ಉದ್ಘಾಟನೆ ಮಾಡಿದರು.

ಉದ್ಯಮಿ, ಸಮಾಜ ಸೇವಕರಾದ ಮಹಾಲಿಂಗಗೌಡ ಮುದ್ದನಘಟ್ಟ ರವರು ಮಾತನಾಡಿ ಉತ್ತಮ ಸಮಾಜ ನಿರ್ಮಾಣಕ್ಕೆ ಪತ್ರಕರ್ತರು ಸೇವೆ ಅನನ್ಯ. ಮಂಗಳೂರು ಸಮಾಚಾರ್ ಎಂಬ ಪತ್ರಿಕೆ ಕನ್ನಡದ ಮೊದಲ ಪತ್ರಿಕೆಯಾಗಿದೆ. ಪ್ರಜಾಪ್ರಭುತ್ವದಲ್ಲಿ ಶಾಸಕಾಂಗ, ನ್ಯಾಯಂಗ, ಕಾರ್ಯಾಂಗವನ್ನು ತಿದ್ದಿತಿಡಿ ಸರಿದಾರಿಗೆ ತರಲು ಪತ್ರಿಕಾರಂಗ ಮುಖ್ಯ ಅಧರ್ಮ, ಅನೀತಿ, ಭ್ರಷ್ಟಚಾರದ ವಿರುದ್ಧ ಹೋರಾಟ. ಸಮ ಸಮಾಜ ನಿರ್ಮಾಣ ಮಾಡಲು ಪತ್ರಕರ್ತರು ನಿಲ್ಲಬೇಕು. ಪತ್ರಕರ್ತರ ಸಮಸ್ಯೆಗಳಿಗೆ ಸರ್ಕಾರ ಮತ್ತು ವಾರ್ತ ಇಲಾಖೆ ಸ್ಪಂದಿಸಬೇಕು ಎಂದು ಹೇಳಿದರು.

**ಮಂಡ್ಯ ಜಿಲ್ಲಾ ಘಟಕ ಉದ್ಘಾಟನೆ**

ರಾಜ್ಯಾಧ್ಯಕ್ಷರಾದ ಹುಲಿ ಅಮರನಾಥ್ ರವರು ಮಾತನಾಡಿ ಪತ್ರಕರ್ತರ ಸಂಘಟನೆ ಮೂಲಕ ಪತ್ರಕರ್ತರ ಸಮಸ್ಯೆಗಳು, ತಾರತಮ್ಯದ ವಿರುದ್ಧ ನಮ್ಮ ಹೋರಾಟ, ಪತ್ರಕರ್ತರಿಗೆ ಅವರ ನೋವು ಅವರಿಗೆ ಗೊತ್ತು. ಪತ್ರಕರ್ತರಿಗೆ ಉಚಿತ ಬಸ್ ಪಾಸ್, ಆರೋಗ್ಯ ಕಾರ್ಡ್ ಗಳು ಕೆಲವು ಪತ್ರಕರ್ತರುಗಳಿಗೆ ಮಾತ್ರ, ಪ್ರತಿಯೊಬ್ಬ ಪತ್ರಕರ್ತರಿಗೆ ಸರ್ಕಾರದ ಸೌಲಭ್ಯ ಸೌವಲತ್ತು ಸಿಗಬೇಕು. ದೊಡ್ಡ ಪತ್ರಿಕೆಗಳಿಗೆ ಜಾಹಿರಾತು ನೀಡಿ ಪ್ರೋತ್ಸಹ ನೀಡುತ್ತದೆ, ಅದರೆ ಸಣ್ಣ ಮತ್ತು ಮಧ್ಯಮ ಪತ್ರಿಕೆಗಳ ವಿರುದ್ಧ ತಾತ್ಸರ ಮಾಡುತ್ತಿದೆ. ನಮ್ಮ ಪತ್ರಕರ್ತರಿಗೆ ಸೌಲಭ್ಯ, ಸೌವಲತ್ತು ಸಿಗಬೇಕು, ಯೂಟ್ಯೂಬ್ ಚಾನಲ್ ನವರಿಗೆ ಪತ್ರಕರ್ತರು ಎಂಬ ಮಾನ್ಯತೆ ನೀಡಬೇಕು. ಮಾಸ ಪತ್ರಿಕೆ, ವಾರ ಪತ್ರಿಕೆಗಳಿಗೆ ಸರ್ಕಾರ ಜಾಹಿರಾತು ನೀಡಬೇಕು, ಮಾಧ್ಯಮ ಪಟ್ಟಿಯಲ್ಲಿ ಸೇರಿಸಬೇಕು. ವಾರ್ತ ಇಲಾಖೆಯ ಹಲವಾರು ನಿಯಮಗಳಿಂದ ಸಣ್ಣ, ಮಧ್ಯಮ ಪತ್ರಿಕೆಗಳಿಗೆ ಜಾಹಿರಾತು ಸಿಗುತ್ತಿಲ್ಲ, ರಾಜ್ಯ ಸರ್ಕಾರ ನಿಯಾಮವಳಿಯನ್ನು ಸರಳೀಕರಣ ಮಾಡಿ ಸಣ್ಣ ಪತ್ರಿಕೆಗಳಿಗೆ ಪ್ರೋತ್ಸಹ ನೀಡಬೇಕು ಎಂದು ಹೇಳಿದರು.

ಉಪಾಧ್ಯಕ್ಷರುಗಳಾದ ಬಿ.ಕೆ.ಸತೀಶ್, ಶ್ರೀನಿವಾಸ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅನಿಲ್ ಕುಮಾರ್ ಕೆ.ಟಿ. ಕಾರ್ಯದರ್ಶಿಗಳಾದ ಚಾಮರಾಜು, ಮಾದರಹಳ್ಳಿ ರಾಜು, ಸಿ.ಶೇಖರ್, ಸಹ ಕಾರ್ಯ ದರ್ಶಿಗಳಾದ ಡಾ.ಯೋಗೇಶ್ ಬಿ. ಚಂದ್ರು, ಸಂಘಟನಾ ಕಾರ್ಯದರ್ಶಿ ರಮೇಶ್ ಕೆ.ಎನ್. ಖಜಾಂಚಿ ನಟರಾಜ್ ಎಂ.(ಜೆಟ್ಟಿ), ಕಾನೂನು ಸಲಹೆಗಾರರು ಗುರುಪ್ರಸಾದ್ ಎಂ.ವಕೀಲರು ಮತ್ತು ನಿರ್ದೇಶಕರುಗಳಾದ ಕೀರ್ತಿಕುಮಾರ್, ಸಿದ್ದರಾಜು, ಅದೀಶ್ ಇಜ್ನಾತಿಸ್ ಐಶಕ್ ಮೊಸಸ್ ರವರು ಉಪಸ್ಥಿತರಿದ್ದರು.

**ಎಂ.ಪಿ.ಅರುಣ್ ಕುಮಾರ್ ರವರು ಮಾತನಾಡಿ ಪತ್ರಕರ್ತರಿಗೆ ಸಮಸ್ಯೆ ಇವೆ ಎಂದು ಇಂದು ತಿಳಿಯಿತು. ಪತ್ರಕರ್ತರು ಎಂದರೆ ಸಾರ್ವಜನಿಕರು ಮತ್ತು ಸರ್ಕಾರದ ನಡುವೆ ಸಂಪರ್ಕ ಸೇತುವೆಯಾಗಿ ಕೆಲಸ ಮಾಡುತ್ತಾರೆ. ಇಂದು ಟಿ.ವಿ.ಚಾನಲ್ ರವರು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ, ಯಾಕ್ಷನ್, ರಿಯಾಕ್ಷನ್ ಹೇಳಿಕೊಂಡು ಪ್ರಸಾರ ಮಾಡುವ ಪರಿಸ್ಥಿತಿ ಬಂದಿದೆ, ವಾಸ್ತವ ಸತ್ಯ ತಿಳಿಯಬೇಕಾದರೆ ಆಳವಾಗಿ ಅಧ್ಯಯನ ಮಾಡಬೇಕು. ಪತ್ರಿಕೆ ಎಂದರೆ ಜ್ಞಾನ ಸಂಪಾದನೆ ಮಾಡಬಹುದು, ಇಂದು ಡಿಜಿಟಲ್ ಮಿಡಿಯದ ಪ್ರಭಾವ ಹೆಚ್ಚಾಗಿದೆ. ಮಂಡ್ಯ ಜಿಲ್ಲಾ ಪತ್ರಕರ್ತರ ಸಂಘವು ಮಂಡ್ಯದ ಅಭಿವೃದ್ಧಿಗೆ ಶ್ರಮಿಸಲಿ ಎಂದು ಹೇಳಿದರು. ಹಿರಿಯ ಪತ್ರಕರ್ತರುಗಳಾದ ಕೌಡ್ಲೆ ಚನ್ನಪ್ಪ, ಪಿ.ವೆಂಕಟರಾಮಯ್ಯ, ಎಂ.ಎಸ್. ಕೆಂಪೇಗೌಡರವರಿಗೆ ಸನ್ಮಾನಿಸಲಾಯಿತು.**

# ಬೆಂಗಳೂರು ದಕ್ಷಿಣ ನಾಮಕರಣಕ್ಕೆ ರೈತ ಸಂಘ ವಿರೋಧ; ಹೋರಾಟದ ಎಚ್ಚರಿಕೆ

## ಹೆಸರು ಬದಲಾವಣೆಯ ಬದಲು ಜಿಲ್ಲೆಯ ಅಭಿವೃದ್ಧಿಗೆ ಒತ್ತಾಯಿಸಿ, ಸಾತನೂರನ್ನು ತಾಲ್ಲೂಕಾಗಿ ರಚಿಸುವಂತೆ ಆಗ್ರಹ

• ಉದಯವಾಹಿನಿ, ಸಾತನೂರು


ಉದಯವಾಹಿನಿ ಚಿತ್ರ

**ಬೆಲೆ ಏರಿಸುವ ಷಡ್ಯಂತ್ರ**

ರಾಮನಗರ ಜಿಲ್ಲೆಯ ಹೆಸರನ್ನು ಬೆಂಗಳೂರು ದಕ್ಷಿಣ ಎಂದು ಬದಲಾವಣೆ ಮಾಡಿದ್ದಕ್ಕೆ ವಿರೋಧಿಸಿ ಕುರುಬಳ್ಳಿ ಗ್ರಾಮದಲ್ಲಿರಾಜ್ಯ ರೈತ ಸಂಘದ ಪದಾಧಿಕಾರಿಗಳು ಸಭೆ ನಡೆಸಿದರು. ಈ ಸಂದರ್ಭದಲ್ಲಿ ರೈತ ಸಂಘದ ಸದಸ್ಯರು, ಪದಾಧಿಕಾರಿಗಳು ಮಾತನಾಡಿ, ರಾಮನಗರ ಜಿಲ್ಲೆಗೆ ಬೆಂಗ ಳೂರು ದಕ್ಷಿಣ ಜಿಲ್ಲೆ ಎಂದು ಹೆಸರನ್ನು ಬದಲಾವಣೆ ಮಾಡಬಾರದು. ರಾಮ ನಗರ ಜಿಲ್ಲೆಯಲ್ಲಿ ಇರಬೇಕು. ಹೆಸರು ಬದಲಾವಣೆ ಮಾಡುವ ಬದಲು ರಾಮನಗರ ಜಿಲ್ಲೆಯನ್ನು ಅಭಿವೃದ್ಧಿ ಮಾಡಲಿ ಎಂದು ಹೇಳಿದ್ದಾರೆ. ಸುಮಾರು 30 ವರ್ಷಗಳಿಂದ ಸಾತನೂರನ್ನು ತಾಲ್ಲೂಕು ರಚನೆ ಮಾಡಬೇಕೆಂದು ಸಾತನೂರು ತಾಲ್ಲೂಕು ರಚನೆ ಹೋರಾಟದ ಸಮಿತಿ ಸದಸ್ಯರು ಹೋರಾಟ ಮಾಡಿಕೊಂಡು ಬಂದಿದ್ದಾರೆ. ಅದನ್ನು ಬಿಟ್ಟು ರಾಮನಗರ ಜಿಲ್ಲೆ ಎಂದು ಹೆಸರಿದ್ದ ರಾಮನಗರ ಜಿಲ್ಲೆಯನ್ನು ದಕ್ಷಿಣ ಜಿಲ್ಲೆ ಎಂದು ಬದಲಾವಣೆ ಮಾಡಿದ್ದೀರಿ. ಆದ್ದರಿಂದ ಮುಂದಿನ ದಿನಗಳಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ರಾಮನಗರ ಜಿಲ್ಲೆ ಹೆಸರನ್ನು ಬದಲಾವಣೆ ಮಾಡಿರುವುದಕ್ಕೆ ವಿರೋಧಿಸಿ ರಾಜ್ಯ ಸರಕಾರದ ವಿರುದ್ಧ ಹೋರಾಟ ಮಾಡುತ್ತೇವೆ. ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಹೆಸರು ಬದಲಾವಣೆ ಮಾಡುವ ಬದಲು ಸಾತನೂರನ್ನು ತಾಲ್ಲೂಕಾಗಿ ರಚನೆ ಮಾಡಬೇಕು ಎಂದು ಆಗ್ರಹಿಸಿದರು. ಸಾತನೂರು ವಿಧಾನಸಭಾ ಕ್ಷೇತ್ರ ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ರಾಜಕೀಯ ಜನ್ಮ ಕೊಟ್ಟ ಕ್ಷೇತ್ರವಾಗಿದೆ, ಸಾತನೂರನ್ನು ತಾಲ್ಲೂಕ ಕೇಂದ್ರವನ್ನಾಗಿಮಾಡಿ ಅಭಿವೃದ್ಧಿಪಡಿಸಬೇಕು. ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕು. ಮುಂದಿನ ದಿನಗಳಲ್ಲಿ ರೈತಸಂಘದಿಂದ ಮುಂಬರುವ ತಾಲ್ಲೂಕು ಜಿಲ್ಲಾ ಪಂಚಾಯಿತಿ ಚುನಾವಣೆಗಳಲ್ಲಿ ಅಭ್ಯರ್ಥಿಗಳನ್ನು ನಿಲ್ಲಿಸಿರಾಜಕೀಯವಾಗಿ ರೈತ ಸಂಘವನ್ನು ಸಾತನೂರು ಹೋಬಳಿಯಲ್ಲಿ ಸಕ್ರಿಯವಾಗಿ ಸಂಘಟಿಸಿ ಹೋರಾಟ ಮಾಡಲಾಗುವುದು ಎಂದರು. ಈಗಾಗಲೇ ಸಾತನೂರು ಹೋಬಳಿಯಲ್ಲಿ ರೈತರಿಗೆ ವ್ಯವಸಾಯ ಮಾಡಲು ಸರಿಯಾದ ಸಮಯಕ್ಕೆ ವಿದ್ಯುತ್ತನ್ನು ನೀಡುತ್ತಿಲ್ಲ.

ರೈತರ ಬೆಳೆಗಳಿಗೆ ನಿರಂತರವಾಗಿ ಕಾಡಾನೆಗಳ ಹಾವಳಿ ಹೆಚ್ಚಾಗಿ ರೈತರು ತಮ್ಮ ಜಮೀನುಗಳಲ್ಲಿ ಬೆಳೆ ಬೆಳೆಯಲು ಸಾಧ್ಯವಾಗುತ್ತಿಲ್ಲ, ರೈತರು ತಮ್ಮ ಜಮೀನುಗಳ ದಾಖಲಾತಿಗಳನ್ನು ಸರಿಪಡಿಸಿಕೊಳ್ಳಲು ಸರಕಾರಿ ಕಚೇರಿಗಳಿಗೆ ದಿನನಿತ್ಯ ಅಲೆದಾಡುತ್ತಿದ್ದಾರೆ.

ಬೆಳೆದ ಬೆಳೆಗಳಿಗೆ ಸರಿಯಾಗಿ ಬೆಲೆಸಿಗುತ್ತಿಲ್ಲ, ರೈತರು ಬೆಳೆದ ಬೆಳೆಗಳನ್ನು ಮಾರಾಟ ಮಾಡಲು ಸರಿಯಾದ ಮಾರುಕಟ್ಟೆ ವ್ಯವಸ್ಥೆ ಇಲ್ಲ. ಇಷ್ಟೆಲ್ಲಾಜ್ವಾಲಂತ ಸಮಸ್ಯೆಗಳನ್ನು ರೈತರು ಅನುಭವಿಸುತ್ತಿದ್ದಾರೆ ಎಂದು ರೈತ ಮುಖಂಡರು ಹೇಳಿದರು. ಮುಂದಿನ ದಿನಗಳಲ್ಲಿ ಸಾತನೂರು ಹೋಬಳಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ಎಲ್ಲಾ ಗ್ರಾಮಗಳಲ್ಲಿ ಕರ್ನಾಟಕ ರಾಜ್ಯ ರೈತ ಸಂಘವನ್ನು ಸಂಘಟಿಸಿ, ರೈತರ ಸಮಸ್ಯೆಗಳ ವಿರುದ್ಧ ಹೋರಾಟ ಮಾಡಲಾಗುವುದು ಎಂದರು.

### ರಾಮನಗರ ಹೆಸರು ಬದಲಾವಣೆ?

ಈಗಿನ ಕಾಂಗ್ರೆಸ್ ಸರ್ಕಾರದಡಿ, ರಾಮನಗರ ಜಿಲ್ಲೆಯ ಹೆಸರನ್ನು ಬದಲಾಯಿಸಿ ಬೆಂಗಳೂರು ದಕ್ಷಿಣ ಜಿಲ್ಲೆ ಎಂದು ಮರುನಾಮಕರಣ ಮಾಡಲಾಗಿದೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ, ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಮ್ಮ ಭೂಮಿಗಳ ಬೆಲೆ ಏರಿಸುವ ಷಡ್ಯಂತ್ರ ಇದಾಗಿದೆ ಎಂದು ಆರೋಪಿಸಿದ್ದಾರೆ. ಅಲ್ಲದೆ, ಸಿದ್ದರಾಮಯ್ಯ ಅವರು ದಲಿತರ ಭೂಮಿ ಕಬಳಿಸಿದವರನ್ನು ತಮ್ಮ ಜೊತೆಗಿಟ್ಟುಕೊಂಡಿದ್ದಾರೆ ಎಂದು ಟೀಕಿಸಿದ್ದಾರೆ. ಅಲ್ಲದೆ, ಈಗಿನ ಸರ್ಕಾರ ಬದಲಾದರೆ ಮತ್ತೆ ರಾಮನಗರ ಹೆಸರು ಬದಲಾವಣೆ ಮಾಡಬಹುದು ಎಂದಿದ್ದಾರೆ.

### ರಾಮನಗರ ಹೆಸರು ಬದಲಾವಣೆಯ ಹಿಂದೆ ಲ್ಯಾಂಡ್ ಮಾಫಿಯಾ


ಬೆಂಗಳೂರು ಎಂಬ ಹೆಸರಿನಲ್ಲಿ ಭೂಮಿಗೆ ಹೆಚ್ಚಿನ ಮೌಲ್ಯಸಿಗುತ್ತದೆ ಎಂಬ ಕಾರಣದಿಂದಾಗಿ, ರಾಮನಗರ ಜಿಲ್ಲೆಯ ಹೆಸರನ್ನು ಬದಲಾಯಿಸಿ ಬೆಂಗಳೂರು ದಕ್ಷಿಣ ಎಂದು ಹೆಸರಿಡಲಾಗಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ತಿಳಿಸಿದ್ದಾರೆ. ರಾಮನಗರದ ಸುತ್ತಲಿನ ಭೂಮಿ ಮೇಲೆ ಕಣ್ಣು ಹಾಕಿರುವ ಲ್ಯಾಂಡ್ ಮಾಫಿಯಾ, ರಾಮನಗರ ಎಂಬ ಹೆಸರನ್ನು ಮರೆಮಾಡಲು ಯತ್ನಿಸುತ್ತಿದೆ ಎಂದಿದ್ದಾರೆ. ಇಂಥ ಲ್ಯಾಂಡ್ ಮಾಫಿಯಾಕ್ಕೆ ರಾಮನಗರ ಹೆಸರು ಬೇಕಾಗಿಲ್ಲ, ಅಂಥ ಲ್ಯಾಂಡ್ ಮಾಫಿಯಾಕ್ಕೆ ಬೆಂಗಳೂರು ಹೆಸರು ಬೇಕು ಎಂದು ಮಂಗಳೂರಿನಲ್ಲಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

# ರಿಯಲ್ ಎಸ್ಟೇಟ್‌ನವರಿಗಾಗಿ ರಾಮನಗರದ ಹೆಸರು ಬದಲಾವಣೆ: ವಿಜಯೇಂದ್ರ

• ಉದಯವಾಹಿನಿ, ಮೈಸೂರು

ರಿಯಲ್ ಎಸ್ಟೇಟ್‌ನವರಿಗಾಗಿ ರಾಮನಗರದ ಹೆಸರು ಬದಲಾವಣೆ ಮಾಡಲಾಗಿದೆ. ರಾಮ ಅಂಥ ಹೆಸರು ಇರುವುದು ಸರ್ಕಾರಕ್ಕೆ ಅಲರ್ಜಿ ತರಿಸಿದೆ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು. ಇಲ್ಲಿ ಭಾನುವಾರ ಪತ್ರಕರ್ತರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಅವರು, ಯಾರಾರು ಅಲ್ಲಿ ಎಷ್ಟೆಷ್ಟು ಸೈಟ್ ಮಾಡಿದ್ದಾರೆ ಎಂಬುದನ್ನು ಮೊದಲು ಗೊತ್ತಾಗಿಸಲಿ. ಆ ನಂತರ ಹೆಸರು ಬದಲಾವಣೆಯ ಅಸಲಿ ಕಥೆ ಸ್ಪಷ್ಟವಾಗುತ್ತದೆ. ಹೆಸರು ಬದಲಾವಣೆ ಮಾಡಿದ ಕೂಡಲೇ ಏನು ದಿಢೀರ್ ಬದಲಾವಣೆ ಆಗಿಬಿಡುತ್ತದೆಯೇ? ಹಾಗೆ ಬದಲಾವಣೆ ಮಾಡುವುದಾದರೆ ಬೆಂಗ ಳೂರು ಅಂಥ ಸೇರಿಸಿಬಿಡಿ. ಸಿದ್ದರಾಮಯ್ಯ ರಾಜ್ಯದ ಮುಖ್ಯಮಂತ್ರಿಯಾ, ಬೆಂಗಳೂರಿನ ಮುಖ್ಯಮಂತ್ರಿಯಾ? ಡಿ.ಕೆ ಶಿವಕುಮಾರ್ ಹೇಗೆ ಒಬ್ಬರೇ ಇದರ ನಿರ್ಧಾರ ತೆಗೆದು ಕೊಳ್ಳುತ್ತಾರೆ? ಇದರ ಹಿಂದೆ ರಿಯಲ್ ಎಸ್ಟೇಟ್ ಮಾಫಿಯಾ ಇದೆ ಎಂದು ಆರೋಪಿಸಿದರು.

**ಕಾಂಗ್ರೆಸ್ ಸರ್ಕಾರದ ವಿರುದ್ಧ ದೋಷಾರೋಪ ಪಟ್ಟಿಯನ್ನು ಸಿದ್ದರಾಮಯ್ಯ ಸೇರಿದಂತೆ ಕಾಂಗ್ರೆಸ್ ನಾಯಕರನ್ನು ಖುಷಿಪಡಿಸಲೆಂದು ಬಿಡುಗಡೆ ಮಾಡಿಲ್ಲ. ಅದರಲ್ಲಿರುವ ಸತ್ಯ ನೋಡಿ ಸಿದ್ದರಾಮಯ್ಯ ಕಂಗಲಾಗಿದ್ದಾರೆ. ಸರ್ಕಾರ ಇನ್ನೂ ಮೂರು ವರ್ಷದಲ್ಲಿ ಇನ್ನಷ್ಟು ತಪ್ಪುಗಳನ್ನು ಮಾಡಲಿ. ಆಗ ದೋಷಾರೋಪಪಟ್ಟಿ ಕೂಡ ಬೆಳೆಯುತ್ತದೆ ಎಂದು ತಿಳಿಸಿದರು.**



ಕರ್ನಾಟಕ ಸಾಬೂನು ಹಾಗೂ ಮಾರ್ಜಕಗಳ ಉತ್ಪನ್ನದ ರಾಯಭಾರಿಯನ್ನಾಗಿ ಮಾಡಿ ಕೊಳ್ಳಬೇಕು ತಮಗೆ ತಮನ್ನಾ ಭಾಟಿಯಾ ಹೆಸರು ಸೂಚಿಸಿದ ತಜ್ಞ ಯಾರು ಮೊದಲು ಹೇಳಿ? ನಮಗೆ ಅವರ ಹೆಸರುಬೇಕಿದೆ. ಜಮೀರ್ ಅಹಮದ್ ಹೇಳಿದ್ರಾ ಅಥವಾ ಇನ್ಯಾರು ಹೇಳಿದ್ದಾರೆ, ತಿಳಿಸಿ. ಭಾಟಿಯಾ ಅವರನ್ನು ರಾಯಭಾರಿ ಮಾಡಿಕೊಳ್ಳುವ ಅವಶ್ಯಕತೆ ಏನಿತ್ತು? ಅಂತರರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿ ಮಾಡಿದ ಕನ್ನಡಿಗರು ಇರಲಿಲ್ಲವಾ? ಎಂದು ಕೇಳಿದರು.

# ವಯೋವೃದ್ಧರು ಆರೋಗ್ಯ ಕಡೆ ಗಮನಹರಿಸಲಿ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಸಮಾಜದಲ್ಲಿ 60 ವರ್ಷ ದಾಟಿದ ನಂತರ ಪ್ರತಿಯೊಬ್ಬ ವಯೋವೃದ್ಧರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು, ಸದಾ ಕಾಲ ಮನಸ್ಸನ್ನು ಮತ್ತು ದೇಹವನ್ನು ಸದೃಢವಾಗಿ ಇಟ್ಟುಕೊಳ್ಳಬೇಕು ತಮಗೆ ವಯಸ್ಸು ಆಗಿದೆ ಎಂದು ತಿಳಿದುಕೊಳ್ಳದೆ ಇನ್ನಷ್ಟು ಕ್ರಿಯಾಶೀಲರಾಗಿ ಸಮಾಜದಲ್ಲಿ ಸಮಾಜಮುಖಿಗಳಾಗಿ ಬದುಕಬೇಕು ಎಂದು ಪ್ರಖ್ಯಾತ ವೈದ್ಯ ಡಾಕ್ಟರ್ ಆಂಜನಪ್ಪ ತಿಳಿಸಿದರು. ಅವರು ನಗರದ ಕಂದಾಯ ಇಲಾಖೆ ನೌಕರರ ಭವನದಲ್ಲಿ ನಿವೃತ್ತ ನೌಕರರ ಸಂಘದ ವತಿಯಿಂದ ಏರ್ಪಡಿಸಿದ್ದ ಮಹಿಳೆಗೊಂದು ಆರೋಗ್ಯ ಸಲಹೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದರು.

ಸಾಮಾನ್ಯವಾಗಿ ಪ್ರತಿಯೊಬ್ಬರು ವಿಶೇಷವಾಗಿ ಹಿರಿಯ ನಾಗರಿಕರು ತಮ್ಮ ದೇಹದಲ್ಲಿ ಅನಾರೋಗ್ಯಕಂಡು ಬಂದರೆ ಏನೋ ಆಗಿಬಿಡುತ್ತದೆ ಎಂದು ಆತಂಕ ಪಡುವರು ಆದರೆ ಏನು ಆಗುವುದಿಲ್ಲ ಸೂಕ್ತ ಕಾಲದಲ್ಲಿ ವೈದ್ಯಕೀಯ ಚಿಕಿತ್ಸೆ ಪಡೆದುಕೊಳ್ಳುವಂತೆ ಸಲಹೆ ನೀಡಿದರು ಸಣ್ಣಪುಟ್ಟ ಕಾಯಿಲೆ ಗಳಿಗೆ ಸಾವು ಸಂಭವಿಸಲು ಸಾಧ್ಯವಿಲ್ಲ, ಹಾಗೆಯೇ ಸಾವು ಬರಲು ರೋಗವೇ ಕಾರಣವಾಗಬೇಕಂತಿಲ್ಲ. ಕಳೆದ ಕೆಲವು ವರ್ಷಗಳಿನಿಂದ ಇಡೀ ಲೋಕದ ಜನರು ಭಯಭೀತ ರಾಗಿದ್ದಾರೆ. ಹೆದರಿಕೆಯಿಂದ ಸ್ವಂತ ಶರೀರಕ್ಕೆ ರೋಗವನ್ನು ಆಹ್ವಾನಿಸುವಂತಾಗಿದೆ. ಕಾರಣ ಇವತ್ತು ದಿನಬೆಳಗಾದರೆ ವಯಸ್ಸಾದ ಮುದುಕರಿಂದ ಇಡಿದು ಸಣ್ಣ ಮಕ್ಕಳ ಬಾಯಲ್ಲೂ ಒಂದೇ ರೋಗದ ಮಾತು ಕೇಳಿ ಬರುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು. ರಾಜ್ಯದಲ್ಲಿ ಈಗ ಮತ್ತೆ ಕಾಲಿಟ್ಟಿರುವ ಕೊರೋನಾ ಬಗ್ಗೆ ಸುದ್ದಿಗಾರರು ಪ್ರಶ್ನಿಸಿದಾಗ ಕೊರೋನಾ ಆದರೆ ಯಾರಿಗೂ ಕೊರೋನಾ ಬಗ್ಗೆ ಭಯ ಬೇಡ ಮುನ್ನೆಚ್ಚರಿಕೆ ಇರಲಿ ಎಂದು ಪ್ರಖ್ಯಾತ ಜನರಲ್ ಸರ್ಜನ್ ಡಾ.ಆಂಜಿನಪ್ಪ ತಿಳಿಸಿದರು. ನಗರದ ಸರ್ಕಾರಿ ನೌಕರರ ಸಂಘದ ಭವನದಲ್ಲಿ ನಿವೃತ್ತ ಸರ್ಕಾರಿ ನೌಕರರ


ಉದಯವಾಹಿನಿ ಚಿತ್ರ

ಸಂಘದ ವತಿಯಿಂದ ನಡೆದ ಮಾಹೆಗೊಮ್ಮೆ ಆರೋಗ್ಯ ಸಲಹೆ ಕಾರ್ಯಕ್ರಮದಲ್ಲಿ ನಿವೃತ್ತ ನೌಕರರಿಗೆ ಆರೋಗ್ಯ ಸಲಹೆ ನೀಡಿ ಮಾತನಾಡಿ, ಈ ಕೊರೋನ ರೋಗ ಜನರು ತಿಳಿದುಕೊಂಡಿರುವ ಹಾಗೆ ಅಷ್ಟೊಂದು ಭಯಾನಕ ರೋಗ ಅಲ್ಲಾ. ಇದು ಚೀನಾದಿಂದಲೂ ಬಂದಿಲ್ಲಾ. 50-60 ವರ್ಷಗಳಿಗೆ ಒಮ್ಮೆ ದೊಡ್ಡ ದೊಡ್ಡ ಖಾಯಿಲೆಗಳು ಬಂದು ಹೋಗುವುದು ಸಾಮಾನ್ಯವಾಗಿದೆ. 1975ರಲ್ಲಿ ನಾನು ಬಳ್ಳಾರಿ ಮೆಡಿಕಲ್ ಕಾಲೇಜಿನಲ್ಲಿ ವೈದ್ಯಕೀಯ ಪದವಿ ವಿದ್ಯಾಭ್ಯಾಸ ಮಾಡುವಾಗ ಪಠ್ಯದಲ್ಲಿ ಕೊರೋನಾ ಬಗ್ಗೆ ತಿಳಿದಿದ್ದೆ. ಕೊರೋನಾ ಹೆಸರು ಕೇಳಿದಾಗಲೆಲ್ಲಾ ಜನರೇಕೆ ಅಷ್ಟೊಂದು ಭಯಬೀತರಾಗುತ್ತಾರೆ. ಈ ಮೊದಲು ಅದೆಷ್ಟೊ ಭಯಾನಕ ರೋಗಗಳು ಬಂದು ಹೋಗಿವೆ. ಇದು ಶೀತ, ಜ್ವರ ಉಸಿರಾಟದ ತೊಂದರೆ, ಕೆಮ್ಮು ಮೊದಲಾದ ಮಾದ ರಿಯ ರೋಗ ಲಕ್ಷಣಗಳಿಂದ ಕೂಡಿರುವ ರೋಗ ಇದಕ್ಕೆ ಹೆದರದೆ ಮಾಸ್ಕ್ ಧರಿಸಿ ಓಡಾಡಬೇಕು, ಕೈಗಳನ್ನು ಚನ್ನಾಗಿ ಸೋಪ್ ಹಾಕಿ ತೊಳೆದ ನಂತರ ಊಟ ತಿಂಡಿ ಮಾಡಬೇಕು. ಅಷ್ಟೇ, ಹಲವಾರು ಸಾಂಕ್ರಾಮಿಕ ರೋಗಗಳು ದೇಶದಲ್ಲಿ ಬಂದು ಹೋಗಿವೆ ಎಂದರು.

ನಿವೃತ್ತರು ತಮ್ಮ ಇಳಿ ವಯಸ್ಸಿನಲ್ಲಿ ಯಾವುದೇ ಆಲೋಚನೆಗಳು ಇರಿಸಿಕೊಳ್ಳದೆ, ಸದಾ ನಗುತ್ತಾ, ತಾಜಾ, ಉತ್ತಮ ಆಹಾರ ಪದ್ಧತಿ ರೂಢಿಸಿಕೊಳ್ಳುತ್ತಾ ದೈಹಿಕ ಚಟುವಟಿಕೆಯಿಂದ ತಮ್ಮ ಆರೋಗ್ಯವನ್ನು ಉತ್ತಮಪಡಿಸಿಕೊಳ್ಳಬೇಕು. ಸರ್ಕಾರಿ ಸೇವೆಯಿಂದ ನಿವೃತ್ತರಾಗಿರುವ ನೀವು ಇದ್ದ ಕಡೆಯೇ ಇರುವುದಕ್ಕಿಂತ ಒಂದಿಲ್ಲೊಂದು ಚಟುವಟಿಕೆಯಲ್ಲಿ ತೊಡ ಗಿಸಿಕೊಳ್ಳುವುದರ ಜೊತೆಗೆ ತಮ್ಮ ಆರೋಗ್ಯ ಕಾಪಾಡಿ ಕೊಳ್ಳಬಹುದಾಗಿದೆ. ಇದರ ಜೊತೆಗೆ ಪ್ರತಿದಿನ ಹೆಚ್ಚು ನಡೆದಾಡುವ ಅಭ್ಯಾಸ ರೂಢಿಸಿಕೊಳ್ಳುವುದರಿಂದ ಆರೋಗ್ಯ ಉತ್ತಮಪಡಿಸಿಕೊಳ್ಳಬಹುದು ಎಂದು ತಿಳಿಸಿದರಲ್ಲದೇ ಅನೇಕ ಕಾಯಿಲೆಗಳ ಬಗ್ಗೆ ಮತ್ತು ಕಾಯಿಲೆಗಳಿಂದ ಹೇಗೆ ರಕ್ಷಿಸಿ ಕೊಳ್ಳಬೇಕು ಎಂಬ ಕುರಿತು ಮಾಹಿತಿ ನೀಡಿ, ನಿವೃತ್ತ ನೌಕರರೊಂದಿಗೆ ಸಂವಾದ ನಡೆಸಿದರು.

**ಕೊರೋನ ರೋಗ ಬಂದಾಗಿನಿಂದ ಈ ರೋಗ ಸೋಶಿಯಲ್ ಮೀಡಿಯಾಗಳಲ್ಲಿ, ಟಿ ವಿ ಚಾನೆಲ್‌ಗಳಲ್ಲಿ ಈ ರೋಗದ ಬಗ್ಗೆ ಜನರಲ್ಲಿ ಅರಿಯು ಮೂಡಿಸುವುದರ ಬದಲಾಗಿ ಜನರಲ್ಲಿ ಭಯವನ್ನು ಹುಟ್ಟಿಸಿದ್ದಾರೆ. ಜನಸಾಮಾನ್ಯರು ಕೊರೋನ ರೋಗದ ಹೆಸರು ಕೇಳಿದಾಗಲೆಲ್ಲ ನೆಗೆದು ಬೀಳುವಂತಾಗಿದೆ. ಒಬ್ಬ ವ್ಯಕಿಯ ದೇಹದಲ್ಲಿ ಕೊರೋನ ವೈರಸ್ ಇದೆ ಎಂದಾದರೆ ಹೆದರಬೇಕಾಗಿಲ್ಲ. ಅದು ಸಾಧಾರಣ ಜ್ವರದ ಹಾಗೆ, ಜ್ವರ, ಶೀತ, ಕೆಮ್ಮು, ಗಂಟಲು ನೋವು, ಮೊದಲಾದ ಲಕ್ಷಣಗಳಿರುತ್ತದೆ. ಇದು ವನ ಕೆಮ್ಮು , ತೀವ್ರವಾದ ತಲೆನೋವು, ವಾಂತಿ ಭೇದಿ, ಮುಂತಾದ ಲಕ್ಷಣಗಳು ಕಂಡು ಬಂದರೆ ಡಾಕ್ಟರು ಗಳ ಸಲಹೆ ಪಡೆಕೊಳ್ಳುವುದು ಉತ್ತಮ. ಶ್ವಾಸಕೋಸದ ತೊಂದರೆ, ಹೃದಯಕ್ಕೆ ಸಂಭದಿಸಿದ ಖಾಯಿಲೆಗಳು, ಕಿಡ್ನಿ ರೋಗ , ಮಧುಮೇಹ, ನ್ಯೂಮೋನಿಯ, ಮುಂತಾದ ರೋಗ ಇರುವವರು, 60 ವರ್ಷಕ್ಕಿಂತ ಹೆಚ್ಚಿ ನ ವಯಸ್ಸಾದವರು, ಸಣ್ಣ ಮಕ್ಕಳು ಅವರ ಆರೋಗ್ಯದ ಕಡೆ ಹೆಚ್ಚಿನ ಗಮನವಿಡ ಬೇಕಾಗಿದೆ ಎಂದು ಸಲಹೆ ನೀಡಿದರು.**

# ಬೆಂಗಳೂರು-ದಿಂಡಿಗಲ್ ಅವೈಜ್ಞಾನಿಕ ಹೆದ್ದಾರಿಗೆ ಟೋಲ್: ಸರ್ವಿಸ್ ರಸ್ತೆಗೆ ಒತ್ತಾಯ

• ಉದಯವಾಹಿನಿ, ಹಾರೋಹಳ್ಳಿ

ಬೆಂಗಳೂರಿನಿಂದ ದಿಂಡಿಗಲ್‌ವರೆಗೆ ನಿರ್ಮಿಸಿರುವ ರಸ್ತೆ ಸಂಪೂರ್ಣ ಅವೈಜ್ಞಾನಿಕ ಮತ್ತು ಕಳಪೆ ಗುಣಮಟ್ಟ ದಿಂದ ಕೂಡಿದೆ. ಸುರಕ್ಷತೆಯೇ ಇಲ್ಲದ ರಸ್ತೆ ಟೋಲ್ ಏಕೆ ಕಟ್ಟಬೇಕು ಎಂದು ರೈತ ಸಂಘದ ಪದಾಧಿಕಾರಿಗಳು ಪ್ರಶ್ನಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೋಮನಹಳ್ಳಿಯಲ್ಲಿ ಟೋಲ್ ನಿರ್ಮಿಸಿ ಹೆದ್ದಾರಿ ಪ್ರಧಿಕಾರ ಜನರ ಬಳಿ ಸುಲಿಗೆ ನಡೆಸುತ್ತಿದೆ. ಕನಕಪುರ ಹರೋಹಳ್ಳಿ ಭಾಗದವರಿಗೆ ಟೋಲ್ ವಿನಾಯಿತಿ ನೀಡಬೇಕು. ರಾಷ್ಟ್ರೀಯ ಹೆದ್ದಾರಿಗೆ ಹಾರೋಹಳ್ಳಿ, ಕನಕಪುರ ಭಾಗದ ರೈತರು ಜಮೀನು ಬಿಟ್ಟುಕೊಟ್ಟಿದ್ದಾರೆ ಎಂದರು.

ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಚಂದ್ರಶೇಖರ್ ಮಾತನಾಡಿ, ಬೆಂಗಳೂರು ದಿಂಡಿಗಲ್ ರಸ್ತೆಯನ್ನು ತರಾತುರಿಯಲ್ಲಿ ಅವೈಜ್ಞಾನಿಕವಾಗಿ ನಿರ್ಮಿಸಿದ್ದಾರೆ. ಇಲ್ಲಿ ಹೆದ್ದಾರಿಯ ಲಕ್ಷಣಗಳೇ ಇಲ್ಲವಾಗಿದೆ. ಸರ್ವಿಸ್ ರಸ್ತೆ ನಿರ್ಮಿಸದೆಯೇ ಟೋಲ್ ನಿರ್ಮಿಸಿದ್ದಾರೆ. ಇದು ಯಾವ ನ್ಯಾಯ? ಜಿಲ್ಲಾಧಿಕಾರಿ ಕೂಡಲೇ ಸಭೆ ನಡೆಸಿ ಅಗತ್ಯ ಕ್ರಮ ಕೈಗೊಳ್ಳಬೇಕು. ಟೋಲ್‌ನಲ್ಲಿ ಕನಕಪುರ, ಹಾರೋಹಳ್ಳಿ ರೈತರಿಗೆ ವಿನಾಯಿತಿ ನೀಡಬೇಕು ಎಂದು ಒತ್ತಾಯಿಸಿದರು.

ನಿತ್ಯ ನಾವು ಬೆಳೆದ ಬೆಳೆಗಳನ್ನು ಬೆಂಗಳೂರಿಗೆ ಸಾಗಿಸಬೇಕಿದೆ. ಹೀಗಿರುವಾಗ ಟೋಲ್ ಕಟ್ಟಿ ನಾವು


ಉದಯವಾಹಿನಿ ಚಿತ್ರ

ಉಳಿಸುವುದಾದರೂ ಏನು? ಹಾರೋಹಳ್ಳಿ, ಕನಕ ಪುರದ ರೈತರು ರೈತರಲ್ಲವೇ? ಕೂಡಲೇ ಜಿಲ್ಲಾಧಿಕಾರಿ ಸಭೆ ನಡೆಸಿ ಸರ್ವೀಸ್ ರಸ್ತೆ ನಿರ್ಮಿಸುವವರೆಗೂ ಟೋಲ್ ಮುಚ್ಚಿಸಬೇಕು ಎಂದು ಆಗ್ರಹಿಸಿದರು. ರೈತ ಸಂಘದ ಮುಖಂಡ ಹರೀಶ್ ಮಾತನಾಡಿ, ದಿನನಿತ್ಯ ಬೆಳೆದ ಬೆಳೆಗಳನ್ನು ಬೆಂಗಳೂರಿಗೆ ಸಾಗಿ ಸುತ್ತೇವೆ. ಆದರೆ 170 ಪಾವತಿಸಬೇಕು ಹೀಗಾದರೆ ರೈತರು ಏನು ಮಾಡುವುದು. ಇಷ್ಟೆಲ್ಲ ಬೆಳವಣಿಗೆ ನಡೆಯುತ್ತಿದ್ದರೂ ರಾಮನಗರ ಕ್ಷೇತ್ರದ ಶಾಸಕರು ತುಟಿ ಬಿಚ್ಚುತ್ತಿಲ್ಲ ಎಂದರು.

ರೈತ ಸಂಘದ ಹಿರಿಯ ಮುಖಂಡ ದೇವರಾಜು ಮಾತನಾಡಿ, ರಾಷ್ಟ್ರೀಯ ಹೆದ್ದಾರಿ 209 ಅನ್ನು 948 ಎಂದು ಬದಲಿಸಿರುವುದರ ಗುಟ್ಟನ್ನು ಅಧಿಕಾರಿಗಳು ರಟ್ಟು ಮಾಡಬೇಕು. ತರಾತುರಿಯಲ್ಲಿ ರಸ್ತೆ ನಿರ್ಮಿಸಿ ಏನು ಸಾಧಿಸಿದ್ದೀರಿ ಎಂದು ಪ್ರಶ್ನಿಸಿದರು. ತಾಲ್ಲೂಕು ಅಧ್ಯಕ್ಷ ಬಿ.ಎಂ. ಪ್ರಕಾಶ್, ಅನಂತ್ ರಾಮ್ ಪ್ರಸಾದ್, ರಾಜಣ್ಣ, ಕುಮಾರ್, ಆನಂದ್ ರಾವ್ ಹಾಜರಿದ್ದರು.

# 21 ಅಡಿಕೆ ಗಿಡ ಕಡಿದ ಕಿಡಿಗೇಡಿಗಳು

• ಉದಯವಾಹಿನಿ, ಸಂತೇಬಾಚಹಳ್ಳಿ

ಹೋಬಳಿಯ ಶ್ಯಾರಹಳ್ಳಿ ಗ್ರಾಮದಲ್ಲಿ ರಾತ್ರೋರಾತ್ರಿ ಅಮಾಯಕ ರೈತರ ಅಡಿಕೆ ಗಿಡಗಳನ್ನು ಕಡಿದು ವಿಕೃತಿ ಮೆರೆದಿದ್ದಾರೆ. ರೈತ ದೇವೇಂದ್ರ ಅವರಿಗೆ ಸೇರಿದ 9 ಅಡಿಕೆ ಗಿಡಗಳು, ಪಕ್ಕದ ಗ್ರಾಮದ ಚಿಕ್ಕಹಾರನಹಳ್ಳಿ ಗ್ರಾಮದ ಸಿ.ಜೆ. ಸುರೇಶ್ ಗೌಡರ ಅವರಿಗೆ ಸೇರಿದ 12 ಅಡಿಕೆ ಗಿಡಗಳನ್ನು ದುಷ್ಕರ್ಮಿಗಳು ಕಡಿದು ಹಾಕಿದ್ದಾರೆ. ಇನ್ನೇನು ಫಸಲು



ಬಿಡಲು ಬಂದಿದ್ದ ಅಡಿಕೆ ಗಿಡಗ ಳನ್ನು ಕಳೆದು ಕೊಂಡಿರುವ ರೈತರು ಕಂಗಲಾಗಿದ್ದಾರೆ.

ಗಿಡಗಳನ್ನು ಕಡಿದು ಹಾಕಿರುವ ದುಷ್ಕರ್ಮಿ ಗಳು ಮಹಿಳೆಯ ಆಧಾರ್ ಕಾರ್ಡ್ ಜೆರಾಕ್ಸ್, ನಾಲ್ಕು ಮೊಬೈಲ್ ಸಂಖ್ಯೆಗಳನ್ನು ಬರೆದು ಕತ್ತರಿಸಿದ ಮರಕ್ಕೆ ಪ್ಲಾಸ್ಟಿಕ್‌ನಲ್ಲಿ ಕಟ್ಟಿ ಹೋಗಿದ್ದಾರೆ. ಶ್ಯಾರಹಳ್ಳಿ, ಚಿಕ್ಕಹಾರನಹಳ್ಳಿ ಎರಡು ಕಡೆಯೂ ಒಂದೇ ಹೆಸರಿನ ಆಧಾರ್ ಕಾರ್ಡ್ ಸಿಕ್ಕಿದ್ದು ಮಹಿಳೆಯ ಮೇಲಿರುವ ವೈಯುಕ್ತಿಕ ದ್ವೇಷಕ್ಕೆ ಈ ಕೃತ್ಯವನ್ನು ನಡೆಸಲಾಗಿದೆ ಎಂಬ ಅನುಮಾನ ವ್ಯಕ್ತವಾಗಿದೆ.

ಬಳಿಕ ಶ್ಯಾರಹಳ್ಳಿ ಮುಖಂಡ ಶಿವೇಗೌಡ ಮಾತನಾಡಿ, ರಾತ್ರಿ ವೇಳೆಯಲ್ಲಿ ಇಂಥ ದುಷ್ಕೃತ್ಯ ಎಸಗುತ್ತಿರುವವರ ವಿರುದ್ಧ ಪೊಲೀಸರು ತನಿಖೆ ನಡೆಸಬೇಕು. ರಾತ್ರಿ ವೇಳೆ ಬೋರ್ ವೆಲ್ ಎಲೆಕ್ಟ್ರಿಕಲ್ ಸಾಮಗ್ರಿ, ಅಡಿಕೆ ಗಿಡಗಳು, ಕೇಬಲ್ ಸೇರಿ ವಿವಿಧ ಕಳ್ಳತನ ತಪ್ಪಿಸಬೇಕು ಎಂದು ಮನವಿ ಮಾಡಿ ದರು. ಸ್ಥಳದಲ್ಲಿ ಗ್ರಾಮದ ಹಲವರು ಸೇರಿದ್ದರು.

# ಕಾಮಗಾರಿ ಪೂರ್ಣಗೊಳಿಸಲು ಆಗ್ರಹ

## ನಿರ್ಮಾಣ ಹಂತದಲ್ಲೇ ಉಳಿದ ಸಮುದಾಯ ಭವನ

• ಉದಯವಾಹಿನಿ, ಶ್ರೀರಂಗಪಟ್ಟಣ

ತಾಲ್ಲೂಕಿನ ಬಳ್ಳೇಕೆರೆ ಗ್ರಾಮದಲ್ಲಿ ಎರಡು ದಶಕಗಳ ಹಿಂದೆ ಆರಂಭವಾದ ಸಮುದಾಯ ಭವನ ನಿರ್ಮಾಣ ಕಾಮಗಾರಿ ಅರ್ಧಕ್ಕೆ ಸ್ಥಗಿತ ಗೊಂಡಿದ್ದು, ಅಪೂರ್ಣ ಕಟ್ಟಡ ಪಾಳು ಬಂಗಲೆ ಯಂತೆ ಕಾಣುತ್ತಿದೆ. ಬಳ್ಳೇಕೆರೆ, ಅರಕೆರೆ ಗ್ರಾಮಗಳ ನಡುವೆ ಇರುವ ಕೆರೆಯ ಏರಿಯ ಪಕ್ಕದ ಪಟ್ಟಲದಮ್ಮ ದೇವಾಲಯದ ಬಳಿ ನಿರ್ಮಿಸಲು ಆರಂಭಿಸಿದ ಭವನದ ಕಾಮಗಾರಿ 15 ವರ್ಷಗಳ ಹಿಂದೆಯೇ ಸ್ಥಗಿತಗೊಂಡಿದೆ. ಅಂದು ನಿರ್ಮಿಸಿರುವ ಭವನದ ಗೋಡೆಗಳ ಇಟ್ಟಿಗೆಗಳು ಬೀಳಲಾರಂಭಿಸಿವೆ. ಚಾವಣಿಯಲ್ಲಿ ಬಿರುಕುಗಳು ಕಾಣಿಸಿಕೊಂಡಿವೆ. ಸದ್ಯ ಇದಕ್ಕೆ ವಾರಸುದಾರರೇ ಇಲ್ಲದಂತಾಗಿದೆ.

ಅಂಬರೀಷ್ ಅವರು ಸಂಸದರಾಗಿದ್ದ ಅವಧಿಯಲ್ಲಿ 20 ವರ್ಷಗಳ ಹಿಂದೆ ಈ ಭವನ ನಿರ್ಮಾಣಕ್ಕೆ 20 ಲಕ್ಷ ಬಿಡುಗಡೆಯಾಗಿತ್ತು. ಬಂದ ಹಣ ಖರ್ಚಾಗಿದೆ. ಮುಂದುವರಿದ ಕಾಮಗಾರಿಗೆ ಹಣ ಬಿಡುಗಡೆಯಾಗಿಲ್ಲ. ಹಾಗಾಗಿ ನಿರ್ಮಾಣ ಕಾರ್ಯ ಅಪೂರ್ಣಗೊಂಡಿದೆ. ಅಧಿಕಾರಿಗಳು ಇದನ್ನು ಮರೆತೇ ಬಿಟ್ಟಿದ್ದಾರೆ. ಊರಿನ ಹೊರಗೆ ಇರುವ ಈ ಅಪೂರ್ಣ ಕಟ್ಟ ಡ ಜೂಜುಕೋರರ ಆವಾಸ ಸ್ಥಾನವಾಗಿದೆ'


ಉದಯವಾಹಿನಿ ಚಿತ್ರ

ಎಂದು ಗ್ರಾ.ಪಂ. ಮಾಜಿ ಪ್ರಧಾನ ಸುರೇಂದ್ರ ಬೇಸರ ವ್ಯಕ್ತಪಡಿಸುತ್ತಾರೆ. 20 ವರ್ಷಗಳ ಹಿಂದೆ ನಿರ್ಮಿಸಲು ಆರಂಭಿಸಿದ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಸಕಾಲಕ್ಕೆ ಅನುದಾನ ಬಾರದೆ ಅರ್ಧಕ್ಕೆ ನಿಂತಿದೆ. ಹತ್ತಾರು ವರ್ಷಗಳ ಕಾಲ ಹಾಗೇ ಬಿಟ್ಟ ಕಾರಣ ಕಟ್ಟಡ ಶಿಥಿಲಾವಸ್ಥೆ ತಲುಪಿದೆ. ಈ ಬಗ್ಗೆ ತನಿಖೆ ನಡೆಸಬೇಕು. ಸಾರ್ವ ಜನಿಕರ ತೆರಿಗೆ ಹಣ ವ್ಯರ್ಥವಾಗಲು ಕಾರಣರಾದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಭವನದ ನಿರ್ಮಾಣಕ್ಕೆ ಅಗತ್ಯ ಅನುದಾನ ಬಿಡುಗಡೆ ಮಾಡಬೇಕು ಎಂದು ಹೊನ್ನೇಗೌಡ ಇತರರು ಆಗ್ರಹಿಸಿದ್ದಾರೆ.

## ಕಸಾಪ ರಾಜ್ಯಾಧ್ಯಕ್ಷ ಜೋಷಿ ವಿರುದ್ಧ ತನಿಖೆಯಾಗುವವರೆಗೆ ನಿರಂತರ ಹೋರಾಟ :ಪ್ರೊ. ಜಯಪ್ರಕಾಶ್‌ಗೌಡ

# ದುಡಿಯದೇ ಕೇವಲ ಹಣ ಮಾಡುವ ಕಾಯಕದಲ್ಲಿ ನಿರಂತರ

• ಉದಯವಾಹಿನಿ, ಚಾಮರಾಜನಗರ


ಉದಯವಾಹಿನಿ ಚಿತ್ರ

**ಅನುದಾನಕ್ಕೆ ಲೆಕ್ಕವನ್ನೇ ನೀಡುತ್ತಿಲ್ಲ**

ಕನ್ನಡ ಸಾಹಿತ್ಯ ಪರಿಷತ್‌ನ ರಾಜ್ಯಾಧ್ಯಕ್ಷ ಮಹೇಶ್ ಜೋಷಿ ಭ್ರಷ್ಟಾ ಚಾರ, ಸ್ವಜನ ಪಕ್ಷಪಾತ ಮಾಡಿದ್ದು, ಸರ್ಕಾರ ಕೂಡಲೇ ಅವರನ್ನು ಅಮಾನತ್ತುಪಡಿಸಿ, ಆಡಳಿತಾಧಿಕಾರಿ ನೇಮಕ ಮಾಡಿ ಅವರ ಅವಧಿಯಲ್ಲಿ ನಡೆದಿರುವ ಅವ್ಯವ ಹಾರ ತನಿಖೆಯಾಗುವವರೆಗೆ ನಿರಂತರ ಹೋರಾಟ ನಡೆಸುವುದಾಗಿ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಕಾರ್ಯದರ್ಶಿ ಪ್ರೊ. ಜಯಪ್ರಕಾಶ್‌ಗೌಡ ತಿಳಿಸಿದರು. ನಗರದ ಪ್ರವಾಸಿಮಂದಿರದಲ್ಲಿ ಕನ್ನಡ ನಾಡು ನುಡಿ ಜಾಗೃತಿ ಸಮಿತಿ ವತಿಯಿಂದ ಕಸಾಪ ವಿರುದ್ಧ ಹೋರಾಟ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಅಧಿಕಾರಿಯಾಗಿದ್ದ ಮಹೇಶ್ ಜೋಷಿ ನಿವೃತ್ತಿಯಾಗುತ್ತಿದ್ದಂತೆ ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷ ಸ್ಥಾನದಲ್ಲಿ ಮೇಲೆ ಕಣ್ಣಿಟ್ಟು ವಾಮಮಾರ್ಗದ ಮೂಲಕ ಅಧ್ಯಕ್ಷರಾಗಿದ್ದಾರೆ. ನಂತರ ಅಧ್ಯಕ್ಷಗಿರಿಯನ್ನು ಕನ್ನಡ ಸಾಹಿತ್ಯ ಪರಿಷತ್‌ನ ಹಿತಾಸಕ್ತಿ, ಸಾಹಿತ್ಯ, ಭಾಷೆ, ನಾಡು ನುಡಿ, ಜಲ ವಿಚಾರದಲ್ಲಿ ದುಡಿಯದೇ ಕೇವಲ ಹಣ ಮಾಡುವ ಕಾಯಕದಲ್ಲಿ ನಿರಂತರಾಗಿದ್ದಾರೆ. ಅಲ್ಲದೇ ಕನ್ನಡ ಸಾಹಿತ್ಯ ಪರಿಷತ್‌ನಲ್ಲಿರುವ ಈಗಿರುವ ಬೈಲಾವನ್ನೇ ತಿದ್ದುಪಡಿ ಮಾಡಲು ಮುಂದಾಗಿದ್ದಾರೆ. ಇದನ್ನು ವಿರೋಧಿಸುವ ಸದಸ್ಯರು, ಜಿಲ್ಲಾಧ್ಯಕ್ಷರನ್ನು ಬೆದರಿಸುವುದು, ಅಮಾನತ್ತು ಮಾಡುವ ಮೂಲಕ ಸರ್ವಾಧಿಕಾರಿಯಂತೆ ವರ್ತನೆ ಮಾಡುತ್ತಿದ್ದಾರೆ ಎಂದು ದೂರಿದರು.

ಕಳೆದ 2 ವರ್ಷಗಳಿಂದ ಅವರ ಉಪಟಳ ಹೆಚ್ಚಾಗಿದ್ದು, ಸರ್ಕಾರ ಸಾಹಿತ್ಯ ಸಮ್ಮೇಳನಕ್ಕೆ ನೀಡುವ ಅನುದಾನಕ್ಕೆ ಲೆಕ್ಕವನ್ನೇ ನೀಡುತ್ತಿಲ್ಲ. ಈಗಾಗಲೇ ಮಂಡ್ಯದಲ್ಲಿ ನಡೆದ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ದೊಡ್ಡ ಹಗರಣವೇ ಆಗಿದೆ. ಈ ಬಗ್ಗೆ ಆಡಿಟ್ ವರದಿಯೂ ಸಹ ಉಲ್ಲೇಖವಾಗಿದೆ.

ಈ ಅವ್ಯವಹಾರವನ್ನು ಮುಚ್ಚಿಕೊಳ್ಳಲು ತನಗೆ ನಿಷ್ಟರಾಗಿರುವ 30 ಮಂದಿಯನ್ನು ಪರಿಷತ್‌ಗೆ ನಾಮನಿರ್ದೇಶನ ಮಾಡಿಕೊಳ್ಳುವ ಮೂಲಕ ಅಕ್ರಮ ಮಾಡುತ್ತಿದ್ದಾರೆ. ವಿವಿಧ ವಲಯದಲ್ಲಿರುವ ಐದಾರು ಮಂದಿಯನ್ನು ನಾಮ ನಿರ್ದೇಶನ ಮಾಡಿಕೊಳ್ಳಲು ಬೈಲಾದಲ್ಲಿ ಅವಕಾಶ ಇದೆ. ಆದರೆ, ಈ ಜೋಷಿ ಇವೆಲ್ಲನ್ನು ಗಾಳಿಗೆ ತೂರಿ ತಮ್ಮಗೆ ಇಷ್ಟ ಬಂದಂತೆ ನಡೆದುಕೊಳ್ಳುತ್ತಿದ್ದಾರೆ. ಇದರ ವಿರುದ್ಧ ಈಗಾಗಲೇ ಮಂಡ್ಯ, ಮೈಸೂರು, ಬೆಂಗಳೂರು ಜಿಲ್ಲೆಗಳಲ್ಲಿ ಸಂಘಟಿತ ಹೋರಾಟ ನಡೆಯುತ್ತಿದೆ. ಈಗ ಗಡಿ ಜಿಲ್ಲೆಯಲ್ಲಿ ಈ ಬಗ್ಗೆ ಜಾಗೃತಿ ಮೂಡಿಸಲು ಸಭೆ ಕರೆಯಲಾಗಿದೆ. ಇದರ ಬಗ್ಗೆ ನಿಮ್ಮೆಲ್ಲರ ಅಭಿಪ್ರಾಯದಂತೆ ಚಾಮರಾಜನಗರ ಜಿಲ್ಲೆಯಿಂದಲೂ ಸಹ ಕನ್ನಡ ಸಾಹಿತ್ಯ ಪರಿಷತ್‌ನ ದುರಾಡಳಿತ ಮತ್ತು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್‌ನ ನಿಷ್ಕ್ರೀಯತೆ ವಿರುದ್ಧ ಹೋರಾಟ ಮಾಡೋಣ ಎಂದು ಜಯಪ್ರಕಾಶ್‌ಗೌಡ ತಿಳಿಸಿದರು. ವಿಧಾನ ಪರಿಷತ್‌ನ ಮಾಜಿ ಸದಸ್ಯ ಕೆ.ಟಿ. ಶ್ರೀಕಂಠೇಗೌಡ ಮಾತನಾಡಿ, ಕಸಾಪ ರಾಜ್ಯಾಧ್ಯಕ್ಷ ಮಹೇಶ್ ಜೋಷಿ ಕನ್ನಡಿಗರ ಹಿತಾಸಕ್ತಿ ಮರೆತು ತನ್ನಗೆ ಇಷ್ಟಬಂದಂತೆ ಬೈಲಾ ತಿದ್ದುಪಡಿ ಮಾಡಿ ಸರ್ವಾಧಿಕಾರಿಯಂತೆ ವರ್ತನೆ ಮಾಡುತ್ತಿದ್ದಾರೆ. ಕಸಾಪದ 110 ವರ್ಷದ ಇತಿಹಾಸದಲ್ಲಿಯೇ ಇಂಥ ಅಧ್ಯಕ್ಷರನ್ನು ನೋಡಿಲ್ಲ. ಕನ್ನಡಿಗರ ಹಿತಾಸಕ್ತಿಯನ್ನು ಮರೆತು, ಭ್ರಷ್ಟಾಚಾರದಲ್ಲಿ ಮುಳುಗಿದ್ದಾರೆ. ಕನ್ನಡದ ಕೆಲಸ ಮಾಡಲು ಇಂತಿಷ್ಟು ಹಣ ಪಡಯುವ ವಿದೇಶ ಪ್ರವಾಸಕ್ಕೂ ಕಸಾಪ ಹಣವನ್ನು ಪಡೆದುಕೊಂಡಿರುವ ಅಧ್ಯಕ್ಷ ಯಾರು ಎಂದರೆ ಮಹೇಶ್ ಜೋಷಿ ಎಂದು ಗುಡುಗಿದರು.

### ಜೂ. 10 ರಂದು ಪ್ರತಿಭಟನೆ

ಸಭೆಯಲ್ಲಿ ಭಾಗವಹಿಸಿದ್ದ ಅನೇಕ ಮುಖಂಡರು ಮಾತನಾಡಿ, ಕಸಾಪ ರಾಜ್ಯಾಧ್ಯಕ್ಷ ಮಹೇಶ್ ಜೋಷಿ ವಿರುದ್ಧ ಹೋರಾಟ ಮಾಡಲು ಜೂ. 10 ರ ಮಂಗಳವಾರ ದೊಡ್ಡ ಮಟ್ಟದಲ್ಲಿ ಪ್ರತಿಭಟನೆಯನ್ನು ನಡೆಸಲು ತೀರ್ಮಾನಿಸಿದರು. ಕಸಾಪ ಮಾಜಿ ಅಧ್ಯಕ್ಷ ಎ.ಎಂ. ನಾಗಮಲ್ಲಪ್ಪ, ದಲಿತ ಮಹಾಸಭಾದ ಉಪಾಧ್ಯಕ್ಷ ವೆಂಕಟರಮಣಸ್ವಾಮಿ (ಪಾಪು), ಕೆ. ವೀರಭದ್ರಸ್ವಾಮಿ ಮಾತನಾಡಿ, ಕಸಾಪ ರಾಜ್ಯಾಧ್ಯಕ್ಷ ಮಹೇಶ್ ಜೋಷಿ ವಿರುದ್ಧ ಬಹಳಷ್ಟು ಅಸಮಾಧಾನ ವ್ಯಕ್ತವಾಗುತ್ತಿದೆ. ಇಂಥವರು ಪರಿಷತ್‌ನಲ್ಲಿ ಮುಂದುವರಿಯಲು ಅರ್ಹರಲ್ಲ. ಅಲ್ಲದೇ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ನಿಷ್ಕ್ರೀಯವಾಗಿದ್ದು, ಇದರ ವಿರುದ್ಧ ಒಗ್ಗಟ್ಟಿನ ಹೋರಾಟ ಅನಿರ್ವಾಯವಾಗಿದೆ ಎಂದರು.

**ಕಸಾಪ ರಾಜ್ಯಾಧ್ಯಕ್ಷ ಮಹೇಶ್ ಜೋಷಿ ವಿರುದ್ಧ ರಾಜ್ಯಾದ್ಯಂತ ಹೋರಾಟ ಹೆಚ್ಚಾಗುತ್ತಿದೆ. ಚಾ.ನಗರ ಗಡಿ ಜಿಲ್ಲೆಯಿಂದಲೇ ಇದಕ್ಕೆ ಧ್ವನಿಯಾಗಬೇಕೆಂಬ ಉದ್ದೇಶದಿಂದ ಪೂರ್ವಭಾವಿ ಸಭೆಯನ್ನು ಆಯೋಜನೆ ಮಾಡಿದ್ದು, ಗಡಿ ಜಿಲ್ಲೆ ಚಾಮರಾಜನಗರ ನಾಡು, ನುಡಿ, ಜಲ ವಿಚಾರದಲ್ಲಿ ಸದಾ ಮುಂಚೂಣಿಯಲ್ಲಿದೆ. ಚುನಾವಣೆ ಸಂದರ್ಭದಲ್ಲಿ ಅತ್ಯಂತ ನಯ ವಿನಯತೆಯನ್ನು ಪ್ರದರ್ಶನ ಮಾಡಿದ ಜೋಷಿ ಅಧಿಕಾರಕ್ಕೆ ಬರುತ್ತಿದ್ದಂತೆ ತಮ್ಮ ಇನ್ನೊಂದು ಮುಖವನ್ನು ತೋರಿಸಿದ್ದಾರೆ. ಅವರಿಗೆ ಅಧಿಕಾರ ಮದವೇರಿದ್ದು, ಇದರ ವಿರುದ್ಧ ರಾಜ್ಯಾದ್ಯಂತ ಉಗ್ರ ಪ್ರತಿಭಟನೆ ನಡೆಸಬೇಕಾಗಿದೆ**

**-ಮಾದಾಪುರ ರವಿಕುಮಾರ್, ಉಪಾಧ್ಯಕ್ಷ**

## ಮಿನಿ ನ್ಯೂಸ್

### ನಾಯಿಗಳ ದಾಳಿಗೆ ಬಾಲಕಿ ಬಲಿ

• ಉದಯವಾಹಿನಿ, ತಿಪಟೂರು



ಬೀದಿಯಲ್ಲಿ ಆಟವಾಡುತ್ತಿದ್ದ 6 ವರ್ಷದ ಬಾಲಕಿ ಮೇಲೆ ಬೀದಿ ನಾಯಿಗಳ ಹಿಂಡು ದಾಳಿ ಮಾಡಿದ ಪರಿಣಾಮ ಆಕೆ ತೀವ್ರವಾಗಿ ಗಾಯಗೊಂಡು ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿರುವ ಘಟನೆ ತಾಲ್ಲೂಕಿನ ಅಯ್ಯನಬಾವಿ ಭೋವಿ ಕಾಲೋನಿಯಲ್ಲಿ ನಡೆದಿದೆ. ನವ್ಯಾ (6) ಎಂಬಾಕೆಯೇ ಬೀದಿ ನಾಯಿಗಳ ದಾಳಿಗೆ ಬಲಿಯಾಗಿರುವ ದುರ್ದೈವಿ. ಸದರಿ ಬಾಲಕಿ ಬೀದಿಯಲ್ಲಿ ಆಟವಾಡುವಾಗ ಏಕಾಏಕಿ ದಾಳಿ ನಡೆಸಿದ ಐದು ನಾಯಿಗಳ ಹಿಂಡು, ತಲೆ ಹಾಗೂ ಹೊಟ್ಟೆ ಭಾಗವನ್ನು ಕಚ್ಚಿ ತೀವ್ರವಾಗಿ ಗಾಯಗೊಳಿಸಿವೆ. ತಲೆ ಚರ್ಮ ಸಂಪೂರ್ಣವಾಗಿ ಕಿತ್ತು ಬಂದಿದೆ. ಹೊಟ್ಟೆ ಭಾಗ ಕಿತ್ತು ಕರುಳು ಆಚೆ ಬಂದಿದೆ. ಕೈ, ಕಾಲು ತೊಡೆ ಭಾಗದಲ್ಲೂ ತೀವ್ರ ಗಾಯವಾಗಿದ್ದು, ರಕ್ತದ ಮಡುವಿನಲ್ಲಿದ್ದ ಬಾಲಕಿಯನ್ನು ಕಂಡ ಸಾರ್ವಜನಿಕರು ನಾಯಿಗಳನ್ನು ಓಡಿಸಿ ಹಾಸನ ಆಸ್ಪತ್ರೆಗೆ ದಾಖಲಿಸಿದ್ದರು. ದುರಾದೃಷ್ಟವಶಾತ್ ಚಿಕಿತ್ಸೆ ಫಲಿಸದೆ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾಳೆ.

**ಮುಗಿಲು ಮುಟ್ಟಿದ ಪೋಷಕರ ಆಕ್ರಂದನ:** ಕಣ್ಣೆದುರೇ ಆಟವಾಡಿ ಕೊಂಡಿದ್ದ ಮಗು ಮೃತಪಟ್ಟಿದ್ದನ್ನು ಕಂಡ ಪೋಷಕರ ಆಕ್ರಂದನ ಮುಗಿಲು ಮುಟ್ಟಿತ್ತು. ಬಾಲಕಿ ತಂದೆ ಮಹಲಿಂಗಯ್ಯ ಕಾಲು ಮುರಿದು ಕೊಂಡಿದ್ದು, ಕಿವಿಯೂ ಕೇಳುವುದಿಲ್ಲ. ತಾಯಿ ಭಾಗ್ಯಮ್ಮಗೆ ಸಹ ಕಿವಿ ಕೇಳುವುದಿಲ್ಲ. ಮಗು ಕಳೆದುಕೊಂಡ ಈ ಕುಟುಂಬದವರ ರೋಧನೆ ಹೇಳತೀರಲಾಗಿತ್ತು.

### 25 ವರ್ಷಗಳ ಸಮಸ್ಯೆಗೆ ಇಂದು ಕಾಯಕಲ್ಪ

• ಉದಯವಾಹಿನಿ, ಮಂಡ್ಯ

ಮಂಡ್ಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಶಾಸಕರಿಂದ 3 ಕೋಟಿ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿ ಭೂಮಿ ಪೂಜೆ. ಶಾಸಕ ಗಣಿಗ ರವಿಕುಮಾರ್ ರವರು ಮಂಡ್ಯ ಕ್ಷೇತ್ರದ ಹಲ್ಲೆಗೆರೆ ಗ್ರಾಮದಿಂದ ತಂದನಾಯಕನದೊಡ್ಡಿಗೆ ಸಂಪರ್ಕ ಕಲ್ಪಿಸುವ ರಸ್ತೆ ಕಳೆದ 25 ವರ್ಷಗಳಿಂದ ಗುಂಡಿ ಬಿದ್ದಿದ್ದು ಜನ ಸಾಮಾನ್ಯರು, ವಾಹನ ಗಳು ಸಂಚರಿಸಲು ಅವ್ಯವಸ್ಥೆಯಿಂದ ಕೂಡಿದ್ದರಿಂದ ಭಾನುವಾರ 2ಕೋಟಿ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಗೆ ಭೂಮಿ ಪೂಜೆ ನೆರವೇರಿಸಿದರು.

ಮುಂದುವರೆದಂತೆ ಹೆಚ್ ಕೋಡಿಹಳ್ಳಿ ಗೇಟ್ ನಿಂದ ಜಿಗುಂಡಿ ಪಟ್ಟಣದ ವರೆಗಿನ ರಸ್ತೆಯನ್ನ 1ಕೋಟಿ ವೆಚ್ಚದಲ್ಲಿ ಅಭಿವೃದ್ಧಿಗೆ ಗುದ್ದಲಿ ಪೂಜೆ ನೆರವೇರಿಸುವ ಮೂಲಕ ಜನಸಮಾನ್ಯರ ಅಭಿಲಾಷೆಯಂತೆ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಸ್ಪಂದಿಸುತ್ತಿರುವ ಶಾಸಕರನ್ನು ಹೆಚ್ ಕೋಡಿಹಳ್ಳಿ, ಹಲ್ಲೆಗೆರೆ ಗ್ರಾಮಸ್ಥರು ಹೃದಯಸ್ಪರ್ಶಿ ಅಭಿನಂದಿಸಿದರು.

### ಬೆಳಕು ಯೋಜನೆಯ ಕಾಮಗಾರಿ ಪರಿಶೀಲಿಸಿದ: ಮಂಜುನಾಥ್

• ಉದಯವಾಹಿನಿ, ಹನೂರು

ತಾಲ್ಲೂಕಿನ ಕಾಡಂಚಿನ ಗ್ರಾಮಗಳಿಗೆ 5 ಕೋಟಿ ವೆಚ್ಚದಲ್ಲಿ ಬೆಳಕು ಯೋಜನೆ ಯಡಿ ಕೈಗೊಂಡಿರುವ ಕಾಮಗಾರಿಗಳನ್ನು ಶಾಸಕ ಎಂ.ಆರ್ ಮಂಜುನಾಥ್ ಅವರು ಪರಿಶೀಲನೆ ನಡೆಸಿ ಬೆಳಕು ಯೋಜನೆಯನ್ನು ಸಮರ್ಪಕ ರೀತಿ ಯಲ್ಲಿ ಬಳಸಲು ಗುತ್ತಿಗೆದಾರರಿಗೆ ಸೂಚಿಸಿದರು. ಮಾವತ್ತುರು ಗ್ರಾಮ ದಲ್ಲಿ ನಡೆದ ಸ್ಥಳ ವೀಕ್ಷಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕರು ಸೋಲಿಗ ಜನರು ವಾಸಿಸುವ ಕಾಡಂಚಿನ ಗ್ರಾಮಗಳಾದ ಗೊಂಬೆಗಲ್ಲು, ನೆಲ್ಲಿಕತ್ರಿ. ಕೆರೆದಿಂಬಗಳಲ್ಲಿ 21 ಕಿಲೋ ಮೀಟರ್ ದೂರದ ವರೆಗೆ ಬೆಳಕು ಯೋಜನೆಯನ್ನು ಮಾಡಲು ಅಂದಾಜು ವೆಚ್ಚ 5 ಕೋಟಿ ರೂಗಳಷ್ಟು ವಿನಿಯೋಗಿಸಲಿಗಿದೆ, ಈ ಯೋಜನೆಯನ್ನು ಸಮರ್ಪಕವಾಗಿ ಮಾಡಲು ಗುತ್ತಿಗೆದಾರರಿಗೆ ಸೂಚಿಸಿದರು. ಆನೆ ಕಂದಕಗಳನ್ನು ನಿರ್ಮಿಸಲು ನೂರ ಎಂಬತ್ತು ಕೋಟಿ ಹಣ ಬಿಡುಗಡೆಯಾಗಿದೆ ಅದರಲ್ಲಿ ನಮ್ಮ ಕ್ಷೇತ್ರದಲ್ಲಿ ಸದ್ಬಳಕೆ ಮಾಡಲು ತಿರ್ಮಾನ ಮಾಡಲು ಸೂಚಿಸಿದರು. ಕುಡಿಯುವ ನೀರಿನ ಸರಬರಾಜು ಮಾಡಲು ಪಂಚಾಯಿತಿಯಿಂದ ಅವಕಾಶ ಮಾಡಿಕೊಡಬೇಕು, ಉತ್ತಮವಾಗಿ ಚರಂಡಿ ಹೂಳೆತ್ತಲು ವ್ಯವಸ್ಥೆಯನ್ನು ಮಾಡಬೇಕು ಎಂದು ಸೂಚನೆ ನೀಡಿದರು. ಪಿ.ಜಿ ಪಾಳ್ಯದಲ್ಲಿನ ದೊಡ್ಡಕೆರೆ ಒತ್ತುವರಿ ಸ್ಥಳದಲ್ಲೆ ಹುಕುಂ ನೀಡಿದವರಿಗೆ ನೋಟಿಸ್ ಜಾರಿ ಮಾಡಲು ಸೂಚಿಸಿದರು. ಹಾಗೂ ಗ್ರಾಮ ಪಂಚಾಯತಿಗಳಲ್ಲಿ ಹದಿನೈದನೆಯಾ ಹಣಕಾಸು ಯೋಜನೆಯ ಖರ್ಚುವೆಚ್ಚದ ಬಗ್ಗೆ ಮಾಹಿತಿ ಪಡೆದು ಅಭಿವೃದ್ಧಿ ಮಾಡುವಂತೆ ತಿಳಿಸಿದರು.

### ಕಮಿಷನ್ ಆಮಿಷ: 5 ಲಕ್ಷ ವಂಚನೆ

• ಉದಯವಾಹಿನಿ, ತುಮಕೂರು

ಆನ್‌ಲೈನ್ ಶಾಪಿಂಗ್‌ನ ಉತ್ಪನ್ನಗಳಿಗೆ ರಿವ್ಯೂ ನೀಡಿ, ಹೆಚ್ಚಿನ ಕಮಿಷನ್ ಹಣ ಪಡೆಯಬಹುದು ಎಂಬ ಆಮಿಷಕ್ಕೆ ಒಳಗಾಗಿ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಬೆಳಗುಲಿಯ ವಿ.ಆರ್.ಧನಂಜಯ 5 ಲಕ್ಷ ಕಳೆದುಕೊಂಡಿದ್ದಾರೆ. ವಾಟ್ಸ್ ಆ್ಯಪ್ ಮೂಲಕ ಪರಿಚಯಿಸಿಕೊಂಡ ಸೈಬರ್ ಕಳ್ಳರು Walmart ವೆಬ್ ಸೈಟ್‌ನಲ್ಲಿ ಮಾರಾಟಕ್ಕಿರುವ ಉತ್ಪನ್ನಗಳಿಗೆ ರಿವ್ಯೂ ನೀಡುವಂತೆ ಹೇಳಿದ್ದಾರೆ. ರಿವ್ಯೂ ನೀಡಿದ ನಂತರ ಧನಂಜಯ ಖಾತೆಗೆ 839 ವರ್ಗಾವಣೆಯಾಗಿದೆ. ಬಳಿಕ ಟೆಲಿಗ್ರಾಮ್‌ನಲ್ಲಿ ಮೆಸೇಜ್ ಮಾಡಿದ್ದಾರೆ. ಹಣ ಹೂಡಿಕೆ ಮಾಡಿ, ರಿವ್ಯೂ ನೀಡಿದರೆ ಇನ್ನೂ ಉತ್ತಮ ಲಾಭಾಂಶ ಪಡೆಯಬಹುದು ಎಂದು ತಿಳಿಸಿದ್ದಾರೆ. ಮೊದಲಿಗೆ 10 ಸಾವಿರ ಹೂಡಿಕೆ ಮಾಡಿದ್ದು, ಅವರ ಖಾತೆಗೆ 15,343 ಜಮಾ ಮಾಡಲಾಗಿದೆ. ಇದನ್ನು ನಂಬಿದ ಧನಂಜಯ ಹಂತ ಹಂತವಾಗಿ ಒಟ್ಟು 5,59,951 ವರ್ಗಾಯಿಸಿದ್ದಾರೆ. ಇದರಲ್ಲಿ ಅವರಿಗೆ 55,182 ಮಾತ್ರ ವಾಪಸ್ ಬಂದಿದೆ. ಹೂಡಿಕೆ ಮಾಡಿದ ಹಣ, ಕಮಿಷನ್ ವಾಪಸ್ ನೀಡಬೇಕಾದರೆ ಇನ್ನೂ ಹೆಚ್ಚಿನ ಹಣ ವರ್ಗಾಯಿಸುವಂತೆ ತಿಳಿಸಿದ್ದಾರೆ. ಮೋಸ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಧನಂಜಯ ಸೈಬರ್ ಠಾಣೆಗೆ ದೂರು ನೀಡಿದ್ದು ಪ್ರಕರಣ ದಾಖಲಾಗಿದೆ.

### ಯುಪಿಎಸ್‌ಸಿ ಪರೀಕ್ಷೆ ಸುಗಮ

• ಉದಯವಾಹಿನಿ, ಮೈಸೂರು

ಕೇಂದ್ರ ಲೋಕಸೇವಾ ಆಯೋಗದಿಂದ ಭಾನುವಾರ ಇಲ್ಲಿನ 13 ಕೇಂದ್ರ ಗಳಲ್ಲಿ ನಡೆಸಿದ ಪರೀಕ್ಷೆ ಸುಗಮವಾಗಿ ಜರುಗಿತು. ನಗರದಲ್ಲಿ ಒಟ್ಟು 4,727 ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದರು. ಈ ಪೈಕಿ ಬೆಳಿಗ್ಗೆಯ ಅವಧಿಯಲ್ಲಿ 2,929 ಮಂದಿ ಹಾಜರಾಗಿದ್ದರು.

1,798 ಮಂದಿ ಗೈರು ಹಾಜರಾಗಿದ್ದರು. ಮಧ್ಯಾಹ್ನದ ಅವಧಿಯಲ್ಲಿ 2,916 ಅಭ್ಯರ್ಥಿಗಳು ಹಾಜರಾದರೆ, 1,811 ಮಂದಿ ಗೈರಾದರು. ಹೆಚ್ಚುವರಿ ಜಿಲ್ಲಾಧಿಕಾರಿ ಪಿ. ಶಿವರಾಜು ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿದರು. ಪರೀಕ್ಷಾ ಕೇಂದ್ರಗಳಲ್ಲಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಪರೀಕ್ಷೆಯನ್ನು ಯುಪಿಎಸ್‌ಸಿ ನಿರ್ದೇಶನದಂತೆ ಯಾವುದೇ ಲೋಪ-ದೋಷಗಳಿಲ್ಲದಂತೆ ಸಮರ್ಪಕವಾಗಿ ನಡೆಸಲಾಯಿತು ಎಂದು ಜಿಲ್ಲಾಡಳಿತ ತಿಳಿಸಿದೆ.

ಅಂತರಾಳದಿಂದ... EDITORIAL

## ಭ್ರಷ್ಟಾಚಾರದ ಆರೋಪಿಗಳ ವಿಚಾರಣೆಗೆ ಅನುಮತಿ ನಿರಾಕರಣೆ ಅಕ್ಷಮ್ಯ




2011ರ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಭರ್ತಿಗೆ ನಡೆಸಿದ ಆಯ್ಕೆ ಪ್ರಕ್ರಿಯೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳಲ್ಲಿ ಭಾಗಿಯಾದ ಆರೋಪ ಎದುರಿಸುತ್ತಿರುವ ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಅಧ್ಯಕ್ಷರಾಗಿದ್ದ ಗೋನಾಳ ಭೀಮಪ್ಪ ಮತ್ತು ಸದಸ್ಯರಾಗಿದ್ದ ಒಂಬತ್ತು ಮಂದಿಯ ವಿರುದ್ಧ ನ್ಯಾಯಾಲಯದಲ್ಲಿ ವಿಚಾರಣಾ ಪ್ರಕ್ರಿಯೆ ಆರಂಭಿಸಲು ಅನುಮತಿ ಕೋರುವ (ಪ್ರಾಸಿಕ್ಯೂಷನ್) ಕಡತವನ್ನು ರಾಷ್ಟ್ರಪತಿಯವರಿಗೆ ಕಳುಹಿಸುವ ಪ್ರಸ್ತಾವವನ್ನು ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ತಿರಸ್ಕರಿಸಲಾಗಿದೆ. ಇದಲ್ಲದೇ ನಾಲ್ಕು ಪ್ರಕರಣಗಳಲ್ಲಿ ಭ್ರಷ್ಟಾಚಾರದ ಆರೋಪ ಮೇಲ್ನೋಟಕ್ಕೆ ಸಾಬೀತಾದ ಕಾರಣದಿಂದ ಇಬ್ಬರು ನಿವೃತ್ತ ಐಎಎಸ್ ಅಧಿಕಾರಿಗಳೂ ಸೇರಿದಂತೆ ಎಂಟು ಮಂದಿ ನಿವೃತ್ತ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸುವಂತೆ ಲೋಕಾಯುಕ್ತರು ಹಾಗೂ ಉಪ ಲೋಕಾಯುಕ್ತರು ಮಾಡಿದ್ದ ಶಿಫಾರಸುಗಳನ್ನೂ ತಿರಸ್ಕರಿಸುವ ನಿರ್ಣಯವನ್ನು ಸಂಪುಟ ಸಭೆಯಲ್ಲಿ ಕೈಗೊಳ್ಳಲಾಗಿದೆ. ಸರ್ಕಾರದ ಈ ತೀರ್ಮಾನಗಳು ಸದುದ್ದೇಶದಿಂದ ಕೂಡಿಲ್ಲ. ಆಡಳಿತ ವ್ಯವಸ್ಥೆಯಲ್ಲಿ ಭ್ರಷ್ಟಾಚಾರ, ಸ್ವಜನಪಕ್ಷಪಾತ, ದುರಾಡಳಿತವನ್ನು ನಿಯಂತ್ರಿಸಬೇಕಾದರೆ ಅವುಗಳನ್ನು ಕಿಂಚಿತ್ತೂ ಸಹಿಸುವುದಿಲ್ಲ ಎಂಬ ಕಠಿಣ ನಿಲುವನ್ನು ಸರ್ಕಾರ ತಾಳಬೇಕಾಗುತ್ತದೆ. ಅಕ್ರಮಗಳಲ್ಲಿ ಭಾಗಿಯಾದವರನ್ನು ಕಾನೂನಿನ ವ್ಯಾಪ್ತಿಯಲ್ಲಿ ಶಿಕ್ಷಿಸಲು ಇರುವ ಎಲ್ಲಾ ಅವಕಾಶಗಳನ್ನೂ ಸಂಪೂರ್ಣವಾಗಿ ಬಳಸಿಕೊಳ್ಳಬೇಕಾಗುತ್ತದೆ. ಆದರೆ, ಸರ್ಕಾರ ಈಗ ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧವಾದ ನಿಲುವನ್ನು ತಳೆದಿರುವುದು ದುರದೃಷ್ಟಕರ ಬೆಳವಣಿಗೆ. 362 ಗೆಜೆಟೆಡ್ ಪ್ರೊಬೇಷನರಿ ಅಧಿಕಾರಿಗಳ ನೇಮಕಾತಿಗೆ ಸಂಬಂಧಿಸಿದಂತೆ ಪರೀಕ್ಷಾ ಫಲಿತಾಂಶವನ್ನು 2013ರ ಮಾರ್ಚ್ 21ರಂದು ಪ್ರಕಟಿಸಲಾಗಿತ್ತು. ಆದರೆ ಈ ನೇಮಕಾತಿ ಪ್ರಕ್ರಿಯೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿ ಅಭ್ಯರ್ಥಿಯೊಬ್ಬರು 2013ರ ಮೇ ತಿಂಗಳಲ್ಲಿ ಅಡ್ವಕೇಟ್ ಜನರಲ್ ಕಚೇರಿಗೆ ದೂರು ಸಲ್ಲಿಸಿದ್ದರು. ಬಳಿಕ ಪ್ರಕರಣದ ತನಿಖೆಯನ್ನು ಸಿಐಡಿಗೆ ವಹಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿತ್ತು.

**ಕೆಪಿಎಸ್‌ಸಿಗೂ ಅಕ್ರಮಗಳಿಗೂ ಬಿಡದ ನಂಟು ಎಂಬ ಪರಿಸ್ಥಿತಿ ಇದೆ. ನೇಮಕಾತಿ ಪರೀಕ್ಷೆಗಳು ನಡೆದಾಗಲೆಲ್ಲ ಅಕ್ರಮದ ಆರೋಪಗಳು ಕೇಳಿಬರುತ್ತಿವೆ. ಕೆಪಿಎಸ್‌ಸಿಯನ್ನು ಆಮೂಲಾಗ್ರವಾಗಿ ಶುದ್ಧೀಕರಿಸುವುದಾಗಿ ಘೋಷಿಸಿದ ಸರ್ಕಾರವೇ ಭ್ರಷ್ಟಾಚಾರದ ಆರೋಪಿಗಳ ರಕ್ಷಣೆಗೆ ನಿಲ್ಲುವ ನಿರ್ಣಯ ಕೈಗೊಂಡಿರುವುದು ವಿಪರ್ಯಾಸ. ಇಂತಹ ಪ್ರಕರಣಗಳಲ್ಲಿ ಯಾವುದೇ ಒತ್ತಡಕ್ಕೆ ಮಣಿಯದೆ ನಿರ್ಧಾರ ಕೈಗೊಳ್ಳಬೇಕಾದ ಸಂವಿಧಾನಬದ್ಧ ಹೊಣೆಗಾರಿಕೆ ಸರ್ಕಾರದ ಮೇಲಿದೆ. ಸಿಐಡಿ ವರದಿಯಲ್ಲಿನ ಶಿಫಾರಸಿನಂತೆ ತಪ್ಪಿತಸ್ಥರನ್ನು ಕಾನೂನಿನ ವ್ಯಾಪ್ತಿಯಲ್ಲಿ ವಿಚಾರಣೆಗೆ ಗುರಿಪಡಿಸುವ ಕೆಲಸ ಆಗಲೇಬೇಕು. ವಿಚಾರಣೆಗೆ ಅನುಮತಿ ನಿರಾಕರಿಸುವ ನಿರ್ಣಯವನ್ನು ಹಿಂಪಡೆದು, ಸರಿಯಾದ ಕ್ರಮದಲ್ಲಿ ರಾಷ್ಟ್ರಪತಿಯವರಿಗೆ ಪ್ರಸ್ತಾವ ಸಲ್ಲಿಸುವ ದೃಢ ನಿರ್ಧಾರವನ್ನು ಸರ್ಕಾರ ತಳೆಯಬೇಕು.**

ಸಿಐಡಿಯು ತನಿಖೆಯನ್ನು ಪೂರ್ಣಗೊಳಿಸಿ ಸೆಪ್ಟೆಂಬರ್‌ನಲ್ಲಿ ತನಿಖಾ ವರದಿಯನ್ನು ಸಲ್ಲಿಸಿತ್ತು. ಕೆಪಿಎಸ್‌ಸಿಯ ಆಗಿನ ಅಧ್ಯಕ್ಷ ಮತ್ತು ಹಲವು ಸದಸ್ಯರು ಅಕ್ರಮಗಳಲ್ಲಿ ಭಾಗಿಯಾಗಿರುವುದು ದೃಢಪಟ್ಟಿದ್ದು, ಅವರ ವಿರುದ್ಧ ನ್ಯಾಯಾಲಯದಲ್ಲಿ ವಿಚಾರಣೆ ಆರಂಭಿಸಲು ಅನುಮತಿ ನೀಡಬೇಕು ಎಂದು ಸಿಐಡಿ ಶಿಫಾರಸು ಮಾಡಿತ್ತು. ಎಂಟು ವರ್ಷಗಳಾದರೂ ಈ ವಿಚಾರದಲ್ಲಿ ರಾಜ್ಯ ಸರ್ಕಾರ ಯಾವುದೇ ನಿರ್ಧಾರ ಕೈಗೊಂಡಿರಲಿಲ್ಲ. ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡದಿರಲು 2021ರ ಮೇ 27ರಂದು ಸಂಪುಟ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿತ್ತು. ಆದರೆ, ಆರೋಪಿಗಳ ವಿರುದ್ಧ ವಿಚಾರಣೆ ಆರಂಭಿಸಲು ಅನುಮತಿ ಕೋರಿ ರಾಜ್ಯಪಾಲರ ಮೂಲಕ ರಾಷ್ಟ್ರಪತಿಯವರಿಗೆ ಪ್ರಸ್ತಾವ ಸಲ್ಲಿಸುವ ನಿರ್ಧಾರವನ್ನು ಆಗ ಕೈಗೊಳ್ಳಲಾಗಿತ್ತು. ನೇಮಕಾತಿ ಅಧಿಸೂಚನೆಯನ್ನೇ ವಾಪಸ್ ಪಡೆಯುವ ರಾಜ್ಯ ಸರ್ಕಾರದ ನಿರ್ಧಾರವನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದಿತ್ತು. ಆದರೆ, 2022ರಲ್ಲಿ ರಾಜ್ಯ ಸರ್ಕಾರವು ಪ್ರತ್ಯೇಕ ಕಾಯ್ದೆಯೊಂದನ್ನು ಜಾರಿಗೊಳಿಸಿ, ಪರೀಕ್ಷೆಯಲ್ಲಿ ಆಯ್ಕೆಯಾಗಿದ್ದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಿತ್ತು. ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ 2023ರ ಡಿಸೆಂಬರ್‌ನಲ್ಲಿ ರಾಜ್ಯಪಾಲರಿಗೆ ಪ್ರಸ್ತಾವ ಸಲ್ಲಿಸಲಾಗಿತ್ತು. 2021ರ ಸಂಪುಟ ಸಭೆಯ ನಿರ್ಣಯವನ್ನು ಉಲ್ಲೇಖಿಸಿದ್ದ ರಾಜ್ಯಪಾಲರು, ಪ್ರಸ್ತಾವಕ್ಕೆ ಒಪ್ಪಿಗೆ ನೀಡಲು ನಿರಾಕರಿಸಿದ್ದರು. ಸಕ್ಷಮ ಪ್ರಾಧಿಕಾರಿಯಾದ ರಾಷ್ಟ್ರಪತಿಯವರ ಅನುಮತಿ ಪಡೆಯಲು ಅಗತ್ಯ ಕ್ರಮ ಕೈಗೊಳ್ಳಬಹುದು ಎಂಬ ಷರಾದೊಂದಿಗೆ ಕಡತವನ್ನು ರಾಜ್ಯ ಸರ್ಕಾರಕ್ಕೆ ಹಿಂದಿರುಗಿಸಿದ್ದರು. ಈಗ, ಆರೋಪಿಗಳು ನಿವೃತ್ತರಾಗಿದ್ದಾರೆ ಎಂಬ ಕಾರಣವನ್ನೇ ಮುಂದಿಟ್ಟುಕೊಂಡು, ವಿಚಾರಣೆಗೆ ಅನುಮತಿ ನಿರಾಕರಿಸುವ ನಿರ್ಧಾರವನ್ನು ಸಂಪುಟ ಸಭೆಯಲ್ಲಿ ಕೈಗೊಳ್ಳಲಾಗಿದೆ.

## ರಾಮಾಯಣ



### ದಶರಥನಿಗೆ ಶಾಪ ಬಂದ ವೃತ್ತಾಂತ

• ಹಿಂದಿನ ಸಂಚಿಕೆಯಿಂದ 78ನೆಯ ಅಧ್ಯಾಯ

ಅವರು ಕಣ್ಣು ಕಾಣದವರಾದ್ದರಿಂದ ಆತನಿರುವ ಸ್ಥಳವನ್ನು ಕೇಳಲು ಅವರ ಕೈಗಳನ್ನು ಹಿಡಿದುಕೊಂಡು ಹೋಗಿ ಆತನ ಶರೀರದ ಮೇಲಿರಿಸಿದೆನು. ಅವರು ಮಗನನ್ನು ತಡವರಿಸಿ ಆತನ ಶರೀರದಮೇಲೆ ಬಿದ್ದು ಗೋಳಿಟ್ಟು ರೋದನವನ್ನು ಮಾಡತೊಡಗಿದರು. ಆ ಮುನಿಯು ಮಗನೆ, ನಾವು ನಿನ್ನ ಸಮೀಪಕ್ಕೆ ಬಂದೆವು. ನೀನು ನಮಗೆ ಏಕೆ ನಮಸ್ಕಾರವನ್ನು ಮಾಡುವುದಿಲ್ಲ

ಏತಕ್ಕೆ ಮಾತನಾಡದಿದ್ದೀಯ ಏತಕ್ಕೆ ಭೂಮಿಯಮೇಲೆ ಮಲಗಿದ್ದೀಯೆ ನಮ್ಮ ಮೇಲೆ ಕೋಪವೆ ನನ್ನಮೇಲೆ ದಯೆಯಿಲ್ಲದಿದ್ದರೂ ನಿನ್ನ ತಾಯಿಯನ್ನಾದರೂ ನೋಡಿ ತಕ್ಕೈಸಿಕೊ ನಿನ್ನ ತಾಯಿಯೊಡನೆ ಮಾತಾಡು. ನೀನು ಬೆಳಗಿನ ಜಾವದಲ್ಲಿದ್ದು ಶಾಸ್ತ್ರಪಾರ ಸ್ತೋತ್ರಪಾರಗಳನ್ನು ಹೇಳಿಕೊಳ್ಳುತ್ತಿದ್ದೆ. ಅವುಗಳನ್ನು ನಾನು ಇನ್ನೆಲ್ಲಿ ಕೇಳಲಿ ಸ್ನಾನ ಸಂಧ್ಯಾವಂದನೆ ಮೊದಲಾದ ನಿತ್ಯಕರ್ಮಗಳನ್ನು ತೀರಿಸಿಕೊಂಡು ದೇವತಾರ್ಚನೆಯನ್ನು ಮಾಡಿ ನಮಗೆ ಉಪಚಾರದಿಂದ ಆಹಾರವನ್ನು ತಂದುಕೊಡುತ್ತಿದ್ದೆ. ನಮಗೆ ಇನ್ನಾರು ತಂದುಕೊಡುವರು ನಾವು ಅನಾಥರು. ಸಂಚಿತವಾದ ವಸ್ತುಗಳು ಮೊದಲೇ ಇಲ್ಲ. ಕುಳಿತಕಡೆಯಿಂದ ಏಳಲಾರೆವು. ಅಂಥ ನಮಗೆ ಅನ್ನವನ್ನು ತಂದು ಯಾರು ಭೋಜನವನ್ನು ಮಾಡಿಸುವರು ನಾನು ಕಣ್ಣು ಕಾಣದೆ

ತಪಸ್ವಿಯಾಗಿರುವ ವೃದ್ಧೆಯಾದ ನಿನ್ನ ತಾಯಿಯನ್ನು ಹೇಗೆ ರಕ್ಷಣೆ ಮಾಡುವೆನು ನಿನ್ನ ತಾಯಿಯೂ ಅತ್ಯಂತ ಪುತ್ರ ಸ್ನೇಹವುಳ್ಳವಳು, ಬಡವೆಯಾದವಳು ಆದ್ದರಿಂದ ನೀನು ಯಮಲೋಕಕ್ಕೆ ಹೋಗ ಬೇಡ, ಈ ದಿವಸ ಇಲ್ಲಿಯೇ ಇರು: ನಾಳೆ ನಾವೂ ನಿನ್ನ ಕೂಡ ಬರುತ್ತೇವೆ. ನಾವು ನಿನ್ನನ್ನು ಬಿಟ್ಟು ಜೀವಿಸಲಾರವು. ಆದ್ದರಿಂದ ನೀನು ಇಂದು ಇದ್ದರೆ ನಾಳೆ ನಾವು ನಿನ್ನೊಡನೆ ಯಮಪಟ್ಟಣಕ್ಕೆ ಬಂದು ಯಮನನ್ನು ಕುರಿತು ಧರ್ಮರಾಯ, ನೀನು ಸಮಸ್ತರನ್ನೂ ರಕ್ಷಿಸುವವನು. ಮಹಾ ಧರ್ಮಿಷ್ಟನು. ಆದ್ದರಿಂದ ನಮ್ಮ ಮಗನನ್ನು ಉಳಿಸು. ಈತನು ನಮ್ಮನ್ನು ರಕ್ಷಿಸಿಕೊಂಡಿರುವನು. ಅನಾಥರಾಗಿ ಕಂಗೆಟ್ಟ ನಮಗೆ ತೊಂದರೆ ಕೊಡಬೇಡ. ನಮಗೆ ಅಭಯದಕ್ಷಿಣೆಯನ್ನು ಕೊಟ್ಟು ರಕ್ಷಿಸು ಎಂದು ಬೇಡಿಕೊಳ್ಳುವೆವು ಎಲೈ ಮಗನೆ, ನೀನು ಪುಣ್ಯಾತ್ಮನು, ಜನ್ಮಾಂತರದಲ್ಲಿ ಮಾಡಿದ ಪಾಪದಿಂದ ನಿನಗೆ ಇಂಥ ಅವಸ್ಥೆಯು ಬಂದಿತು. ನೀನು ಶಸ್ತ್ರಹತನಾಗಿ ದುರ್ಮರಣದಿಂದ ಅಧೋಲೋಕಕ್ಕೆ ಹೋಗಬೇಡ. ರಣಾಂಗಣದಲ್ಲಿ ಶತ್ರುಗಳಿಗೆ ಹಿಮ್ಮೆಟ್ಟದೆ ಎದುರಾಗಿ ಹೋರಿ ಶರೀರವನ್ನು ಬಿಡುವ ಪಟುಭಟರೈದುವ ಸ್ವರ್ಗಲೋಕವನ್ನೆದು.


ಪೂರ್ವದಲ್ಲಿ ಸಗರಚಕ್ರವರ್ತಿ, ದಿಲೀಪ, ಜನಮೇಜಯರಾಯ, ನಹುಷ, ಧುಂಧುಮಾರ ಮೊದಲಾದ ಪುಣ್ಯಪುರುಷರು ಐದಿದ ಲೋಕವನ್ನೈದು. ಸಾಧುಗಳಾಗಿ ವೇದಾಧ್ಯಯನ ಸಂಪನ್ನರಾದ ಬ್ರಾಹ್ಮಣರೂ ಭೂಮಿದಾನವನ್ನು ಮಾಡಿದ ಪುಣ್ಯಾತ್ಮರೂ ಗೋಸಹಸ್ರದಾನವನ್ನು ಮಾಡಿದ ಪುಣ್ಯಾತ್ಮರೂ ಏಕಪತ್ನಿವ್ರತವನ್ನು ಮಾಡಿದ ಪುಣ್ಯಾತ್ಮರೂ ಅಂತಃಕರಣದಿಂದ ಗುರುಸೇವೆಯನ್ನು ಮಾಡಿದ ಪುಣ್ಯಾತ್ಮರೂ ಯಾವ ಲೋಕವನ್ನೋದುವರೋ ಆ ಲೋಕವನ್ನೆದು. ನಿನ್ನ ಕುಲದಲ್ಲಿ ಹುಟ್ಟಿದವರೊಬ್ಬರೂ ಅಧೋಗತಿಯನ್ನೆದಲಿಲ್ಲ. ನಿನ್ನನ್ನು ಕೊಂದವನಿಗೆ ಅಂಥ ಗತಿಯು ದೊರಕೀತು ಎಂದು ಬಹುದೈನ್ಯದಿಂದ ಹಂಬಲಿಸುತ್ತ ತನ್ನ ಸ್ತ್ರೀಯನ್ನು ಕೂಡಿಕೊಂಡು ಉತ್ತರ ಕ್ರಿಯೆಗಳನ್ನು ಮಾಡಲುಜ್ಜುಗಿಸಿದನು.

**ಮುಂದುವರಿಯುವುದು...**

# ಯಾವ ಥೈರಾಯ್ಡ್ ಇದ್ದರೆ ತೂಕ ವಿಪರೀತ ಇಳಿಯುತ್ತೆ?

ಥೈರಾಯ್ಡ್ ಬಂದ್ರೆ, ಕೆಲವರು ತೂಕ ವಿಪರೀತ ಕಡಿಮೆ ಯಾಗುತ್ತದೆ. ಇನ್ನೂ ಕೆಲವರಲ್ಲಿ ತೂಕ ವಿಪರೀತ ಹೆಚ್ಚಾಗುತ್ತದೆ ಎನ್ನುವುದನ್ನು ನೀವು ಕೇಳಿರುವಿರಿ. ಹಾಗಾದ್ರೆ ಈ ತೂಕವನ್ನು ಇಳಿಸುವ ಥೈರಾಯ್ಡ್ ಯಾವುದು ತಿಳಿಯೋಣ.

ಇತ್ತೀಚಿನ ದಿನಗಳಲ್ಲಿ ಥೈರಾಯ್ಡ್ ಸಮಸ್ಯೆಯೂ ಹೆಚ್ಚುತ್ತಲಿದೆ. ಇದಕ್ಕೆ ಅನಿಯಮಿತ ಆಹಾರ ಪದ್ಧತಿ, ಒತ್ತಡ ಮತ್ತು ದೈಹಿಕ ಚಟುವಟಿಕೆಯ ಕೊರತೆಯಿಂದಾಗಿ ಹಾರ್ಮೋನುಗಳ ಸಮಸ್ಯೆಗಳು ಹೆಚ್ಚುತ್ತಿವೆ. ಅಂತಹ ಹಾರ್ಮೋನ್ ಸಮಸ್ಯೆಗಳಲ್ಲಿ ಥೈರಾಯ್ಡ್ ಕೂಡಾ ಒಂದು. ಥೈರಾಯ್ಡ್ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಪ್ರತಿ ವರ್ಷ ಮೇ 25 ರಂದು ವಿಶ್ವ ಥೈರಾಯ್ಡ್ ದಿನವನ್ನು ಆಚರಿಸಲಾಗುತ್ತದೆ. ಥೈರಾಯ್ಡ್ ನಮ್ಮ ಗಂಟಲಿನಲ್ಲಿರುವ ಒಂದು ಸಣ್ಣ ಗ್ರಂಥಿಯಾಗಿದ್ದು ಅದು ದೇಹದ ಚಯಾಪಚಯ ಕ್ರಿಯೆಯನ್ನು ನಿಯಂತ್ರಿಸುತ್ತದೆ. ಈ ಗ್ರಂಥಿಯು ಸರಿಯಾಗಿ ಕಾರ್ಯನಿರ್ವಹಿಸದಿದ್ದಾಗ, ದೇಹದಲ್ಲಿ ಹಾರ್ಮೋನುಗಳ ಅಸಮತೋಲನ ಉಂಟಾಗುತ್ತದೆ.





**ಹೈಪರ್ ಹಾಗೂ ಹೈಪೋಥೈರಾಯ್ಡ್:** ಥೈರಾಯ್ಡ್‌ನಲ್ಲಿ ಎರಡು ವಿಧಗಳಿವೆ. ಒಂದು ಹೈಪರ್ ಥೈರಾಯಿಡ್ ಇನ್ನೊಂದು ಹೈಪೋಥೈರಾಯಿಡ್. ಥೈರಾಯ್ಡ್ ತೂಕ, ಮನಸ್ಥಿತಿ, ಜೀರ್ಣಕ್ರಿಯೆ ಮತ್ತು ಹೃದಯ ಬಡಿತದಂತಹ ಹಲವು ಅಂಶಗಳ ಮೇಲೆ ಪರಿಣಾಮ ಬೀರುತ್ತದೆ. ಇವುಗಳಲ್ಲಿ ಒಂದು ಥೈರಾಯ್ಡ್ ನಲ್ಲಿ ತೂಕ ಹೆಚ್ಚಾದರೆ ಇನ್ನೊಂದು ಥೈರಾಯ್ಡ್‌ನಲ್ಲಿ ತೂಕ ಇಳಿಯುತ್ತದೆ. ಆದರೆ ಯಾವುದರಲ್ಲಿ ತೂಕ ಹೆಚ್ಚಾಗೋದು ಹಾಗೂ ತೂಕ ಇಳಿಯೋದು ಎನ್ನುವುದರ ಬಗ್ಗೆ ಸರಿಯಾದ ಮಾಹಿತಿ ಬಹುತೇಕರಿಗಿಲ್ಲ.

**ತೂಕ ಇಳಿಕೆಗೆ ಕಾರಣವಾಗುವ ಥೈರಾಯ್ಡ್:** ಹೈಪರ್ ಥೈರಾಯ್ಡಿಸಮ್ ತೂಕ ಇಳಿಕೆಗೆ ಕಾರಣವಾಗುವ ಥೈರಾಯ್ಡ್ ಇದರಲ್ಲಿ ವ್ಯಕ್ತಿಯ ತೂಕ ಇಳಿಯ ಲಾರಂಭಿಸುತ್ತದೆ.

ನಿಮ್ಮ ಥೈರಾಯ್ಡ್ ಗ್ರಂಥಿಯು ಅಧಿಕ ಪ್ರಮಾಣದಲ್ಲಿ ಥೈರಾಯ್ಡ್ ಹಾರ್ಮೋನುಗಳನ್ನು T3 ಮತ್ತು T4 ಉತ್ಪಾದಿಸಿದಾಗ ಹೈಪರ್ ಥೈರಾಯ್ಡಿಸಮ್ ಸಂಭವಿಸುತ್ತದೆ.

ಈ ಸ್ಥಿತಿಯಲ್ಲಿ, ನಿಮ್ಮ ದೇಹದ ಚಯಾಪಚಯ ಕ್ರಿಯೆ ತುಂಬಾ ವೇಗವಾಗುತ್ತದೆ. ಇದರರ್ಥ ನೀವು ಸಾಮಾನ್ಯ ಅಥವಾ ಕಡಿಮೆ ಪ್ರಮಾಣದ ಆಹಾರವನ್ನು ಸೇವಿಸಿದರೂ ಸಹ ದೇಹವು ಹೆಚ್ಚಿನ ಕ್ಯಾಲೊರಿಗಳನ್ನು ಸುಡುತ್ತದೆ. ಹೈಪರ್ ಥೈರಾಯ್ಡಿಸಮ್‌ನಲ್ಲಿ ಗ್ರಂಥಿಯು ಹೆಚ್ಚು ಸಕ್ರಿಯವಾಗುತ್ತದೆ. ಇದು ದೇಹದ ಹಲವು ವ್ಯವಸ್ಥೆಗಳ ಮೇಲೆ ಪರಿಣಾಮ ಬೀರುತ್ತದೆ ಮತ್ತು ಹಲವು ರೀತಿಯ ಲಕ್ಷಣಗಳು ಕಾಣಿಸಿಕೊಳ್ಳಲು ಪ್ರಾರಂಭಿಸುತ್ತವೆ.

### ಹೈಪರ್ ಥೈರಾಯ್ಡಿಸಮ್‌ಗೆ ಕಾರಣವೇನು

**ಇದೊಂದು ಸ್ವಯಂ ನಿರೋಧಕ ಕಾಯಿಲೆಯಾಗಿದ್ದು, ಇದರಲ್ಲಿ ದೇಹದ ರೋಗನಿರೋಧಕ ಶಕ್ತಿ ತಪ್ಪಾಗಿ ಥೈರಾಯ್ಡ್ ಗ್ರಂಥಿಯನ್ನು ಅತಿಯಾಗಿ ಸಕ್ರಿಯಗೊಳಿಸುತ್ತದೆ. ಥೈರಾಯ್ಡ್ ಗ್ರಂಥಿಯ ಊತವು ಹಾರ್ಮೋನುಗಳ ಅಸಮತೋಲನಕ್ಕೆ ಕಾರಣವಾಗಬಹುದು. ಥೈರಾಯ್ಡ್ ಗ್ರಂಥಿಯಲ್ಲಿ ಉಂಡೆಗಳು ರೂಪುಗೊಳ್ಳಲು ಪ್ರಾರಂಭಿಸುತ್ತವೆ, ಇದು ಹಾರ್ಮೋನುಗಳನ್ನು ಅಧಿಕವಾಗಿ ಉತ್ಪಾದಿಸುತ್ತದೆ.**



**ಹೈಪರ್ ಥೈರಾಯ್ಡಿಸಮ್‌ನ ಲಕ್ಷಣಗಳು**

ತೂಕ ನಷ್ಟವು ಈ ರೋಗದ ಪ್ರಮುಖ ಲಕ್ಷಣವಾಗಿದೆ. ಆದರೆ ಇದರ ಹೊರತಾಗಿ ಇನ್ನೂ ಅನೇಕ ಲಕ್ಷಣಗಳಿವೆ. ಉದಾಹರಣೆಗೆ ತ್ವರಿತ ಹೃದಯ ಬಡಿತ, ಹೆದರಿಕೆ, ಕಿರಿಕಿರಿ ಮತ್ತು ಆತಂಕ, ಕೈಗಳು ನಡುಗುವುದು, ಬೆವರುವುದು, ನಿದ್ರಾಹೀನತೆ ಅಥವಾ ಚಡಪಡಿಕೆ, ಆಯಾಸ ಮತ್ತು ದೌರ್ಬಲ್ಯ, ಕೂದಲು ಉದುರುವುದು, ಅನಿಯಮಿತ ಮುಟ್ಟಿನ ಸಮಸ್ಯೆ. ಈ ಯಾವುದೇ ಲಕ್ಷಣಗಳು ನಿಮಗೆ ಕಂಡುಬಂದರೆ, ತಕ್ಷಣ ವೈದ್ಯರನ್ನು ಸಂಪರ್ಕಿಸುವುದು ಮುಖ್ಯ.

**ಹೈಪರ್ ಥೈರಾಯ್ಡಿಸಮ್ ಅನ್ನು ತಪ್ಪಿಸಲು ಏನು ಮಾಡಬೇಕು:** ಹೈಪರ್ ಥೈರಾಯ್ಡಿಸಮ್ ಅನ್ನು ತಪ್ಪಿಸಲು ಜೀವಸತ್ವಗಳು ಮತ್ತು ಖನಿಜಗಳು ಸಮೃದ್ಧವಾಗಿರುವ ಆಹಾರವನ್ನು ಸೇವಿಸುವುದು ಮುಖ್ಯ. ಏಕೆಂದರೆ ತೂಕ ಇಳಿಕೆಯು ಪೌಷ್ಟಿಕಾಂಶದ ಕೊರತೆಗೆ ಕಾರಣವಾಗ ಬಹುದು.

ಪ್ರೋಟೀನ್ ಭರಿತ ಆಹಾರವನ್ನು ತೆಗೆದುಕೊಳ್ಳಿ, ಪ್ರೋಟೀನ್ ಸ್ನಾಯುಗಳನ್ನು ಆರೋಗ್ಯಕರವಾಗಿಸುತ್ತದೆ, ಆದ್ದರಿಂದ ಮೊಟ್ಟೆ, ಬೇಳೆ, ಕೋಳಿ ಇತ್ಯಾದಿಗಳನ್ನು ಸೇರಿಸಿ.ನಿಯಮಿತವಾಗಿ ವ್ಯಾಯಾಮ ಮಾಡಿ, ಲಘು ವ್ಯಾಯಾಮವು ಚಯಾಪಚಯ ಕ್ರಿಯೆಯನ್ನು ಸಮತೋಲನಗೊಳಿಸಲು ಸಹಾಯ ಮಾಡುತ್ತದೆ. ಒತ್ತಡ ಕಡಿಮೆ ಮಾಡಿ, ಯೋಗ, ಧ್ಯಾನವು ಹಾರ್ಮೋನುಗಳನ್ನು ಸಮತೋಲನದಲ್ಲಿಡುತ್ತದೆ. ವೈದ್ಯರನ್ನು ಸಂಪರ್ಕಿಸಿ, ತೂಕ ಹೆಚ್ಚಿಸಲು ಪ್ರಯತ್ನಿಸಬೇಡಿ.

# ಮುಖದಲ್ಲಿನ ಕಲೆಗಳನ್ನು ತೆಗೆದುಹಾಕಲು ಹಸಿ ಹಾಲನ್ನು ಹೇಗೆ ಹಚ್ಚಬೇಕು?

ಹಸಿ ಹಾಲನ್ನು ತ್ವಚೆಗೆ ಬಳಸುವುದರಿಂದ ನಾನಾ ರೀತಿಯ ಪ್ರಯೋಜನಗಳನ್ನು ಪಡೆಯಬಹುದು. ಹಸಿ ಹಾಲಿನ ಜೊತೆ ಈ ಕೆಲವು ಸಾಮಾಗ್ರಿಗಳನ್ನು ಬಳಸೋದ್ರಿಂದ ಮುಖದ ಕಲೆಯನ್ನು ನಿವಾರಿಸಲೂ ಬಹುದು ಜೊತೆಗೆ ಸೌಂದರ್ಯವನ್ನು ಹೆಚ್ಚಿಸಬಹುದು.



ಮುಖದಲ್ಲಿ ಕಲೆ ಇದ್ರೆ, ಯಾರಿಗೂ ಇಷ್ಟವಾಗೋದಿಲ್ಲ, ಪ್ರತಿಯೊಬ್ಬರೂ ತಮ್ಮ ಮುಖ ಕಲೆರಹಿತವಾಗಿರಬೇಕು ಎಂದೇ ಬಯಸುತ್ತಾರೆ. ಯಾಕೆಂದರೆ ಕಲೆಗಳು ಮುಖದ ಅಂದವನ್ನು ಹಾಳು ಮಾಡುತ್ತವೆ. ಧೂಳು, ಮಾಲಿನ್ಯ, ಕೆಟ್ಟ ಆಹಾರ ಪದ್ಧತಿ ಮತ್ತು ಕೆಟ್ಟ ಜೀವನಶೈಲಿಯಿಂದಾಗಿ, ಸರಿಯಾಗಿ ತ್ವಚೆಯ ಕಾಳಜಿ ವಹಿಸದಿರುವುದರಿಂದಾಗಿ ಮುಖದಲ್ಲಿ ಕಲೆಗಳಾಗುವ ಸಾಧ್ಯತೆ ಇದೆ. ಈ ಕಲೆಗಳನ್ನು ನಿವಾರಿಸಲು ಹಸಿ ಹಾಲು ಉತ್ತಮ ಎನ್ನಲಾಗುತ್ತದೆ. ಹಸಿ ಹಾಲಿನ ಜೊತೆ ಈ ಕೆಲವು ಸಾಮಾಗ್ರಿಗಳನ್ನು ಸೇರಿಸಿ ಮುಖಕ್ಕೆ ಹಚ್ಚೋದ್ರಿಂದ ಕ್ರಮೇಣ ಕಲೆಗಳನ್ನು ಕಡಿಮೆಮಾಡಬಹುದು.

**ಕಲೆಗಳ ನಿವಾರಣೆಗೆ ಹಸಿಹಾಲು:** ಮುಖದಲ್ಲಿನ ಕಲೆಗಳನ್ನು ತೆಗೆದುಹಾಕಲು ನೀವು ಕೆಲವು ಮನೆಮದ್ದುಗಳನ್ನು ಪ್ರಯತ್ನಿಸಬಹುದು. ಈ ಮನೆಮದ್ದುಗಳಲ್ಲಿ ಹಸಿ ಹಾಲು ಕೂಡ ಒಂದು. ಹಸಿ ಹಾಲು ಚರ್ಮಕ್ಕೆ ತುಂಬಾ ಪ್ರಯೋಜನಕಾರಿ. ಇದು ಚರ್ಮಕ್ಕೆ ತೇವಾಂಶ ಮತ್ತು ಪೋಷಣೆಯನ್ನು ಒದಗಿಸುತ್ತದೆ. ಹಸಿ ಹಾಲಿನಲ್ಲಿ ಲ್ಯಾಕ್ಟಿಕ್ ಆಮ್ಲವಿದ್ದು, ಇದು ಚರ್ಮದ ಮೇಲಿನ ಕಲೆಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಅಲ್ಲದೆ, ಇದು ಟ್ಯಾನಿಂಗ್, ಪಿಗ್ಮೆಂಟೇಶನ್ ಮತ್ತು ಮುಖದಲ್ಲಿನ ಸುಕ್ಕುಗಳ ಸಮಸ್ಯೆಯನ್ನು ತೊಡೆದುಹಾಕಲು ಸಹಾಯ ಮಾಡುತ್ತದೆ.



**ಹಸಿ ಹಾಲು ಮತ್ತು ನಿಂಬೆರಸ:** ಮುಖದ ಕಲೆಗಳನ್ನು ಹೋಗಲಾಡಿಸಲು, ನೀವು ಹಸಿ ಹಾಲಿನಲ್ಲಿ ನಿಂಬೆರಸವನ್ನು ಬಳಸಬಹುದು. ನಿಂಬೆಯಲ್ಲಿ ಸಿಟ್ರಿಕ್ ಆಮ್ಲವಿದೆ, ಇದು ಕಲೆಗಳನ್ನು ನಿವಾರಿಸಲು ಸಹಾಯ ಮಾಡುತ್ತದೆ. ಇದಕ್ಕಾಗಿ, ಒಂದು ಬಟ್ಟಲಿನಲ್ಲಿ 2 ಚಮಚ ಹಸಿ ಹಾಲನ್ನು ತೆಗೆದುಕೊಳ್ಳಿ. ಇದಕ್ಕೆ ಒಂದು ಚಮಚ ನಿಂಬೆ ರಸ ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಈಗ ಈ ಮಿಶ್ರಣವನ್ನು ಹತ್ತಿ ಉಂಡೆಯ ಸಹಾಯದಿಂದ ನಿಮ್ಮ ಮುಖಕ್ಕೆ ಹಚ್ಚಿ. ಸುಮಾರು 10 ನಿಮಿಷಗಳ ನಂತರ, ಮುಖವನ್ನು ನೀರಿನಿಂದ ತೊಳೆಯಿರಿ. ವಾರಕ್ಕೆ 2 ರಿಂದ 3 ಬಾರಿ ಇದನ್ನು ಬಳಸುವುದರಿಂದ ಮುಖದ ಕಲೆಗಳನ್ನು ಕಡಿಮೆ ಮಾಡಬಹುದು.

**ಹಸಿ ಹಾಲು ಮತ್ತು ಅರಿಶಿನ:** ಅರಿಶಿನವನ್ನು ಬಹಳ ಹಿಂದಿನಿಂದಲೂ ಬ್ಯೂಟಿ ಟಿಪ್ಸ್ ಆಗಿ ಬಳಸಲಾಗುತ್ತಿದೆ. ಅರಿಶಿನವು ಚರ್ಮದ ಕಲೆಗಳು ಮತ್ತು ವರ್ಣದ್ರವ್ಯವನ್ನು ತೊಡೆದುಹಾಕಲು ಸಹಾಯ ಮಾಡುತ್ತದೆ. ನೀವು ಅರಿಶಿನವನ್ನು ಹಸಿ ಹಾಲಿನೊಂದಿಗೆ ಬೆರೆಸಿ ಹಚ್ಚಬಹುದು. ಇದಲ್ಲದೆ, ಇದು ಚರ್ಮದ ಬಣ್ಣವನ್ನು ಸುಧಾರಿಸುತ್ತದೆ.

ಇದಕ್ಕಾಗಿ, ಒಂದು ಬಟ್ಟಲಿನಲ್ಲಿ 2 ಚಮಚ ಹಸಿ ಹಾಲನ್ನು ತೆಗೆದುಕೊಳ್ಳಿ. ಇದಕ್ಕೆ ಒಂದು ಚಿಟಿಕೆ ಅರಿಶಿನ ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಈಗ ಹತ್ತಿ ಉಂಡೆಯ ಸಹಾಯದಿಂದ, ಅದನ್ನು ನಿಮ್ಮ ಮುಖದಾದ್ಯಂತ ಹಚ್ಚಿ ನಿಧಾನವಾಗಿ ಮಸಾಜ್ ಮಾಡಿ. ಸುಮಾರು 15 ನಿಮಿಷಗಳ ನಂತರ ನಿಮ್ಮ ಮುಖವನ್ನು ತಣ್ಣೀರಿನಿಂದ ತೊಳೆಯಿರಿ. ಇದು ನಿಮ್ಮ ಚರ್ಮವನ್ನು ಕಾಂತಿಯುತವಾಗಿಸುವುದಲ್ಲದೆ, ಕಲೆಯನ್ನೂ ನಿವಾರಿಸುತ್ತದೆ.

### ಹಸಿ ಹಾಲು ಮತ್ತು ಜೇನುತುಪ್ಪ

**ನಿಮ್ಮ ಮುಖದಲ್ಲಿರುವ ಕಲೆಗಳನ್ನು ತೆಗೆದುಹಾಕಲು, ನೀವು ಜೇನುತುಪ್ಪವನ್ನು ಹಸಿ ಹಾಲಿನೊಂದಿಗೆ ಬೆರೆಸಿ ಹಚ್ಚಬಹುದು. ಜೇನುತುಪ್ಪವು ಚರ್ಮವನ್ನು ಹೈಡ್ರೀಕರಿಸುತ್ತದೆ ಮತ್ತು ತೇವಾಂಶದಿಂದ ಇಡುತ್ತದೆ. ಅಲ್ಲದೆ, ಇದು ಮೊಡವೆಗಳು, ಕಲೆಗಳು, ಸುಕ್ಕುಗಳು ಮತ್ತು ವರ್ಣದ್ರವ್ಯದ ಸಮಸ್ಯೆಯನ್ನು ತೊಡೆದುಹಾಕಲು ಸಹಾಯ ಮಾಡುತ್ತದೆ. ಇದಕ್ಕಾಗಿ, ಒಂದು ಬಟ್ಟಲಿನಲ್ಲಿ 2 ಚಮಚ ಹಸಿ ಹಾಲನ್ನು ತೆಗೆದುಕೊಳ್ಳಿ. ಇದಕ್ಕೆ ಒಂದು ಚಮಚ ಜೇನುತುಪ್ಪ ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಈಗ ಈ ಮಿಶ್ರಣವನ್ನು ನಿಮ್ಮ ಮುಖಕ್ಕೆ ಹಚ್ಚಿ ಮಸಾಜ್ ಮಾಡಿ. ಸುಮಾರು 15 ರಿಂದ 20 ನಿಮಿಷಗಳ ನಂತರ ಮುಖವನ್ನು ನೀರಿನಿಂದ ತೊಳೆಯಿರಿ.**

# ಸಂಪೂರ್ಣ ಸಿಟಿ ಸೌಂದರ್ಯ ತೋರಿಸುವ ಸ್ಕೈಡೆಕ್ ಯೋಜನೆಗೆ ಕೆಂಗೇರಿ ಸ್ಥಳ ಆಯ್ಕೆ

• ಉದಯವಾಹಿನಿ, ಬೆಂಗಳೂರು

ಬಹು ಚರ್ಚಿತ ಸ್ಕೈಡೆಕ್ ಯೋಜನೆಯನ್ನು ಕೆಂಗೇರಿ ಬಳಿಯ ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ನಿರ್ಮಿಸಲು ಕರ್ನಾಟಕ ಸರ್ಕಾರ ನಿರ್ಧರಿಸಿದೆ ಎಂದು ಡಿಸಿಎಂ ಡಿಕೆಶಿವಕುಮಾರ್ ತಿಳಿಸಿದ್ದಾರೆ. ಸ್ಕೈಡೆಕ್ ಯೋಜನೆಯು 250 ಮೀಟರ್ ಎತ್ತರವಿರಲಿದ್ದು, ನಗರದ ವಿಹಂಗಮ ನೋಟವನ್ನು ನೀಡುತ್ತದೆ. ಪ್ರವಾಸಿಗರನ್ನು ಆಕರ್ಷಿಸುವ ಗುರಿಯನ್ನು ಹೊಂದಿದೆ, ಬ್ರ್ಯಾಂಡ್ ಬೆಂಗಳೂರು ಅಭಿವೃದ್ಧಿಯ ಭಾಗವಾಗಿ ಇದನ್ನು ಜಾರಿ ಮಾಡಲಾಗ್ತಿದೆ. ಮೊದಲಿಗೆ ಈ ಯೋಜನೆಯನ್ನು ಹೆಮ್ಮಿಗೆಪುರದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿತ್ತು. ಆದರೆ ವಿಮಾನ ನಿಲ್ದಾಣದ 20 ಕಿಲೋಮೀಟರ್ ವ್ಯಾಪ್ತಿಯಲ್ಲಿ ಎತ್ತರದ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ. ಹಾಗೆಯೇ ನಂದಿ ಇನ್ಫ್ರಾಸ್ಟ್ರಕ್ಚರ್ ಕಾರಿಡಾರ್ ಎಂಟರ್‌ಪ್ರೈಸಸ್ ಸೇರಿದ ಜಮೀನನ್ನು ಸ್ವಾಧೀನಪಡಿಸಿಕೊಳ್ಳುವುದು ಕಷ್ಟಕರವಾಗಿತ್ತು. ಆದ್ದರಿಂದ ಸ್ಥಳವನ್ನು ಬದಲಾಯಿಸಲಾಗಿದೆ ಎಂದು ಶಿವಕುಮಾರ್ ತಿಳಿಸಿದರು.

ಕೆಂಪೇಗೌಡ ಬಡಾವಣೆಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಜಾಗದಲ್ಲಿ ಸ್ಕೈಡೆಕ್ ನಿರ್ಮಾಣವಾಗಲಿದೆ. ಈ ಪ್ರದೇಶಕ್ಕೆ ಭವಿಷ್ಯದಲ್ಲಿ ಮೆಟ್ರೋ ಸಂಪರ್ಕ ದೊರೆಯುವ ನಿರೀಕ್ಷೆಯಿದೆ. ಆದ್ದರಿಂದ ಅಧಿಕಾರಿಗಳಿಗೆ ಮುಂದಕ್ಕೆ ಹೋಗಲು ಸೂಚಿಸಿದ್ದೇನೆ ಎಂದು ಅವರು ಹೇಳಿದರು.

ಬಿಡಿಎ ಅಧಿಕಾರಿಗಳು ತಿಳಿಸಿರುವಂತೆ, ಬಡಾವಣೆಯೊಳಗೆ 25 ಎಕರೆ ಜಾಗವನ್ನು ಗುರುತಿಸಲಾಗಿದೆ. ಈ ಸ್ಕೈಡೆಕ್ 250 ಮೀಟರ್ ಎತ್ತರವಿರಲಿದ್ದು, ನಗರದ ಸುಂದರ ನೋಟವನ್ನು ಕಣ್ತುಂಬಿಕೊಳ್ಳಲು ಸಹಾಯ ಮಾಡುತ್ತದೆ. ಇದು ಪ್ರವಾಸಿಗರನ್ನು ಆಕರ್ಷಿಸುವ ನಿರೀಕ್ಷೆಯಿದೆ

**ಪಾದಚಾರಿ ಮಾರ್ಗಗಳ ಒತ್ತುವರಿ ತೆರವು:** ನಗರದ ಪಾದಚಾರಿ ಮಾರ್ಗಗಳಲ್ಲಿರುವ ಅಂಗಡಿಗಳನ್ನು ತೆರವುಗೊಳಿಸಲಾಗುವುದು ಎಂದು ಶಿವಕುಮಾರ್ ತಿಳಿಸಿದ್ದಾರೆ.

ಬೀದಿಬದಿ ವ್ಯಾಪಾರವನ್ನು ಹಂತ ಹಂತವಾಗಿ ಸುವ್ಯವಸ್ಥಿತ ಗೊಳಿಸಲಾಗುವುದು. ಬಿಬಿಎಂಪಿ ಈಗಾಗಲೇ ಬೀದಿಬದಿ ವ್ಯಾಪಾರಿಗಳ ಸಮೀಕ್ಷೆಯನ್ನು ಪೂರ್ಣಗೊಳಿಸಿದೆ. ಶೀಘ್ರದಲ್ಲೇ ವ್ಯಾಪಾರ ವಲಯಗಳನ್ನು ಗುರುತಿಸಲಾಗುವುದು ಎಂದು ಅವರು ಹೇಳಿದರು. ಕಾನೂನಿನಲ್ಲಿ ಪಾದಚಾರಿ ಮಾರ್ಗಗಳಲ್ಲಿ ಅಂಗಡಿಗಳನ್ನು ನಡೆಸಲು ಅವಕಾಶವಿಲ್ಲ. ಬಿಬಿಎಂಪಿ ಸಮೀಕ್ಷೆಯಲ್ಲಿ 27,665 ವ್ಯಾಪಾರಿಗಳನ್ನು ಗುರುತಿಸಲಾಗಿದೆ. ನೋಂದಾಯಿತ ವ್ಯಾಪಾರಿಗಳಿಗೆ ಪುಶ್‌ಕಾರ್ಟ್‌ಗಳನ್ನು ನೀಡಲು ನಾವು ಸಿದ್ಧರಿದ್ದೇವೆ. ವ್ಯಾಪಾರ ವಲಯಗಳನ್ನು ಗುರುತಿಸಲಾಗುವುದು. ವ್ಯಾಪಾರಿಗಳು ಆ ವಲಯಗಳಲ್ಲಿ ಪುಶ್‌ಕಾರ್ಟ್‌ಗಳಲ್ಲಿ ತಮ್ಮ ಸರಕುಗಳನ್ನು ಮಾರಾಟ ಮಾಡಬಹುದು. ಸಂಜೆ ವ್ಯಾಪಾರದ ಸಮಯ ಮುಗಿದ ನಂತರ ಆ ಜಾಗವನ್ನು ಖಾಲಿ ಮಾಡಬೇಕು ಎಂದು ಡಿಸಿಎಂ ಹೇಳಿದರು. ನಗರದ ರಸ್ತೆಗಳಲ್ಲಿರುವ ಎಲ್ಲಾ ಕೈಬಿಟ್ಟ ವಾಹನಗಳನ್ನು ತೆರವುಗೊಳಿಸಲು ಸಂಚಾರ ಪೊಲೀಸ್ ಸಿಬ್ಬಂದಿಗೆ ನಿರ್ದೇಶನ ನೀಡಲಾಗಿದೆ. ಸರ್ಕಾರವು ದೊಡ್ಡ ಪ್ರದೇಶವನ್ನು ಗುರುತಿಸಲಿದೆ. ಅಲ್ಲಿ ಈ ವಾಹನಗಳನ್ನು ಹಾಕಬಹುದು. ಅಧಿಕಾರಿಗಳು 'ನೋ ಪಾರ್ಕಿಂಗ್' ವಲಯಗಳನ್ನು ಸಹ ಗುರುತಿಸುತ್ತಾರೆ ಎಂದು ಅವರು ಹೇಳಿದರು. ಸೆಪ್ಟೆಂಬರ್ 15 ರೊಳಗೆ ಅನ್ನುಬಿಬಿಎಂಪಿ ವಿಭಜಿಸಿ, ಗ್ರೇಟರ್ ಬೆಂಗಳೂರು ಪ್ರಾಧಿಕಾರವನ್ನು ಸ್ಥಾಪಿಸುವ ಪ್ರಕ್ರಿಯೆಯನ್ನು ಸರ್ಕಾರವು ಪೂರ್ಣಗೊಳಿಸಲಿದೆ ಎಂದು ಶಿವಕುಮಾರ್ ಹೇಳಿದರು.

### ಸರ್ವಿಸ್ ರಸ್ತೆಗಳ ನಿರ್ಮಾಣ

**ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು, ಮೆಟ್ರೋ ಕಾಮಗಾರಿ ನಡೆಯುತ್ತಿರುವ ಕಡೆಗಳಲ್ಲಿ ಸರ್ವಿಸ್ ರಸ್ತೆಗಳನ್ನು ಮುಖ್ಯ ರಸ್ತೆಗಳೊಂದಿಗೆ ವಿಲೀನಗೊಳಿಸಿ ಸಂಚಾರಕ್ಕೆ ಮುಕ್ತಗೊಳಿಸಬೇಕು ಎಂದು ಶಿವಕುಮಾರ್ ಸಲಹೆ ನೀಡಿದ್ದಾರೆ. ಸಂಚಾರ ದಟ್ಟಣೆಯನ್ನು ತಡೆಯಲು, ಸರ್ವಿಸ್ ರಸ್ತೆಗಳನ್ನು ವಿಲೀನಗೊಳಿಸಲು ನಾನು ಸೂಚಿಸಿದ್ದೇನೆ. ಈ ಬಗ್ಗೆ ಬೆಂಗಳೂರು ಸಂಚಾರ ಪೊಲೀಸರೊಂದಿಗೆ ಚರ್ಚಿಸಿದ್ದೇನೆ. ಅವರು ಶೀಘ್ರದಲ್ಲೇ ಕ್ರಿಯಾ ಯೋಜನೆಯೊಂದಿಗೆ ಬರುತ್ತಾರೆ ಎಂದು ಅವರು ಹೇಳಿದರು.**



# ರಾಜಕೀಯ ಅಕಾಡೆಮಿ ತೆರೆಯಲು ಚಿಂತನೆ : ಸ್ಪೀಕರ್ ಯು.ಟಿ.ಖಾದರ್




• ಉದಯವಾಹಿನಿ,ಬೆಂಗಳೂರು

ರಾಜಕೀಯ ಅಕಾಡೆಮಿ ತೆರೆಯಲು ಚಿಂತಿಸಲಾಗುತ್ತಿದೆ ಎಂದು ವಿಧಾನಸಭಾ ಸ್ಪೀಕರ್ ಯು.ಟಿ.ಖಾದರ್ ಅವರು ಹೇಳಿದ್ದಾರೆ. ರವಿವಾರ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಪ್ರವಾಸೋದ್ಯಮ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹಾಗೂ ಕರ್ನಾಟಕ ವಿಧಾನ ಸಭೆಯ ಸಚಿವಾಲಯದ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾದ ಮಾರ್ಗದರ್ಶಿ ನಡಿಗೆ ಪ್ರವಾಸ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ರಾಜಕೀಯ ಕಾಲೇಜು ಆರಂಭಿಸಿ ತರಬೇತಿ ನೀಡುವ ಬಗ್ಗೆ ಕಾನೂನಾತ್ಮಕವಾಗಿ ಚರ್ಚೆ ಮಾಡಿ ಅನುಷ್ಠಾನದ ಬಗ್ಗೆ ನಿರ್ಧಾರ ಮಾಡುತ್ತೇವೆ. ವೈದ್ಯರಿಗೆ, ಇಂಜಿನಿಯರ್‌ಗಳಿಗೆ ಕಾಲೇಜುಗಳಿವೆ. ಆದರೆ ರಾಜಕಾರಣಿಯಾಗಲು ಕಾಲೇಜಿಲ್ಲ, ಅದಕ್ಕೊಂದು ಅಕಾಡೆಮಿ ಇದ್ದರೆ ಉತ್ತಮ ರಾಜಕಾರಣಿಯಾಗಲು ಅನುಕೂವಾಗಲಿದೆ ಎಂದು ಉಲ್ಲೇಖಿಸಿದರು.ವಿಧಾನಸೌಧದ ಕಟ್ಟಡದಲ್ಲಿ ಓಡಾಡಿದರೆ ಅನೇಕ ಪಾರಂಪರಿಕ ಕಟ್ಟಡಗಳು ಕಣ್ಣಿಗೆ ಕಟ್ಟುವಂತೆ ಮಾಡಲಿದೆ. 75 ವರ್ಷಗಳ ಕಾಲ ವಿಧಾನಸೌಧದ ಒಳಗೆ ಯಾರನ್ನೂ ಬಿಟ್ಟಿರಲಿಲ್ಲ, ಸಾರ್ವಜನಿಕರು ಪಾಸ್ ಪಡೆದುಕೊಂಡು ಬರಬೇಕಿತ್ತು. ಆದರೆ ಈಗ ಕರ್ನಾಟಕ ಮಾತ್ರವಲ್ಲ ದೇಶದ ಜನತೆಗೆ ತೋರಿಸುವ ಕೆಲಸ ಮಾಡಿದ್ದೇವೆ ಎಂದರು. ಮಾರ್ಗದರ್ಶಿ ಪ್ರವಾಸದ ಮೂಲಕ ವಿದ್ಯಾರ್ಥಿಗಳಿಗೆ ನಮ್ಮ ನಾಡಿನ ಇತಿಹಾಸ ಅರ್ಥಮಾಡಿಸುವ ಕೆಲಸವಾಗಲಿದೆ. ವಿದ್ಯಾರ್ಥಿಗಳು ಹಾಗೂ ಯುವ ಸಮುದಾಯದವರು ದೇಶದ ಇತಿಹಾಸವನ್ನು ಅರ್ಥ ಮಾಡಿಕೊಳ್ಳಬೇಕು. ವಿಧಾನಸೌಧ ನಮ್ಮದು ಎಂಬ ಭಾವನೆಯನ್ನು ನಮ್ಮ ರಾಜ್ಯದ ಜನರಲ್ಲಿ ಮೂಡುವಂತೆ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಎಂದು ತಿಳಿಸಿದರು.

# ಗಿಡ ನೆಡುವ ಮೂಲಕ ಪ್ರಕೃತಿಗೆ ಒಂದಷ್ಟು ಗೌರವ ಸೂಚಿಸೋಣ



■ ಚನ್ನೇಗೌಡ ಉಜ್ಜನಿ ಚಲುವಯ್ಯ

● ಉದಯವಾಹಿನಿ, ವಿಶೇಷ

ಪ್ರೀತಿಯ ಬಂಧುಗಳೇ ಮಳೆಗಾಲ ಪ್ರಾರಂಭವಾಯಿತು. ಪ್ರತಿಯೊಬ್ಬರೂ ಗಿಡ ನೆಡುವ ಮೂಲಕ ಪ್ರಕೃತಿಗೆ ಒಂದಷ್ಟು ಗೌರವ ಸೂಚಿಸೋಣ. ನಾವು ಕುಡಿಯುವ ನೀರನ್ನು ದುಡ್ಡು ಕೊಟ್ಟು ತೆಗೆದುಕೊಳ್ಳುವ ಜೀವನ ನಡೆಯುತ್ತಿದೆ.

ಇದೇ ರೀತಿಯಲ್ಲಿ ನಾವು ಗಿಡಗಳನ್ನು ನೆಡದೆ ಬದುಕುನ್ನು ನಡೆಸುತ್ತಾ ಹೋದಲ್ಲಿ, ಪರಿಸರವನ್ನು ಅಶುದ್ಧ ಮಾಡುತ್ತಾ ಸಾಗಿದರೆ, ಗಿಡ ಮರಗಳಿಂದ ದೊರೆಯುವ ಶುದ್ಧ ಗಾಳಿ, ಕಳಕಾಲಕ್ಕೆ ಮಳೆ, ಸಮೃದ್ಧ ಭೂಮಿ, ಮುಂದಿನ ಬದುಕಿಗೆ ಮರೀಚಿಕೆಯಾಗುತ್ತದೆ. ನಾವು ಬದುಕುವ ಸುತ್ತಮುತ್ತಲೂ ಹಸಿರು ಹೆಚ್ಚುವಂತೆ ಪ್ರಯತ್ನ ಮಾಡಬೇಕು. ಹುಟ್ಟುಹಬ್ಬದಂದು, ಯಾವುದೇ ವಿಶೇಷ ದಿನಗಳಂದು ಗಿಡ ನೆಡುವ ಕಾರ್ಯ ಕೈಗೊಳ್ಳುವ ಮೂಲಕ ನೀರೆರೆದು ಪೋಷಿಸಬೇಕು. ಉಡುಗೊರೆಯಾಗಿ ಉತ್ತಮ ಸಸಿಗಳನ್ನು ನೀಡುವ ಕೆಲಸ ನಡೆಯಬೇಕು. ಜಮೀನಿನಲ್ಲಿ ಹಾಗೂ ಮನೆಯ ಸುತ್ತಮುತ್ತಲೂ ಹರಿದು ಪೋಲಾಗಿ ಹೋಗುವ ಮಳೆನೀರನ್ನು ಇಂಗಿಸಲು ಇಂಗು ಗುಂಡಿಗಳನ್ನು ಸ್ಥಾಪಿಸಲು ಸರ್ಕಾರ ಉತ್ತಮ ವ್ಯವಸ್ಥೆ ಹಾಗೂ ಮಾರ್ಗದರ್ಶನ ನೀಡಬೇಕು.

ಜನಪ್ರತಿನಿಧಿಗಳನ್ನು ಪರಿಸರ ಪ್ರೇಮಿಗಳಾಗಲು ಒತ್ತಾಯಿಸಿ ಸ್ಥಳೀಯರು ಪ್ರೋತ್ಸಾಹ ನೀಡುವ ಜೊತೆಗೆ ಒಂದಷ್ಟು ಉತ್ತಮ ಚಿಂತನೆ ನಡೆಯಬೇಕು. ಜನಸಂಖ್ಯೆಯನ್ನು ನಿಯಂತ್ರಣ ಮಾಡುವಲ್ಲಿ ಸರ್ಕಾರ ಈ ನೀತಿಯನ್ನು ಎಲ್ಲಾ ಧರ್ಮಗಳೂ ಕೈ ಜೋಡಿಸಬೇಕು. ಪರಿಸರಕ್ಕೆ ಪೂರಕವಾಗಿ ಕೆಲಸ ಮಾಡುವ ಸಂಘ-ಸಂಸ್ಥೆಯ ವ್ಯಕ್ತಿಗಳನ್ನು ಪ್ರೋತ್ಸಾಹಿಸಿ ಗೌರವಿಸಬೇಕು. ಮರಗಳನ್ನು ಕಡಿಯುವುದರ ಬದಲು ಸ್ಥಳಾಂತರಿಸುವ ವ್ಯವಸ್ಥೆಯನ್ನು ಸರ್ಕಾರ ಘೋಷಣೆ ಮಾಡಬೇಕು. ಚಿಕ್ಕಂದಿನಿಂದಲೇ ಎಲ್ಲರೂ ಗಿಡಗಳನ್ನು ಬೆಳೆಸುವ ಹವ್ಯಾಸ ಬೆಳಸಿಕೊಳ್ಳಬೇಕು. ಮಕ್ಕಳಿಗೆ ಪರಿಸರದ ಬಗ್ಗೆ ಕಾಳಜಿಯನ್ನು ಹಂತ ಹಂತವಾಗಿ ಬೆಳಸಬೇಕು. ವಿದ್ಯಾರ್ಥಿಗಳ ಗುಣಾತ್ಮಕ ಶಿಕ್ಷಣಕ್ಕೆ ಹಸಿರು ಚಟುವಟಿಕೆಗಳು ಅತ್ಯಂತ ಪ್ರೇರಣದಾಯಕ ಬುನಾದಿಯಾಗುತ್ತದೆ. ವಿದ್ಯಾರ್ಥಿಗಳಲ್ಲಿ ನವೀಕರಿಸಲಾಗದ ಇಂಧನಗಳು, ಸೌರಶಕ್ತಿಯ ಬಳಕೆ, ಮಳೆ ನೀರಿನ ಕೊಯ್ಲು, ಗಿಡ ಬೆಳೆಸುವ ಬಗ್ಗೆ ಕಾಲಜಿ, ಮಣ್ಣಿನ ಪಾಲವತ್ತತೆಯ ಅನುಕೂಲ, ನಮ್ಮ ಆರೋಗ್ಯ ಕಾಪಾಡಲು ಆಮ್ಲಜನಕ ಎಷ್ಟು ಮುಖ್ಯ ಎಂಬುದರ ಕುರಿತು ಜಾಗೃತಿಯನ್ನು ಮೂಡಿಸಬೇಕು.



## ಹೆದ್ದಾರಿಯಲ್ಲಿ ಮಣ್ಣು ಕುಸಿತ: ವಿದ್ಯುತ್ ಸಂಪರ್ಕ ಕಡಿತ

• ಉದಯವಾಹಿನಿ ಹಾಸನ

ಜಿಲ್ಲೆಯಲ್ಲಿ 2-3 ದಿನಗಳಿಂದ ಎಡಬಿಡದೇ ಮಳೆ ಸುರಿಯುತ್ತಿದ್ದು, ಭಾನುವಾರವೂ ಭಾರಿ ಮಳೆಯಿಂದ ಜನಜೀವನ ಅಸ್ತವ್ಯಸ್ತವಾಗಿತ್ತು. ಜಿಲ್ಲೆಯ ಚನ್ನರಾಯಪಟ್ಟಣ, ಸಕಲೇಶಪುರ, ಆಲೂರು ಬೇಲೂರು, ಅರಕಲಗೂಡು ಮತ್ತು ಹಾಸನ ತಾಲ್ಲೂಕಿನಲ್ಲಿ ಮಳೆಯ ಅಬ್ಬರದಿಂದಾಗಿ ರೈತರು, ವಾಹನ ಸವಾರರು, ಸಾರ್ವಜನಿಕರು ಪರದಾಡುವಂತಾಗಿದೆ. ಬೇಲೂರು ತಾಲ್ಲೂಕಿನ ಕುಪ್ಪೋಡು ಗ್ರಾಮದಲ್ಲಿ ಕೆರೆ ಕೋಡಿ ಒಡೆದು ರೈತರ ಜಮೀನಿಗೆ ನೀರು ನುಗ್ಗಿದ್ದು, 50 ಎಕರೆಗೆ ಅಧಿಕ ಗದ್ದೆ ಮತ್ತು ತೆಂಗಿನಕಾಯಿ ತೋಟಗಳಿಗೆ ಹಾನಿಯಾಗಿದೆ. ತರಕಾರಿ ಬೆಳೆಗಳು ಜಲಾವೃತವಾಗಿದ್ದು, ರೈತರು ನಷ್ಟ ಅನುಭವಿಸುವಂತಾಗಿದೆ. ಸಂಬಂಧಪಟ್ಟ ಇಲಾಖೆಯಿಂದ ಸೂಕ್ತ ಪರಿಹಾರ ಒದಗಿಸುವಂತೆ ಒತ್ತಾಯಿಸಿದ್ದಾರೆ.

ಸಕಲೇಶಪುರ ತಾಲ್ಲೂಕಿನ ರಾಟೆ ಮನೆ ಬಳಿ ಮೀನಿನ ಲಾರಿ ಉರುಳಿ ಬಿದ್ದು, ಚಾಲಕನಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಸಕಲೇಶಪುರ ತಾಲ್ಲೂಕಿನ ಬೊಮ್ಮಕೆರೆ ಗ್ರಾಮದ ಬಳಿ, ಕೆಎಸ್‌ಆರ್‌ಟಿಸಿ ಬಸ್‌ನ ಚಕ್ರವೊಂದು ಮಣ್ಣಿನಲ್ಲಿ ಸಿಲುಕಿ, ಪ್ರಯಾಣಿಕರು ಪರದಾಡುವಂತಾಗಿತ್ತು. ನಂತರ ಟ್ರ್ಯಾಕ್ಟರ್ ಸಹಾಯದಿಂದ ಬಸ್ ಚಕ್ರವನ್ನು ಮೇಲಕ್ಕೆ ಎತ್ತಲಾಯಿತು.

**ನೆಲಕುರುಳಿದ ಮರ, ವಿದ್ಯುತ್ ಕಂಬ:** ಬೆಳಿಗ್ಗೆಯಿಂದ ಬಿರುಸಿನ ಗಾಳಿಯ ಜೊತೆಗೆ ಧಾರಾಕಾರವಾಗಿ ಮಳೆ ಸುರಿಯುತ್ತಿದ್ದು, ಸಕಲೇಶಪುರ ಬೇಲೂರು ತಾಲ್ಲೂಕುಗಳ ಹಲವು ಗ್ರಾಮಗಳಲ್ಲಿ ವಿದ್ಯುತ್ ಕಂಬ, ಮರ ನೆಲಕುರುಳಿವೆ. ಕೆಲ ಗ್ರಾಮಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಹಳ್ಳಗಳು ತುಂಬಿ ಹರಿಯುತ್ತಿದ್ದು, ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ.

### ಗ್ರಾಮೀಣ ಪ್ರದೇಶದ ನೂರಾರು ವಿದ್ಯಾರ್ಥಿಗಳು ಈ ಶಾಲೆಯಲ್ಲಿ ಶಿಕ್ಷಣ ಪಡೆದು ಉನ್ನತ ಸ್ಥಾನಕ್ಕೆ

# ಶತಮಾನದ ಶಾಲೆಗೆ ಪುನರುಜ್ಜೀವನ ಭಾಗ್ಯ

• ಉದಯವಾಹಿನಿ ಚಿಕ್ಕೋಡಿ



ಉದಯವಾಹಿನಿ ಚಿತ್ರ

ತಾಲ್ಲೂಕಿನ ಕೇರೂರ ಗ್ರಾಮದಲ್ಲಿ 2018-19ರಲ್ಲಿ ಕರ್ನಾಟಕ ಸರ್ಕಾರದಿಂದ ಪ್ರಾರಂಭವಾದ ಕರ್ನಾಟಕ ಪಬ್ಲಿಕ್ ಶಾಲೆಯು ಸಮುದಾಯದ ಸಹಭಾಗಿತ್ವದಲ್ಲಿ ಹಲವು ಮೂಲ ಸೌಕರ್ಯಗಳನ್ನು ಹೊಂದಿದೆ. ಗ್ರಾಮೀಣ ಪ್ರದೇಶದ ನೂರಾರು ವಿದ್ಯಾರ್ಥಿಗಳು ಈ ಶಾಲೆಯಲ್ಲಿ ಶಿಕ್ಷಣ ಪಡೆದು ಉನ್ನತ ಸ್ಥಾನಕ್ಕೇರಿದ್ದರಿಂದ ವರ್ಷದಿಂದ ವರ್ಷಕ್ಕೆ ಗ್ರಾಮದ ಜನರು ಶಾಲೆಯ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆಯನ್ನು ನೀಡಿದ್ದಾರೆ.

5.17 ಎಕರೆ ಪ್ರದೇಶದಲ್ಲಿರುವ ಕೇರೂರಿನ ಪಬ್ಲಿಕ್ ಶಾಲೆಯಲ್ಲಿ ಎಲ್ ಕೆ ಜಿಯಿಂದ ಪಿಯುಸಿ ವರೆಗೆ ಕನ್ನಡ ಹಾಗೂ ಇಂಗ್ಲಿಷ್ ಮಾಧ್ಯಮದಲ್ಲಿ ಶಿಕ್ಷಣ ಪಡೆಯುವ ಅವಕಾಶವಿದೆ. ಪ್ರಾಥಮಿಕ ವಿಭಾಗದಲ್ಲಿ ಬಾಲಕ ಹಾಗೂ ಬಾಲಕಿಯರಿಗೆ ಪ್ರತ್ಯೇಕ ವಿಭಾಗಗಳಿದ್ದು, ಪ್ರತಿ ವಿಭಾಗದಲ್ಲಿ ತಲಾ 250 ವಿದ್ಯಾರ್ಥಿಗಳು ಇದ್ದಾರೆ. ಪ್ರೌಢ ವಿಭಾಗದಲ್ಲಿ 450 ವಿದ್ಯಾರ್ಥಿಗಳು ಓದುತ್ತಿದ್ದಾರೆ. ಪದವಿಪೂರ್ವ ವಿಭಾಗದ ಕಲಾ, ವಾಣಿಜ್ಯ, ವಿಜ್ಞಾನ ವಿಭಾಗದಲ್ಲಿ 350 ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ.

ಪಿಯು ಕಾಲೇಜಿನ ಆವರಣದಲ್ಲಿ ಗುರುಕುಲ ವನ ಹಾಗೂ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಆವರಣದಲ್ಲಿ ಸಸ್ಯ ಶ್ಯಾಮಲ ಉದ್ಯಾನವನವಿದ್ದು, ಇಲ್ಲಿ ಹೊಂಗೆ, ಬೇವು, ಬಸವನಪಾದ, ಗುಲ್‌ಮೋಹರ್ ಸೇರಿದಂತೆ 1 ಸಾವಿಕ್ಕೂ ಹೆಚ್ಚು ಗಿಡ ಮರಗಳಿವೆ. ಹೀಗಾಗಿ ಇಲ್ಲಿ ಪಕ್ಷಿ ಸಂಕುಲ ಹೆಚ್ಚಿದ್ದು, ವಿದ್ಯಾರ್ಥಿಗಳ ಕಲಿಕೆಗೆ ಉತ್ತಮವಾದ ವಾತಾವರಣವಿದೆ.

**ಶಾಲೆಗೆ ಹಲವು ಮೂಲ ಸೌಲಭ್ಯ**

ಶಾಲಾ ಆವರಣದಲ್ಲಿ ಗ್ರಾಮದ ಮುಖಂಡ ಮಲ್ಲಕಾರ್ಜುನ ಪಾಟೀಲ ಸಿಸಿ ಕ್ಯಾಮರಾಗಳನ್ನು ಅಳವಡಿಸಿದ್ದು, ಐಡಿಬಿಐ ಬ್ಯಾಂಕ್‌ನಿಂದ 2 ಲಕ್ಷ ಮೊತ್ತದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಿಸಲಾಗಿದೆ. ಬೆಂಗಳೂರು ಮೂಲದ ಅಗಸ್ತ್ರ ಫೌಂಡೇಷನ್ ಅವರು 2 ಲಕ್ಷ ಮೊತ್ತದ ಪ್ರಯೋಗಾಲಯ ಸಾಮಗ್ರಿಗಳನ್ನು ಕೊಡುಗೆಯಾಗಿ ನೀಡಿದ್ದಾರೆ.

ಹೀಗೆ ದಾನಿಗಳ ಸಹಾಯದಿಂದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಇನ್ನೂ ಹತ್ತು ಹಲವು ಸೌಕರ್ಯಗಳನ್ನು ಮಾಡಿಕೊಡಲಾಗಿದೆ. ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ ಹಾಗೂ ಶಾಸಕ ಗಣೇಶ ಹುಕ್ಕೇರಿ ಪ್ರಯತ್ನದಿಂದ 1.60 ಕೋಟಿ ವೆಚ್ಚದಲ್ಲಿ ಪ್ರಾಥಮಿಕ ವಿಭಾಗಕ್ಕೆ 6 ಕೊಠಡಿ ಹಾಗೂ ಪ್ರೌಢ ವಿಭಾಗಕ್ಕೆ 3 ಕೊಠಡಿ ಸೇರಿದಂತೆ ಒಟ್ಟು 9 ಸುಸಜ್ಜಿತ ತರಗತಿ ಕೋಣೆಗಳನ್ನು ನಿರ್ಮಿಸಿದ್ದು. ಶತಮಾನ ಪೂರೈಸಿದ ಕನ್ನಡ ಶಾಲೆಯ ಹಳೆಯ ಕಟ್ಟಡದ ಪುನರುಜ್ಜೀವನ ಕಾರ್ಯ ಭರದಿಂದ ಸಾಗಿದೆ.

ಕಳೆದ 7 ವರ್ಷಗಳಿಂದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಅಧ್ಯಯನ ಮಾಡಿದ ನೂರಾರು ವಿದ್ಯಾರ್ಥಿಗಳು ವಿವಿಧ ಉನ್ನತ ಮಟ್ಟದ ಕೋರ್ಸ್‌ಗಳಿಗೆ ಆಯ್ಕೆಯಾಗಿದ್ದು, ಕೆಲವರು ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ. ಹೀಗಾಗಿ ಸಮುದಾಯದ ಸಹಭಾಗಿತ್ವದಲ್ಲಿ ಶಾಲೆಯು ವರ್ಷದಿಂದ ವರ್ಷಕ್ಕೆ ಅಭಿವೃದ್ಧಿ ಹೊಂದುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ.

> ಗ್ರಾಮೀಣ ಪ್ರದೇಶದ ಮಕ್ಕಳಿಗೆ ಒಂದೇ ಸ್ಥಳದಲ್ಲಿ ಎಲ್ ಕೆ ಜಿಯಿಂದ ಪಿಯುಸಿವರೆಗೆ ಶಿಕ್ಷಣ ನೀಡುವ ಉದ್ದೇಶದಿಂದ ಈ ಶಾಲೆಯನ್ನು ತೆರೆದಿದ್ದು ಅನುಕೂಲವಾಗಿದೆ.
> -ಮಲ್ಲಿಕಾರ್ಜುನ ಪಾಟೀಲ, ಕೇರೂರ ಗ್ರಾಪಂ ಮಾಜಿ ಅಧ್ಯಕ್ಷ

> ಕೇರೂರಿನ ಪಬ್ಲಿಕ್ ಶಾಲೆಯಲ್ಲಿ ಉತ್ತಮ ಶಿಕ್ಷಣ ದೊರೆತಿದ್ದರಿಂದ ತಾನು ನೀಟ್ ಪರೀಕ್ಷೆ ಎದುರಿಸಿ ಸರ್ಕಾರಿ ಕೋಟಾದಲ್ಲಿ ಎಂಬಿಬಿಎಸ್ ಸೀಟ್ ಪಡೆದಿದ್ದೇನೆ -ಶಂಭುಲಿಂಗ ಪಾಟೀಲ, ಸಾಧನೆ ಮಾಡಿದ ವಿದ್ಯಾರ್ಥಿ

> ಸ್ಥಳೀಯ ಜನಪ್ರತಿನಿಧಿಗಳ ಹಾಗೂ ಸಮುದಾಯದ ಸಹಭಾಗಿತ್ವದಲ್ಲಿ ಶಾಲೆಯಲ್ಲಿ ಹಲವು ಸೌಕರ್ಯಗಳು ಇದ್ದು ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ.
> -ಎಂ.ಆರ್.ಭಾಗಾಯಿ, ಕೇರೂರ ಕರ್ನಾಟಕ ಪಬ್ಲಿಕ್ ಶಾಲೆಯ ಪ್ರಾಚಾರ್ಯ

ಉದಯ ವಾಹಿನಿ
ಪ್ರಾದೇಶಿಕ
ಸೋಮವಾರ
26 ಮೇ 2025


## ಮಿನಿ ನ್ಯೂಸ್

### ಭಾರಿ ಮಳ: ಕೊಚ್ಚಿ ಹೋದ ಹೆದ್ದಾರಿ, ಕುಮಟಾ-ಶಿರಸಿ ಸಂಪರ್ಕ ಕಡಿತ

• ಉದಯವಾಹಿನಿ ಕಾರವಾರ

ಭಾರಿ ಮಳೆಗೆ ಇಲ್ಲಿನ ದೇವಿಮನೆ ಘಟ್ಟದಲ್ಲಿ ರಾಷ್ಟ್ರೀಯ ಹೆದ್ದಾರಿಯೇ ಕೊಚ್ಚಿ ಹೋಗಿದ್ದು ಕುಮಟಾ ಶಿರಸಿ ಸಂಪರ್ಕ ಕಡಿತಗೊಂಡಿದೆ. ಮುಂಗಾರು ಆರಂಭಕ್ಕೆ ಮುನ್ನವೇ ರಣ ಮಳೆಗೆ ಸ್ಥಳೀಯರು ಬೆಚ್ಚಿ ಬಿದ್ದಿದ್ದಾರೆ. ಕಳೆದ ಒಂದು ವರ್ಷದಿಂದ ಹೆದ್ದಾರಿ ಕಾಮಗಾರಿ ನಡೆಯುತಿತ್ತು ನಿನ್ನೆ ಸುರಿದ ಭಾರೀ ಮಳೆಗೆ ರಸ್ತೆಯೇ ಕೊಚ್ಚಿಹೋಗಿದೆ. ಬೆಣ್ಣೆ ಹೊಳೆ ಹಳ್ಳದ ನೀರು ರಭಸವಾಗಿ ಹರಿದು ಹೆದ್ದಾರಿಯ ಬದಿಯಲ್ಲಿ ನಿರ್ಮಾಣ ಮಾಡಿದ್ದ ತಾತ್ಕಾಲಿಕ ರಸ್ತೆಯೂ ಸಂಪೂರ್ಣ ನಾಶವಾಗಿದೆ.

ಮುನ್ನೆಚ್ಚರಿಕೆ ಕ್ರಮವಾಗಿ ಜಿಲ್ಲಾಧಿಕಾರಿ ಲಕ್ಷ್ಮಿ ಪ್ರಿಯಾ ಅವರು ಕುಮಟಾ ಮೂಲಕ ದೇವಿಮನೆ ಘಟ್ಟ ಭಾಗದಲ್ಲಿ ವಾಹನ ಸಂಚಾರ ನಿರ್ಬಂಧಿಸಿ ಮಾಡಿ ಆದೇಶ ಹೊರಡಿಸಿದ್ದಾರೆ. ಸ್ಥಳೀಯರು ಕೂಡ ಎಚ್ಚರದಿಂದ ಇರುವಂತೆ ಮನವಿ ಮಾಡಿದ್ದಾರೆ.

### ಅಗ್ನಿ ಅವಘಡ ನಿರ್ವಹಣೆ ಪ್ರಾತ್ಯಕ್ಷಿಕೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಗೋಕಾಕ

ಜಲ ಸಂಪನ್ಮೂಲಗಳ ಸುರಕ್ಷತೆ, ರಕ್ಷಣೆ, ಸ್ವಚ್ಛತೆ ಮತ್ತು ನಿರ್ವಹಣಾ ಕ್ರಮಗಳನ್ನು ಅನುಸರಿಸುವ ಕುರಿತು ಹಿರೇನಂದಿ ಗ್ರಾಮ ಪಂಚಾಯಿತಿ ಜಲ ಸರಬರಾಜು ವಿಭಾಗದ ಮುಖ್ಯಸ್ಥ ಗಂಗಯ್ಯ ಹಿರೇಮಠ ವಿವರಿಸಿದರು. ತಾಲ್ಲೂಕಿನ ಹಿರೇನಂದಿ ಗ್ರಾಮದಲ್ಲಿ ಅರಭಾವಿಯ ಕಿತ್ತೂರು ರಾಣಿ ಚನ್ನಮ್ಮ ತೋಟಗಾರಿಕಾ ಮಹಾವಿದ್ಯಾಲಯ ಮತ್ತು ರಾಷ್ಟ್ರೀಯ ಸೇವಾ ಯೋಜನೆ ಅಡಿ ಹಮ್ಮಿಕೊಳ್ಳಲಾಗಿದ್ದ ಎನ್.ಎಸ್.ಎಸ್. ಶಿಬಿರದ ನಾಲ್ಕನೇ ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಎನ್.ಎಸ್.ಎಸ್. ವಿಭಾಗದ ಅಧಿಕಾರಿ ಪ್ರವೀಣಕುಮಾರ, ಪ್ರತಿಕ್ಷಾ ಹಾಗೂ ರಾಘವೇಂದ್ರ ಕೆ.ಎಸ್. ಮಾತನಾಡಿದರು.

'ಜಲ ಸಂಪನ್ಮೂಲ ಸಂರಕ್ಷಣೆ' ವಿಷಯದ ಕುರಿತು ಪ್ರಿಯಾಂಕಾ ಎಂ.ಕೆ. ಉಪನ್ಯಾಸ ನೀಡಿದರು. ಸ್ವಯಂ ಸೇವಕಿ ಸವಿತಾ ಕಾರ್ಯಕ್ರಮ ನಿರ್ವಹಿಸಿದರು. ಮಣಿಕಂಠ ವಂದಿಸಿದರು. ಅಗ್ನಿಶಾಮಕ ದಳದಿಂದ ಗ್ರಾಮದ ಕನಕದಾಸ ವೃತ್ತದಲ್ಲಿ ಅಗ್ನಿ ಅವಘಡಗಳನ್ನು ನಿರ್ವಹಿಸುವ ಕುರಿತು ಪ್ರಾತ್ಯಕ್ಷಿಕೆ ನಡೆಯಿತು. ಗೃಹಿಣಿಯರು ಮನೆಯಲ್ಲಿ ಅಡುಗೆ ಗ್ಯಾಸ್ ಸಿಲಿಂಡರ್ ಬಳಕೆ ಕುರಿತು ಮಾಹಿತಿ ನೀಡಲಾಯಿತು.

## ಶಾಸಕ ಅವಿನಾಶ ಜಾಧವ ಅವರೇ ಸಚಿವ ಖರ್ಗೆ ಅವರ ಬಗ್ಗೆ ಮಾತನಾಡುವಾಗ ನಾಲಿಗೆ ಹಿಡಿತ ಇರಲಿ: ಕೆಪಿಸಿಸಿ ಉಪಾಧ್ಯಕ್ಷ ಸುಭಾಷ ರಾಠೋಡ್ ತಿರುಗೇಟು

• ಉದಯವಾಹಿನಿ,ಚಿಂಚೋಳಿ

ಕೊಟ್ಟ ಕುದರೆಯನೇರಲರಿಯದೆ ಮತ್ತೊಂದು ಕುದುರೆಯನೇರ ಬಯಸುವವರು ವೀರರೂ ಅಲ್ಲ ಧೀರರೂ ಅಲ್ಲ,ಎಂಬಂತೆ ಚಿಂಚೋಳಿ ಶಾಸಕ ಡಾ.ಅವಿನಾಶ ಜಾಧವ ಅವರು ತಮ್ಮ ತಟ್ಟೆಯಲ್ಲಿ ಕೋಣ ಮಲಗಿದ್ದರೂ ಬೇರೆಯವರ ತಟ್ಟೆಯಲ್ಲಿನ ನೊಣ ತೆಗೆಯಲು ಹೋಗುತ್ತಿರುವುದು ಹಾಸ್ಯಾಸ್ಪದವಾಗಿದೆ ಎಂದು ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್ ತಿರುಗೇಟು ನೀಡಿದ್ದಾರೆ.

ಪತ್ರಿಕಾ ಪ್ರಕಟನೆ ಹೊರಡಿಸಿದ ಅವರು,ಉಸ್ತುವಾರಿ ಸಚಿವ ಪ್ರೀಯಾಂಕ್ ಖರ್ಗೆ ಕೆಡಿಪಿ ಸಭೆ ಮಾಡುತ್ತಿಲ್ಲಾ ಜಿಲ್ಲೆಯ ಅಧಿಕಾರಿಗಳಿಗೆ ಬೆಂಗಳೂರು ಕರೆಸಿ ಸಭೆ ಮಾಡುತ್ತಿದ್ದಾರೆ ಎಂದು ಶಾಸಕ ಅವಿನಾಶ ಜಾಧವ ಬೇಳಿಕೆಗೆ ತಿರುಗೇಟು ನೀಡಿದ ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್ ಅವರು,ಕೆಡಿಪಿ ಸಭೆ ಎನ್ನುವುದರ ಬಗ್ಗೆ ಗಂಧ ಗಾಳಿ ಗೊತ್ತಿದ್ದರೆ ಇಲ್ಲಿವರೆಗೆ ಶಾಸಕರು ಚಿಂಚೋಳಿಯಲ್ಲಿ ಅಧಿಕಾರಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅಭಿವೃದ್ಧಿಯ ಚಿಂತನೆ ಮಾಡಿ ಮುಂದೆ ಕ್ಷೇತ್ರಕ್ಕೆ ಆಗಬೇಕಾದ ಕೆಲಸ ಕಾರ್ಯಗಳ ಬಗ್ಗೆ ನೀಲಿ ನಕ್ಷೆ ಸಿದ್ದಪಡಿಸಿ ಸಂಬಂಧ ಪಟ್ಟ ಸಚಿವರುಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸರಕಾರದಿಂದ ಅನುದಾನ ತಂದು ಅಭಿವೃದ್ಧಿ ಪಡಿಸುವಲ್ಲಿ ನಿರತರಾಗಿರುತ್ತಿದ್ದರು.

ಅದೆಲ್ಲ ಬಿಟ್ಟು ತನ್ನ ಹುಳುಕನ್ನು ಮುಚ್ಚಿಕೊಳ್ಳಲಿಕ್ಕೆ ಖರ್ಗೆ ಅವರನ್ನು ದ್ವೇಷಿಸುವುದು ಖಂಡನೀಯ,ಒಂದು ವರ್ಷದಿಂದ ಕೆಡಿಪಿ ಸಭೆ ಮಾಡದ ಶಾಸಕರು ಉಸ್ತುವಾರಿ ಸಚಿವರ ಬಗ್ಗೆ ಮಾತನಾಡುವುದು ಭೂತದ ಬಾಯಲ್ಲಿ ಭಗವದ್ಗೀತೆ ಬಂದಂತೆ ಆಗಿದೆ, ಜಿಲ್ಲಾ ಉಸ್ತುವಾರಿ ಸಚಿ ಪ್ರಿಯಾಂಕ ಖರ್ಗೆ ಬಗ್ಗೆ ಮಾತನಾಡುವಾಗ ಸ್ವಲ್ಪ ಎಚ್ಚರಿಗೆ ಇಟ್ಟುಕೊಳ್ಳುವುದು ಒಳಿತು. ಚಿಂಚೋಳಿ ಪದವಿ ಕಾಲೇಜಿನಲ್ಲಿ ಪಿಜಿ ಸೆಂಟರ್ ಆರಂಭ ಮಾಡ್ತೀವಿ ಅಂತ ಹತ್ತಾರು ಸಲ ಹೇಳಿದ್ದೆ ನಿಮ್ಮ ಸಾಧನೆ ಆಯ್ತು ವಿನಃ ಪ್ರಾರಂಭ ಆಗಲಿಲ್ಲ,ಇತ್ತೀಚೆಗೆ ಜಿಲ್ಲೆಯಲ್ಲಿಯೇ ಅತಿ ಕಡಿಮೆ ಹತ್ತನೇ ತರಗತಿಯ ಫಲಿತಾಂಶ ಬಂದಿದ್ದು ಇಲ್ಲಿವರೆಗೆ ಶಿಕ್ಷಣ ಸುಧಾರಣೆ ಬಗ್ಗೆ ಒಂದು ಶಬ್ದ ತಮ್ಮಿಂದ ಬಂದಿಲ್ಲ. ಇಷ್ಟೆಲ್ಲಾ ಅಗೆದಷ್ಟು ಹುಳುಕು ನಿಮ್ಮಲ್ಲೇ ಇಟ್ಟುಕೊಂಡು,ಇಡೀ ರಾಜ್ಯಕ್ಕೆ ಮಾದರಿಯಾಗಿ ಕೆಲಸ ಮಾಡ್ತಾ ಇರುವ, ಅನೇಕ ದೊಡ್ಡ ದೊಡ್ಡ ಯೋಜನೆಗಳನ್ನು ಕಲಬುರ್ಗಿಗೆ ಕಲ್ಯಾಣ ಕರ್ನಾಟಕ ಭಾಗಕ್ಕೆ ತಂದಿರುವ ಸಚಿವ ಖರ್ಗೆ ಅವರ ಬಗ್ಗೆ ಮಾತನಾಡುವ ಅರ್ಹತೆ ನಿಮಗಿಲ್ಲ,ಮುಂದೆ ಸಚಿವರ ಬಗ್ಗೆ ಮಾತನಾಡುವಾಗ ನಾಲಿಗೆ ಮೇಲೆ ಹಿಡಿತ ಇರಲಿ,ಅಭಿವೃದ್ಧಿ ಖರ್ಗೆ ಅವರು ಯಾವತ್ತೂ ಪಕ್ಷಪಾತ ಮಾಡಿದ ಉದಾಹರಣೆ ಇಲ್ಲ,ಮೊದಲು ತಮ್ಮಲ್ಲಿ ಜವಾಬ್ದಾರಿ ನಿಭಾಯಿಸುವ ಶಕ್ತಿ ಇದ್ದರೆ ಕ್ಷೇತ್ರ ಅಭಿವೃದ್ಧಿ ಮಾಡಿ,ಅದುಬಿಟ್ಟು ಕಾಂಗ್ರೇಸ್ ಸಚಿವರ ಮೇಲೆ ಸರಕಾರದ ಮೇಲೆ ಸುಳ್ಳು ಆರೋಪ ಸಹಿಸೋದಿಲ್ಲ ಎಂದರು.



> ಚಿಂಚೋಳಿ ಶಾಸಕರಾಗಿ ತಾವು ಸಾಧಿಸಿದ ಘನಂದಾರಿ ಕೆಲಸಗಳು ಕ್ಷೇತ್ರದ ಜನ ನೋಡ್ತಾ ಇದ್ದಾರೆ. ಚಿಂಚೋಳಿಗೆ ನಿಮ್ಮ ಮತ್ತು ಬಿಜೆಪಿಯ ಕೊಡುಗೆ ಶೂನ್ಯ,ತಾವು ಕ್ಷೇತ್ರವನ್ನು ಅಭಿವೃದ್ಧಿಯಲ್ಲಿ 20 ವರ್ಷ ಹಿಂದೆ ತೆಗೆದುಕೊಂಡ ಹೋಗಿರುವುದು ನಿಮ್ಮ ಸಾಧನೆ,ತಾವು ಅಡಿಗಲ್ಲು ಮಾಡಿ ಜನರನ್ನು ಮರಳು ಮಾಡಿದ ಐನಾಪುರ ಭಾಗದ ಬಹುದಿನದ ಬೇಡಿಕೆ ಐನಾಪುರ ಏತ ನೀರಾವರಿ ಯೋಜನೆಗೆ ನಮ್ಮ ಸರಕಾರ ಚಾಲನೆ ಕೊಡ್ತಾ ಇದೆ,ಅಂದಿನ ಅರಣ್ಯ ಸಚಿವರಿಗೆ ಕರೆಸಿ ಅರಣ್ಯ ಕಾಲೇಜು ಹಾಗೂ ಪ್ರವಾಸಿ ತಾಣ ಮಾಡುತ್ತೇವೆ ಎಂದು ಸುಳ್ಳು ಹೇಳಿಸಿದ್ದೀರಿ ಇವಾಗ ನಮ್ಮ ಸರಕಾರ ಇದನ್ನು ಜಾರಿಗೆ ತರುವ ಕೆಲಸ ಮಾಡ್ತಾ ಇದೆ -ಸುಭಾಷ ರಾಠೋಡ್

## 3 ಸಾವಿರ ಎಕರೆ ಅರಣ್ಯಕ್ಕೆ ಜನರೇ ಕಾವಲು


• ಉದಯವಾಹಿನಿ ಹಾವೇರಿ

ಜಿಲ್ಲೆಯ ರಟ್ಟಿಹಳ್ಳಿ ತಾಲ್ಲೂಕಿನ ಗುಡ್ಡ ದಮಾದಾಪುರದ ಗ್ರಾಮಸ್ಥರು 3,000 ಎಕರೆ ಅರಣ್ಯ ಪ್ರದೇಶಕ್ಕೆ ಕಾವಲು ಕಾಯುತ್ತಿದ್ದು, ಅವರ ಕಾಯಕದಿಂದ ಅರಣ್ಯ ಪ್ರದೇಶವು ಹಸಿರಿನಿಂದ ಕಂಗೊಳಿಸುತ್ತಿದೆ.

ಪರಿಸರ ಕಾಳಜಿ ಹೊಂದಿರುವ ಗ್ರಾಮಸ್ಥರು, ಅರಣ್ಯ ರಕ್ಷಣೆಗಾಗಿ ಪಣ ತೊಟ್ಟಿರುವುದು ಇತರರಿಗೆ ಮಾದರಿಯಾಗಿದೆ. ಕೆಲ ವರ್ಷಗಳ ಹಿಂದೆ ಅರಣ್ಯ ಭೂಮಿಗಳಲ್ಲಿದ್ದ ಗಿಡಗಳನ್ನು ಕಡಿಸಿದ್ದ ರಾಜ್ಯ ಸರ್ಕಾರ, ಹರಿಹರದ ಬಿರ್ಲಾ ಕಂಪನಿಯವರಿಗೆ ರೆಯನ್ ಬಟ್ಟೆ ನೂಲು ತೆಗೆಯುವ ಕಚ್ಚಾ ಮಾಲು ಪೂರೈಸಿತ್ತು. ಇದಾದ ನಂತರ ಹೋರಾಟಕ್ಕೆ ಇಳಿದಿದ್ದ ಗ್ರಾಮಸ್ಥರು, ತಮ್ಮೂರಿನ ಅರಣ್ಯ ಪ್ರದೇಶದ ರಕ್ಷಕರಾಗಿ ನಿಂತುಕೊಂಡರು. ಗ್ರಾಮಕ್ಕೆ ಹೊಂದಿಕೊಂಡಿರುವ ಅರಣ್ಯ ಪ್ರದೇಶದಲ್ಲಿದ್ದ ಗಿಡಗಳನ್ನು ಉರುವಲು ಉದ್ದೇಶಕ್ಕಾಗಿ ಕೆಲವರು ಕಡಿಯುತ್ತಿದ್ದರು. ಜಾನುವಾರುಗಳಿಗೆ ಉತ್ತಮ ಮೇವು ಸಿಗುವುದೆಂದು ತಿಳಿದು ಹಲವರು, ಬೆಂಕಿ ಹಚ್ಚುತ್ತಿದ್ದರು. ಪ್ರಾಣಿಗಳನ್ನು ಬೇಟೆ ಯಾಡುವುದು, ಕಟ್ಟಿಗೆ ಕಳ್ಳ ಸಾಗಣೆ ಸೇರಿದಂತೆ ಹಲವು ಅಕ್ರಮ ಚಟುವಟಿಕೆಗಳು ನಡೆಯುತ್ತಿದ್ದವು. ಕಾಡು ಉಳಿದರೆ, ನಾಡು ಉಳಿಯುತ್ತದೆ ಎಂದು ತಿಳಿದ ಗ್ರಾಮಸ್ಥರು, ಅರಣ್ಯ ರಕ್ಷಣೆಗೆ ಒತ್ತು ನೀಡಲಾರಂಭಿಸಿದ್ದರು.

**ಕಾಡು ಉಳಿದರೆ ನಾಡು ಉಳಿಯುತ್ತದೆ**

> ಅರಣ್ಯ ಸಂಪತ್ತು ಉಳಿಸಿ-ಬೆಳೆಸುವ ಕೆಲಸ ಮಾಡುತ್ತಿದ್ದೇವೆ. ಅರಣ್ಯ ರಕ್ಷಣೆ ಎಂದರೆ, ಕೇವಲ ನರ್ಸರಿ ಬೆಳೆಸಿ ಸುಮ್ಮನಾಗುವುದಲ್ಲ. ಸಸಿಗಳನ್ನು ಹಚ್ಚಿ ಬಿಟ್ಟರೆ ಸಾಲದು, ಅವುಗಳನ್ನು ನಿರಂತರವಾಗಿ ರಕ್ಷಿಸುವುದೂ ಮುಖ್ಯ. ನಮ್ಮೂರಿನ ಜನರೆಲ್ಲರೂ ಸೇರಿ ಅರಣ್ಯ ಪ್ರದೇಶ ರಕ್ಷಿಸುತ್ತಿದ್ದು, ಮುಂಬರುವ ದಿನಗಳಲ್ಲೂ ಅದಕ್ಕೆ ಯಾವುದೇ ದಕ್ಕೆಯಾಗಲು ಬಿಡುವುದಿಲ್ಲ -ಪರಮೇಶಪ್ಪ ಕಾಗಿನೆಲ್ಲಿ


ಉದಯವಾಹಿನಿ ಚಿತ್ರ

## ಮಹಾನಗರ ಪಾಲಿಕೆ ಚುನಾವಣೆ: ಚುರುಕಾದ ರಾಜಕೀಯ ಚಟುವಟಿಕೆ

• ಉದಯವಾಹಿನಿ, ಶಿವಮೊಗ್ಗ


ಉದಯವಾಹಿನಿ ಚಿತ್ರ

ಕರ್ನಾಟಕ ಸರ್ಕಾರದಿಂದ ಪ್ರತಿಕ್ರಿಯೆ ಬಂದ ತಕ್ಷಣ ಪಾಲಿಕೆ ಚುನಾವಣೆಗೆ ದಿನಾಂಕ ನಿಗದಿಯಾಗಲಿದೆ. ಆದ್ದರಿಂದ ಶಿವಮೊಗ್ಗ ಮಹಾನಗರ ಪಾಲಿಕೆ ಚುನಾವಣೆಗೆ ರಾಜಕೀಯ ಚಟುವಟಿಕೆ ಬಿರುಸಾಗಿದೆ. ಪಾಲಿಕೆ ವ್ಯಾಪ್ತಿಯಲ್ಲಿ 35 ವಾರ್ಡ್‌ಗಳಿದ್ದು, 2011ರ ಜನಗಣತಿ ಪ್ರಕಾರ 3.22 ಲಕ್ಷ ಜನಸಂಖ್ಯೆ ಇದೆ.

ಒಟ್ಟು 288 ಮತಗಟ್ಟೆಗಳಿವೆ. 2024-2025ರಂತೆ 1,33,479 ಪುರುಷ, 1,41,480 ಮಹಿಳೆ, 17 ಇತರೆ ಸೇರಿದಂತೆ 27,4976 ಮತದಾರರು ಇದ್ದಾರೆ. ರಾಜ್ಯ ಚುನಾವಣಾ ಆಯೋಗದ ಆಯುಕ್ತ ಜಿ. ಎಸ್. ಸಂಗ್ರೇಶಿ ಮಾತನಾಡಿ, ಶಿವಮೊಗ್ಗ ಮಹಾನಗರ ಪಾಲಿಕೆಗೆ ಚುನಾವಣೆ ನಡೆಸುವ ಸಂಬಂಧ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದು, ಈ ಕುರಿತು ಸರ್ಕಾರದಿಂದ ಪ್ರತಿಕ್ರಿಯೆ ಬಂದ ಕೂಡಲೇ ಚುನಾವಣೆಗೆ ದಿನಾಂಕ ನಿಗದಿಗೊಳಿಸಲಾಗುವುದು ಎಂದು ಹೇಳಿದ್ದಾರೆ. ಶಿವಮೊಗ್ಗ ಪಾಲಿಕೆಯಲ್ಲಿ ಚುನಾವಣೆ ನಡೆಸಲು ಮೀಸಲಾತಿ ಪಟ್ಟಿ ನೀಡುವಂತೆ ಸರ್ಕಾರಕ್ಕೆ ಹಲವಾರು ಬಾರಿ ಪತ್ರ ವ್ಯವಹಾರ ಮಾಡಲಾಗಿದೆ.

ಸಂಬಂಧಿಸಿದ ಮಂತ್ರಿಗಳು, ಮಾನ್ಯ ಮುಖ್ಯಮಂತ್ರಿಗಳಿಗೆ ಸಹ ಕೋರಲಾಗಿದೆ. ಸರ್ಕಾರದಿಂದ ಈ ಕುರಿತು ಸ್ಪಂದನೆ ಬಾರದ ಕಾರಣ ಸುಪ್ರೀಂಕೋರ್ಟ್ ಆದೇಶದನ್ವಯ ಉಚ್ಚ ನ್ಯಾಯಾಲಯಕ್ಕೆ ರಿಟ್ ಸಲ್ಲಿಸಿ ಪಾಲಿಕೆ ಚುನಾವಣೆ ನಡೆಸಲು ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಮನವಿ ಮಾಡಲಾಗಿದೆ.

**ಕರಡು ಮತದಾರರ ಪಟ್ಟಿ ಸಿದ್ದ**

ಜೂನ್ ವೇಳೆಗೆ ಉಚ್ಚ ನ್ಯಾಯಾಲಯದಲ್ಲಿ ಈ ರಿಟ್‌ಗೆ ಸಂಬಂಧಿಸಿದಂತೆ ವಿಚಾರಣೆ ನಡೆಯಲಿದೆ. ಚುನಾವಣೆ ಕುರಿತು ಸರ್ಕಾರದಿಂದ ಸ್ಪಂದನೆ ಬಂದ ತಕ್ಷಣ ದಿನಾಂಕ ನಿಗದಿಗೊಳಿಸಲಾಗುತ್ತದೆ. ಕಳೆದ ಆಗಸ್ಟ್ ತಿಂಗಳಿನಲ್ಲಿಯೇ ಚುನಾವಣೆಗೆ ಸಂಬಂಧಿಸಿದಂತೆ ಮತದಾತರರ ಪಟ್ಟಿ ತಯಾರಿಸುವ ವೇಳಾಪಟ್ಟಿ ಹೊರಡಿಸಲಾಗಿತ್ತು. ಕಾರಣಾಂತರದಿಂದ ಅದರ ಪ್ರಕಾರ ಅಂತಿಮ ಮತದಾರರ ಪಟ್ಟಿ ಸಿದ್ದವಾಗಿಲ್ಲ. ಕರಡು ಮತದಾರರ ಪಟ್ಟಿ ಮಾತ್ರ ಸಿದ್ದವಾಗಿದೆ.

## ಉಸ್ತುವಾರಿ ಸಚಿವರು ಕೆಡಿಪಿ ಸಭೆ ಮಾಡಿಲ್ಲವೆಂದು ಆರೋಪ ಮಾಡಿರುವ ಶಾಸಕರು ಮೊದಲು ಚಿಂಚೋಳಿಯಲ್ಲಿ ತಾವು ಕೆಡಿಪಿ ಸಭೆ ನಡೆಸುವಂತೆ ಪಾಟೀಲ ತಿರುಗೇಟು

• ಉದಯವಾಹಿನಿ, ಚಿಂಚೋಳಿ

ತಮ್ಮದೇ ಪಕ್ಷದ ಮುಖಂಡರು ಶಾಸಕರನ್ನು ಹುಡುಕಿ ಕೊಡಿ ಎಂದು ಮಾಧ್ಯಮಗಳಲ್ಲಿ ಕೇಳುವಾಗ ಯಾವ ಮುಖ ಇಟ್ಕೊಂಡು ಸಚಿವ ಪ್ರಿಯಾಂಕ್ ಖರ್ಗೆ ಅವರ ಬಗ್ಗೆ ಹಗುರವಾಗಿ ಮಾತು ಆಡ್ತೀರಾ,ಖರ್ಗೆ ಅವರು ಕೆಡಿಪಿ ಸಭೆ ಮಾಡಿಲ್ಲ ಅಧಿಕಾರಿಗಳನ್ನು ಬೆಂಗಳೂರಿಗೆ ಕರೆಸ್ತಾರೆ ಅಂತ ಹೇಳುವ ನೀವು ಬೆಂಗಳೂರಿನಲ್ಲಿ ಸಭೆ ಮಾಡುವುದು ಒಂದು ದೊಡ್ಡ ಅಪರಾಧ ಅನ್ನುವ ರೀತಿ ಹೇಳ್ತಿದ್ದೀರಿ, ಮೊದಲು ನೀವು ಎಷ್ಟು ದಿನ ಚಿಂಚೋಳಿಯಲ್ಲಿ ವಾಸ್ತವ್ಯ ಮಾಡಿದ್ದೀರಿ ಅನ್ನುವುದನ್ನು ನೆನಪು ಮಾಡಿಕೊಳ್ಳಿ ತಾವು ಚಿಂಚೋಳಿಯಲ್ಲಿ ಕೆಡಿಪಿ ಸಭೆ ನಡೆಸಿ 11ತಿಂಗಳು ಆಯ್ತು ಅದನ್ನು ನೆನಪಿಸಿಕೊಳ್ಳಿ,ಕೆಡಿಪಿ ಸಭೆ ಎಷ್ಟು ದಿನಕ್ಕೊಮ್ಮೆ ಮಾಡಬೇಕು ತಾವು ಶಾಸಕರಾದ ಮೇಲೆ ಎಷ್ಟು ಕೆಡಿಪಿ ಸಭೆ ಮಾಡಿದ್ದೀರಿ ಅನ್ನುವ ವಿಚಾರ ಜನತೆಗೆ ಮೊದಲು ತಿಳಿಸಬೇಕು ಎಂದು ಕಾಂಗ್ರೆಸ್ ವಕ್ತಾರ ಶರಣುಪಾಟೀಲ ಮೋತಕಪಳ್ಳಿ ತಿರುಗೇಟು ನೀಡಿದ್ದಾರೆ.

ಪತ್ರಿಕಾ ಪ್ರಕಟನೆ ಹೊರಡಿಸಿದ ಅವರು,ಕೊನೆಯ ತ್ರೈಮಾಸಿಕ ಕೆಡಿಪಿ ಸಭೆಯು 2024ರ ಜುಲೈ 12ರಂದು ಜರುಗಿದ್ದು ಶಾಸಕರು ಕೂಡಲೇ ಅಭಿವೃದ್ಧಿ ಕುರಿತು ತ್ರೈಮಾಸಿಕ ಕೆಡಿಪಿ ಸಭೆ ಕರೆದು ನಂತರ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಬಗ್ಗೆ ಮಾತನಾಡಲಿ. ಎರಡನೇ ಬಾರಿಗೆ ಶಾಸಕರಾಗಿ ಆಯ್ಕೆಯಾದ ಡಾ.ಅವಿನಾಶ ಜಾಧವ ಕ್ಷೇತ್ರದಲ್ಲಿ ತಾವು ಮಾಡಿದ ಸಾಧನೆ ಏನು? ಚಿಂಚೋಳಿಗೆ ತಮ್ಮ ಕೊಡುಗೆ ಏನು ಎನ್ನುವುದು ಮೊದಲು ಆತ್ಮಾವಲೋಕನ ಮಾಡಿಕೊಳ್ಳಬೇಕು,ಸರ್ಕಾರದಿಂದ ಅನುದಾನ ತರುವುದಿರಲಿ 2013ರಲ್ಲಿ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರಕಾರ ಕೊಟ್ಟ ಅನುದಾನವನ್ನು ಸದುಪಯೋಗ ಪಡಿಸಿಕೊಳ್ಳುವುದು ತಮ್ಮಿಂದ ಆಗಿಲ್ಲ,ಕಾಂಗ್ರೆಸ್ ಸರಕಾರ ಕೊಟ್ಟ ಅನುದಾನವನ್ನು ಹೊಳೆಯಲ್ಲಿ ಹುಣಸೆ ಹಣ್ಣು ತೊಳೆದ ಹಾಗೆ ಮಾಡಿದ್ದೀರಿ,ಇದಕ್ಕೆ ಜೀವಂತ **ಉದಾ:** ತಾಲ್ಲೂಕಾ ಒಳಾಂಗಣ ಕ್ರೀಡಾಂಗಣ,ಅಷ್ಟೇ ಅಲ್ಲ ನೂತನ ತಹಶೀಲ್ ಕಚೇರಿಗೆ ಅನುದಾನ ಕೊಟ್ಟಿದ್ದು ಕಾಂಗ್ರೆಸ್ ಸರಕಾರ ನಿಮಗೆ ಅದಕ್ಕೆ ಪೀಠೋಪಕರಣ ತರಲಿಕ್ಕೆ ಆಗಿಲ್ಲ,ಇವತ್ತಿಗೂ ಹಾಳು ಬಿದ್ದಿದೆ ಮತ್ತೆ ರಿಪೇರಿ ಕಾರ್ಯ ಹಂತಕ್ಕೆ ತಲುಪಿದೆ. ಶಾಪಿಂಗ್ ಮಾಲ್ ಗೆ ಕೊಟ್ಟ ಅನುದಾನದ ಸದ್ಬಳಕೆಯ ಕಥೆ ಎಲ್ಲಿಗೆ ಬಂದಿದೆ ಅನ್ನುವುದು ಸ್ಥಳೀಯ ಜನ ನೋಡ್ತಾಯಿದ್ದಾರೆ,ಎರಡನೇ ಬಾರಿ ಚುನಾವಣೆ ಗಿಮಿಕ್‌ಗಾಗಿ ಜನರನ್ನು ಮರಳು ಮಾಡಲು ಮಾಡಿದ ಅನೇಕ ಅಡಿಗಲ್ಲುಗಳ ಬಗ್ಗೆ ಒಂದು ಬಾರಿ ವಿಚಾರ ಮಾಡುವುದು ಒಳಿತುವೆಂದರು.

ಸಚಿವ ಖರ್ಗೆ ಅವರು ಕಲಬುರಗಿ ಜಿಲ್ಲೆಯ ಮೊದಲ ಜನ ಸ್ಪಂದನ ಕಾರ್ಯಕ್ರಮ ನಡೆಸಿದ್ದು ಚಿಂಚೋಳಿಯಲ್ಲಿ ಅವರು ಯಾವತ್ತೂ ಚಿಂಚೋಳಿ ಬಗ್ಗೆ ವಿಶೇಷ ಆಸಕ್ತಿ ಹೊಂದಿದ್ದಾರೆ,ಚಿಂಚೋಳಿ ಶಾಸಕರು ರಾಜಕೀಯ ಬಿಟ್ಟು ಅಭಿವೃದ್ಧಿ ಕಡೆ ಗಮನ ಕೊಡುವುದು ಸೂಕ್ತ ಕೂಡಲೇ ಕೆಡಿಪಿ ಸಭೆ ಕರೆದು ಕ್ಷೇತ್ರದ ಆಗು ಹೋಗುಗಳ ಬಗ್ಗೆ ಸಂಪೂರ್ಣ ಮಾಹಿತಿ ಪಡೆದು ಸಕಾರಾತ್ಮಕ ದಾರಿಯಲ್ಲಿ ಸರಕಾರದೊಂದಿಗೆ ಸ್ಪಂದಿಸುವಂತೆ ಅವರು ಒತ್ತಾಯಿಸಿದರು.



> ಸಚಿವ ಪ್ರಿಯಾಂಕ್ ಖರ್ಗೆರವರ ಇಲಾಖೆಗಳು ಯಾವುವು, ಇಲಾಖೆಗಳ ವ್ಯಾಪ್ತಿ ಆಳ ಅಗಲ ಎಷ್ಟಿದೆ ಅನ್ನುವುದು ಮೊದಲು ತಿಳಿಯುವುದು ಸೂಕ್ತ,ಸುಮಾರು 70ಕ್ಕೂ ಹೆಚ್ಚು ಐಎಎಸ್ ಅಧಿಕಾರಿಗಳು ಖರ್ಗೆರವರ ಇಲಾಖೆಗಳಡಿ ಕೆಲಸ ಮಾಡ್ತಾರೆ ಸರಕಾರ ಜನಪರವಾಗಿ ಕೆಲಸ ಮಾಡಬೇಕಾದರೆ ಸಚಿವರು ಹೇಗೆ ದುಡಿಯಬೇಕು ಎನ್ನುವುದನ್ನು ಪ್ರಿಯಾಂಕ್ ಖರ್ಗೆರವರನ್ನು ನೋಡಿ ಕಲಿಯಬೇಕು,ಯಾರನ್ನೋ ಖುಷಿ ಪಡಿಸಲಿಕ್ಕೆ ಶಾಸಕರು ಬಲಿಪಶು ಆಗಿ ಈ ರೀತಿ ಹೇಳಿಕೆ ಕೊಡುವುದು ಸರಿಯಲ್ಲ, ಸ್ವಂತ ಕ್ಷೇತ್ರದ ಅಭಿವೃದ್ಧಿಯ ಚಿಂತನೆ ಇರುವ ಯಾವ ಶಾಸಕರು ತಮ್ಮದೇ ಜಿಲ್ಲಾ ಉಸ್ತುವಾರಿ ಸಚಿವರ ಬಗ್ಗೆ ಹೀಗೆ ನಿರಾಧಾರ ಅಸಂಬದ್ಧ ಹೇಳಿಕೆ ಕೊಡಲ್ಲ -ಶರಣುಪಾಟೀಲ ಮೋತಕಪಳ್ಳಿ

## ಸಮರ್ಪಕ ಬೀಜ, ಗೊಬ್ಬರ ಪೂರೈಕೆಗೆ ಆಗ್ರಹ

• ಉದಯವಾಹಿನಿ, ಕುಂದಗೋಳ

ಕುಂದಗೋಳ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ನಡೆದ ರೈತರು ಮತ್ತು ಅಗ್ರೋ ಕೇಂದ್ರದ ಮಾಲೀಕರ ಸಭೆಯಲ್ಲಿ ರೈತರಿಗೆ ಬೀಜ, ಗೊಬ್ಬರ, ರಾಸಾಯನಿಕಗಳನ್ನು ಪೂರೈಸುವ ಅಗ್ರೋ ಕೇಂದ್ರಗಳು ಅಧಿಕ ಮೊತ್ತ ಪಡೆದು ಕೃಷಿ ವಸ್ತುಗಳನ್ನು ನೀಡಬಾರದು ಎಂಬ ಅನೇಕ ರೈತರ ಆಗ್ರಹ ಕೇಳಿಬಂದು ಅಗ್ರೋ ಕೇಂದ್ರದ ಮಾಲೀಕರು ಹಾಗೂ ರೈತರ ಮಧ್ಯೆ ಗೊಂದಲ-ಗದ್ದಲಗಳು ನಡೆದವು.

ರೈತರು ಆಗ್ರಹ ವ್ಯಕ್ತಪಡಿಸುತ್ತ ನಮಗೆ ಬೇಕಾದ ಗೊಬ್ಬರ ಮಾರುವಾಗ ನೀವು ನಮ್ಮಿಂದ ಹೆಚ್ಚಿನ ಹಣ ಪಡೆಯುತ್ತೀರಿ, ಅಲ್ಲದೆ ಒಂದು ವಸ್ತುವಿನೊಂದಿಗೆ ಮತ್ತೊಂದು ವಸ್ತು ನೀಡಿ ಅಧಿಕ ಹಣ ಸರಿದೂಗಿಸುತ್ತೀರಿ. ಮತ್ತು ಕಳಪೆ ಬೀಜ ಮಾರಾಟ ಮಾಡುವುದು ಸರಿಯಲ್ಲ. ಅಂತವರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಕೃಷಿಕ ಸಮಾಜದ ತಾಲ್ಲೂಕಾಧ್ಯಕ್ಷ ಎ.ಎಂ.ಕಟಗಿ ಅವರು ಮಾತನಾಡಿ ರೈತರ ನಿಲುವನ್ನು ಅರ್ಥ ಮಾಡಿಕೊಂಡು ಸಾಗೋಣ, ನಿಮ್ಮ ಕಷ್ಟ-ನಷ್ಟ ಕುರಿತು ಚರ್ಚಿಸಿ ಬಗೆಹರಿಸಿಕೊಳ್ಳಿ ಎಂದರು.

ನವದೆಹಲಿ ರತ್ನ ಭಾರತ ಸಮಾಜ ಅಧ್ಯಕ್ಷ ಹೇಮನಗೌಡ ಬಸವನಗೌಡ್ರ, ಮಾತನಾಡಿ ನಿಮಗೆ ನಷ್ಟ ಆಗುವುದಾದರೆ ಸರ್ಕಾರದೊಂದಿಗೆ ಮಾತನಾಡಿಕೊಳ್ಳಿರಿ.

ಆದರೆ ನಮ್ಮ ರೈತರಿಗೆ ಯಾವುದೇ ರೀತಿ ಹೊರೆಯಾಗಬಾರದು. ಅದರಂತೆ ಕಳಪೆ ಬೀಜಗಳನ್ನು ಮಾರಾಟ ಮಾಡಿ ರೈತರನ್ನು ಕಷ್ಟಕ್ಕೆ ನೂಕಬಾರದು. ಒಂದು ವೇಳೆ ಹೀಗಾದರೆ ನಿಮ್ಮ ವಿರುದ್ಧ ಪ್ರತಿಭಟನೆ ನಡೆಸಲಾಗುತ್ತದೆ ಎಂದು ಎಚ್ಚರಿಸಿದರು.

### ಉತ್ತಮ ಪ್ರವಾಸಿ ಮಾರ್ಗದರ್ಶಕರಾಗಲು ಉತ್ತಮ ಆರೋಗ್ಯ ಹೊಂದುವುದು ಅವಶ್ಯಕ

# ಪ್ರವಾಸೋದ್ಯಮ ಸಪ್ತಾಹದಲ್ಲಿ ಯೋಗ ತರಬೇತಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿತ್ರದುರ್ಗ

ಪ್ರವಾಸಿ ಮಾರ್ಗದರ್ಶಕರು ನಿರಂತರವಾಗಿ ನಡೆಯುವುದು ನಿಲ್ಲುವುದು, ಕೆಲವೊಂದು ಸಮಯ ಭಾರವಾದ ವಸ್ತುಗಳನ್ನು (ಉದಾಹರಣೆಗೆ ಲಗೇಜ್) ಎತ್ತುವುದು ಮತ್ತು ಪ್ರಯಾಣಿಕರೊಂದಿಗೆ ವಿವಿಧ ಸ್ಥಳಗಳಿಗೆ ತೆರಳುವಂತಹ ದೈಹಿಕ ಚಟುವಟಿಕೆಗಳಲ್ಲಿ ತೊಡಗುತ್ತಾರೆ. ಅದಕ್ಕಾಗಿ ಅವರು ತಮ್ಮ ದೇಹವನ್ನು ಸದೃಢ ಮತ್ತು ಆಕರ್ಶಕವಾಗಿ ಇಟ್ಟುಕೊಳ್ಳುವುದಕ್ಕಾಗಿ ಪ್ರತಿದಿನ ಯೋಗಭ್ಯಾಸ ಮಾಡುವುದು ಮುಖ್ಯ ಎಂದು ಯೋಗ ಗುರು ರವಿ ಕೆ.ಅಂಬೇಕರ್ ಅಭಿಪ್ರಾಯ ಪಟ್ಟಿದ್ದಾರೆ.

ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಹೋಟೆಲ್ ಮಯೂರದುರ್ಗ ಘಟಕ ಚಿತ್ರದುರ್ಗ ವತಿಯಿಂದ ನಗರದ ಕೋಟೆ ಮುಂಭಾಗದಲ್ಲಿರುವ ಸರ್ಕಾರಿ ಸ್ವಾಮ್ಯದ ಹೋಟೆಲ್ ಮಯೂರದುರ್ಗ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಲಾಗಿದ್ದ ಯೋಗ ಸಪ್ತಾಹ ಕಾರ್ಯಕ್ರಮದಲ್ಲಿ ಕೋಟೆಯ ಪ್ರವಾಸಿ ಮಾರ್ಗದರ್ಶಕರೂ ಸೇರಿದಂತೆ ನಿಗಮದ ಸಿಬ್ಬಂದಿ ವರ್ಗದವರಿಗೆ ಯೋಗ ತರಬೇತಿ ನೀಡಿ ಅವರು ಮಾತನಾಡುತ್ತಾ ಅವರು ಪ್ರವಾಸಿ ಮಾರ್ಗದರ್ಶಕರಾದವರು ಪ್ರವಾಸಿಗರ ನಿರೀಕ್ಷೆಗಳನ್ನು ಪೂರೈಸುವುದು, ದೀರ್ಘ ಗಂಟೆಗಳ ಕಾಲ ಕೆಲಸ ಮಾಡುವುದರಿಂದ ಮಾನಸಿಕವಾಗಿ ಒತ್ತಡವನ್ನು ಉಂಟುಮಾಡಬಹುದು. ಉತ್ತಮ ಮಾನಸಿಕ ಆರೋಗ್ಯವು ಈ ಒತ್ತಡವನ್ನು ನಿರ್ವಹಿಸಲು ಮತ್ತು ಶಾಂತವಾಗಿ ಪ್ರವಾಸಿಗರಿಗೆ ಮಾರ್ಗದರ್ಶನ ನೀಡಲು ನೆರವಾಗುತ್ತದೆ. ನಿತ್ಯ ಯೋಗಭ್ಯಾಸ ಈ ಎಲ್ಲಾ ತೊಂದರೆಗಳನ್ನು ನಿವಾರಿಸಲು ನೆರವಾಗಲಿದೆ ಎಂದು ತಿಳಿಸಿದರು.

ಯೋಗ ಸಪ್ತಾಹ ಕಾರ್ಯಕ್ರಮದಲ್ಲಿ ಚಿತ್ರದುರ್ಗದ ಸಾಹಸಿಗ ಜ್ಯೋತಿರಾಜ್, ಯೋಗ ಶಿಕ್ಷಕಿ ಮಂಜುಳಾ ರಾಜೇಶ್, ನಿವೃತ್ತ ಪೋಲೀಸ್ ಅಧಿಕಾರಿ ಮಲ್ಲಿಕಾರ್ಜುನ ಚಾರ್ ಸೇರಿದಂತೆ ಹಲವಾರು ಪ್ರವಾಸಿಗರು, ಹಾಗೂ ಪ್ರವಾಸೋದ್ಯಮ ನಿಗಮದ ಪ್ರವಾಸಿ ಮಾರ್ಗದರ್ಶಕರು ಭಾಗವಹಿಸಿದ್ದರು.

**ಪ್ರತಿದಿನ ಯೋಗಭ್ಯಾಸ ಮಾಡುವುದು ಮುಖ್ಯ**

> ಪ್ರವಾಸೋದ್ಯಮ ಸಪ್ತಾಹವು ಪ್ರವಾಸೋದ್ಯಮವನ್ನು ಉತ್ತೇಜಿಸಲು ಮತ್ತು ಅದರ ಬಗ್ಗೆ ಜಾಗೃತಿ ಮೂಡಿಸಲು ಏರ್ಪಡಿಸಲಾದ ಒಂದು ವಾರದ ಕಾರ್ಯಕ್ರಮ. ದಿನಾಂಕ ಮೇ 22 ರಿಂದ 28ರವರೆಗೆ ಎಳುದಿನಗಳು ಪ್ರವಾಸಿಗರಿಗಾಗಿ ಆಹಾರಮೇಳ, ಚಾರಣ, ಯೋಗ ತರಬೇತಿ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು ಇದು ಪ್ರವಾಸೋದ್ಯಮದ ಪ್ರಾಮುಖ್ಯತೆಯನ್ನು ತಿಳಿಸುವುದು, ಪ್ರವಾಸಿಗರಿಗೆ ಪ್ರವಾಸಿ ತಾಣಗಳ ಬಗ್ಗೆ ಜ್ಞಾನ ನೀಡುವುದು ಮತ್ತು ಪ್ರವಾಸೋದ್ಯಮದ ಉದ್ಯಮಗಳನ್ನು ಉತ್ತೇಜಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಇದರಲ್ಲಿ ಯೋಗ ಸಪ್ತಾಹ ಕಾರ್ಯಕ್ರಮ ಪ್ರವಾಸಿಗರಿಗೆ ಮಾತ್ರವಲ್ಲದೆ ನಮ್ಮ ಐತಿಹಾಸಿಕ ಕೋಟೆ ಪ್ರವಾಸಿ ಮಾರ್ಗದರ್ಶಕರಿಗೂ ಆರೋಗ್ಯ ಸುಧಾರಿಸಿಕೊಳ್ಳಲು ಅನುಕೂಲವಾಗಲಿದೆ
> -ಚೇತನ್ ಕುಮಾರ್, ಹೋಟೆಲ್ ಮಯೂರದುರ್ಗದ ವ್ಯವಸ್ಥಾಪಕ

## ಜೂನ್ ತಿಂಗಳಲ್ಲಿ ಒಳಮೀಸಲಾತಿ ಘೋಷಣೆಯಾಗುವ ವಿಶ್ವಾಸ

• ಉದಯವಾಹಿನಿ, ಬಳ್ಳಾರಿ


ಉದಯವಾಹಿನಿ ಚಿತ್ರ

ಒಳ ಮೀಸಲಾತಿ ಘೋಷಣೆ ಮಾಡುವ ಹಿನ್ನೆಲೆ ರಾಜ್ಯಾದ್ಯಂತ ಜಾತಿ ಗಣತಿ ನಡೆದಿದೆ. ಮೇ ಅಂತ್ಯಕ್ಕೆ ಜಾತಿ ಗಣತಿ ಮುಗಿಯುವ ವಿಶ್ವಾಸವಿದೆ. ಜೂನ್ ತಿಂಗಳಲ್ಲಿ ಒಳಮೀಸಲಾತಿ ಘೋಷಣೆಯಾಗುವ ವಿಶ್ವಾಸವಿದೆ ಎಂದು ಮಾಜಿ ಸಚಿವ, ಒಳ ಮೀಸಲಾತಿ ಹೋರಾಟಗಾರ ಹೆಚ್. ಆಂಜನೇಯ ಹೇಳಿದ್ದಾರೆ.


ನಗರದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕೆಲವರು ಬೇಡ ಜಂಗಮರು ಜಾತಿ ಗಣತಿ ಲಾಭ ಪಡೆಯಲು ಯತ್ನ ಮಾಡ್ತಿದ್ದಾರೆ. ನಕಲಿ ಸರ್ಟಿಫಿಕೇಟ್ ತೆಗೆದು ಕೊಂಡ್ರೇ ಕೊಟ್ಟವನು ಮತ್ತು ತೆಗೆದುಕೊಂಡವರ ಇಬ್ಬರನ್ನೂ ಜೈಲಿಗೆ ಕಳುಹಿಸುತ್ತೇವೆ. ಮಾದಿಗರ ಹಕ್ಕು ಕಸಿದುಕೊಳ್ಳಲು ಯತ್ನಿಸಿದರೇ ಸುಮ್ಮನೆ ಇರಲು ಸಾದ್ಯವಿಲ್ಲ ಈ ಬಗ್ಗೆ ಈಗಾಗಲೇ ಆಯೋಗದ ಗಮನಕ್ಕೆ ತರಲಾಗಿದೆ.

ಕಳೆದ ಮೂವತ್ತೈದು ವರ್ಷದಲ್ಲಿ ಮೀಸಲಾತಿ ಪಡೆಯುವುದಕ್ಕಾಗಿ ಹೋರಾಟ ನಡೆಯುತ್ತಿದೆ. ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಸಿಕ್ಕಿಲ್ಲ. ಇದೀಗ ಜಾತಿ ಗಣತಿ ನಡೆದಿದ್ದ, ಒಳ ಮೀಸಲಾತಿಗೆ ಎಲ್ಲಾ ಸರ್ಕಾರ ಸಪೋರ್ಟ್ ಮಾಡಿದೆ ಎಂದರು. ಮೀಸಲಾತಿ ಕ್ಷೇತ್ರದಲ್ಲಿ ಕೆಲವರು ಸ್ಪರ್ಧೆ ಮಾಡ್ತಾರೆ. ಆದ್ರೇ ಇದರ ಬಗ್ಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರ ಬದ್ಧತೆ ಪ್ರದರ್ಶಿಸಬೇಕು. ಕೆಲವರು ಮಲ್ಲಿಕಾರ್ಜುನ ಖರ್ಗೆ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿಸುಳ್ಳು ಹೇಳ್ತಾರೆ ಬೇಡ ಜಂಗಮರು ಮೀಸಲಾತಿಗೆ ಅರ್ಹರು ಎಂದು ಸಮರ್ಥನೆ ಮಾಡಿಕೊಳ್ಳುತ್ತಿದ್ದಾರೆ. ಇದ್ಯಾವುದಕ್ಕೂ ಅವಕಾಶವಿಲ್ಲ ಎಂದರು ರಾಹುಲ್ ಗಾಂಧಿ ಜಾತಿಗಣತಿಯಾಗಬೇಕೆಂದು ಒತ್ತಾಯ ಮಾಡಿದ್ದಾರೆ. ಅದರ ಫಲವಾಗಿ ಜನಗಣತಿ ಜೊತೆಗೆ ಜಾತಿಗಣತಿ ಮಾಡಲು ಪ್ರಧಾನಿ ಒಪ್ಪಿಕೊಂಡಿದ್ದಾರೆ. ರಾಹುಲ್ ಗಾಂಧಿ ರಾಷ್ಟ್ರೀಯ ಕಾಂಗ್ರೆಸ್‌ನ ಪ್ರಶ್ನಾತೀತ ನಾಯಕ ಮುಂದೆ ಪ್ರಧಾನಿಯಾಗಲಿದ್ದಾರೆ ಎಂದು ಭವಿಷ್ಯ ನುಡುದರು.

ತೆಲಂಗಾಣ , ಹರಿಯಾಣ, ಸೇರಿದಂತೆ ಕೆಲ ರಾಜ್ಯದಲ್ಲಿ ಒಳ ಮೀಸಲಾತಿ ಜಾರಿಯಾಗಿದೆ. ಒಳಮೀಸಲಾತಿ ಜಾರಿಯಾಗೋವರೆಗೂ ಯಾವ ಹುದ್ದೆ ತುಂಬಬಾರದು ಎಂದು ಒತ್ತಾಯಿಸಿದ್ದೇವೆ. ಒಳಮೀಸಲಾತಿ ನೀಡೋದಾಕ್ಕಾಗಿಯೇ ಜಾತಿಗಣತಿ ನಡೆಯುತ್ತಿದೆ. ಮುಖಂಡರಾಸ ಲಿಡ್ಕರ್ ಅಧ್ಯಕ್ಷ. ಮುಂಡ್ರಿಗಿ ನಾಗರಾಜ್ , ಜಿಪಂ ಮಾಜಿ ಸದಸ್ಯ ಎ. ಮಾನಯ್ಯ, ವೆಂಕಟೇಶ ಹೆಗಡೆ ಮೊದಲಾದವರು ಇದ್ದರು.

> ಸಮಗ್ರ ದಾಖಲೆ ನೀಡುವಂತೆ ಸಮಾಜಕ್ಕೆ ಆಂಜನೇಯ ಕರೆ ನೀಡಿದ್ದಾರೆ. ಕೆಲವು ಕಡೆ ಎಸ್ಸಿಗಳು ಕ್ರಿಶ್ಚನ್ ಮತ್ತು ಬೌದ್ಧ ಧರ್ಮ ಪಾಲಿಸ್ತಾರೆ ಆದ್ರೇ ಮೂಲ ಜಾತಿ ಸರಿಯಾಗಿ ಬರೆಸಬೇಕು. ಇನ್ನೂ ಬೇಡ ಜಂಗಮರು ಅಂದ್ರೇ ಆಂಧ್ರದಿಂದ ವಲಸೆ ಬಂದವರು. ಬೇಡ ಜಂಗಮ ಬುಡ್ಗ ಜಂಗಮ ಎಂದು ಕೆಲವು ಕಡೆ ಇದ್ದಾರೆ. ಬೇಡ ಎಂದರೆ ಕಾಡಿನಲ್ಲಿ ಭೇಟೆಯಾಡುವವರು. ಊರು ಊರು ಅಲೆಯುವವರು. ಅವರ ಹೆಸರು ದುರ್ಬಳಕೆ ಮಾಡಿಕೊಂಡು ವೀರಶೈವ, ಜಂಗಮರು ಬೇಡ ಎನ್ನುವ ಶಬ್ದ ಕದ್ದುಕೊಂಡು ಮಾದಿಗರ ಅನ್ನಕ್ಕೆ ಕನ್ನ ಹಾಕ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

# ರಜನಿ ಸಿನಿಮಾ ಖ್ಯಾತಿಯ ಮುಕುಲ್ ದೇವ್ ನಿಧನ



ಕನ್ನಡದ ರಜನಿ, ನಾಗರಹಾವು ಸಿನಿಮಾದಲ್ಲಿ ನಟಿಸಿದ್ದ ಮುಕುಲ್ ದೇವ್ (54) ನಿಧನರಾಗಿದ್ದಾರೆ. ಕಳೆದ ಕೆಲವು ದಿನಗಳ ಹಿಂದೆ ಮುಕುಲ್ ದೇವ್ ಅಸ್ವಸ್ಥರಾಗಿದ್ದ ಕಾರಣ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾರೆ. ಆದರೆ ಸಾವಿಗೆ ನಿಖರವಾದ ಕಾರಣ ಏನು ಎಂದು ತಿಳಿದು ಬಂದಿಲ್ಲ. ಕನ್ನಡ ಸೇರಿದಂತೆ ಹಿಂದಿ, ಮಲಯಾಳಂ, ಪಂಜಾಬಿ, ತೆಲುಗು ಸಿನಿಮಾಗಳಲ್ಲಿ ನಟಿಸಿದ್ದರು. ಕನ್ನಡದ ಉಪೇಂದ್ರ ನಟನೆಯ ರಜನಿ, ರಮ್ಯಾ ನಟನೆಯ ನಾಗರಹಾವು ಹಾಗೂ ಹಿಂದಿಯ ಸನ್ ಆಫ್ ಸರ್ದಾರ್ ಸಿನಿಮಾಗಳಲ್ಲಿ ನಟಿಸಿ ಖ್ಯಾತಿಗಳಿಸಿದ್ದರು. ಜೊತೆಗೆ ಸೀರಿಯಲ್ ಹಾಗೂ ವೆಬ್ ಸೀರಿಸ್‌ಗಳಲ್ಲಿಯೂ ನಟನೆ ಮಾಡಿದ್ದರು. 60ಕ್ಕೂ ಸಿನಿಮಾಗಳಲ್ಲಿ ನಟಿಸಿದ್ದ ಇವರು ಕೊನೆಯದಾಗಿ 'ಅಂತ್ ದಿ ಎಂಡ್' ಸಿನಿಮಾದಲ್ಲಿ ಕಾಣಿಸಿಕೊಂಡಿದ್ದರು.

# ಚೌಕಿದಾರ್ ಚಿತ್ರದ ಟೀಸರ್ ರಿಲೀಸ್



ಪೃಥ್ವಿ ಅಂಬರ್ ಹಾಗೂ ಧನ್ಯಾ ರಾಮ್‌ಕುಮಾರ್ ನಟನೆಯ 'ಚೌಕಿದಾರ್' ಸಿನಿಮಾದ ಟೀಸರ್ ಬಿಡುಗಡೆಯಾಗಿದೆ. ರಕ್ತಸಿಕ್ತ ಅವತಾರವೆತ್ತಿರುವ ಪೃಥ್ವಿ ಹೊಸ ಲುಕ್ ಸಿನಿರಸಿಕರಿಗೆ ಕಿಕ್ ಕೊಟ್ಟಿದೆ. ನಾಯಕಿ ಧನ್ಯಾ ಡಿ ಗ್ಲಾಮ್ ಲುಕ್‌ನಲ್ಲಿ ಕಾಣಿಸಿಕೊಂಡಿದ್ದಾರೆ.
ಟೀಸರ್‌ನಲ್ಲಿ ಎಲ್ಲಾ ಪಾತ್ರಗಳನ್ನು ತೋರಿಸಿರುವ ಚಂದ್ರಶೇಖರ್ ಬಂಡಿಯಪ್ಪ ಕಥೆಯ ಗುಟ್ಟನ್ನು ಎಲ್ಲಿಯೂ ಬಿಟ್ಟುಕೊಟ್ಟಿಲ್ಲ. ಕನ್ನಡ ಹಾಗೂ ತೆಲುಗು ಎರಡು ಭಾಷೆಯಲ್ಲಿ ಟೀಸರ್ ಬಿಡುಗಡೆ ಮಾಡಲಾಗಿದ್ದು, ಖಾಕಿ ಲುಕ್‌ನಲ್ಲಿ ಸುಧಾರಾಣಿ ಖದರ್ ತೋರಿಸಿದ್ದಾರೆ. ಹಿರಿಯ ನಟ ಸಾಯಿ ಕುಮಾರ್ ಪೃಥ್ವಿ ತಂದೆ ಪಾತ್ರದಲ್ಲಿ ಗಮನ ಸೆಳೆಯುತ್ತಾರೆ. ಧರ್ಮ, ಹಿರಿಯ ನಟಿ ಶ್ವೇತಾ ತಾರಾಬಳಗದಲ್ಲಿದ್ದಾರೆ. ಸಚಿನ್ ಬಸ್ರೂರ್ ಸಂಗೀತ ಟೀಸರ್‌ನಲ್ಲಿ ಗಮನ ಸೆಳೆಯುತ್ತಿದೆ. ಕಲ್ಲಹಳ್ಳಿ ಚಂದ್ರಶೇಖರ್ ನಿರ್ಮಾಣ ಮಾಡುತ್ತಿದ್ದಾರೆ. ವಿದ್ಯಾದೇವಿ ನಿರ್ಮಾಣದಲ್ಲಿ ಸಾಥ್ ಕೊಡುತ್ತಿದ್ದಾರೆ. ವಿ.ನಾಗೇಂದ್ರಪ್ರಸಾದ್, ಪ್ರಮೋದ್ ಮರವಂತೆ, ಸಂತೋಷ್ ನಾಯಕ್ ಹಾಡುಗಳಿಗೆ ಸಾಹಿತ್ಯ ಬರೆದಿದ್ದಾರೆ. ಸಿದ್ದು ಕಂಚನಹಳ್ಳಿ ಛಾಯಾಗ್ರಹಣ, ಪೃಥ್ವಿರಾಜ್ ಧಫಾರಿ ಸಹನಿರ್ದೇಶನ ಸಿನಿಮಾಗಿದೆ. 'ಚೌಕಿದಾರ್' ಬಹುಭಾಷೆಯಲ್ಲಿ ಮೂಡಿ ಬರುತ್ತಿದ್ದು, ಟೀಸರ್ ನೋಡುತ್ತಿದ್ದರೇ ನಿರ್ದೇಶಕ ಚಂದ್ರಶೇಖರ್ ಬಂಡಿಯಪ್ಪ ಯಾವುದೋ ಹೊಸ ಕಥೆಯನ್ನು ಹರವಿಡಲು ಹೊರಟಿರುವುದು ಗೊತ್ತಾಗುತ್ತಿದೆ.

# ಬಿಗ್‌ಬಾಸ್ ಬಳಿಕ ಬಿಗ್ ನ್ಯೂಸ್ ಕೊಟ್ಟ ಮೋಕ್ಷಿತಾ ಪೈ!



ನಟಿ ಮೋಕ್ಷಿತಾ ಪೈ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಬಿಗ್‌ಬಾಸ್ ಕನ್ನಡ 11ರ ಶೋ ಬಳಿಕ ಮತ್ತೆ ಕ್ಯಾಮೆರಾ ಮುಂದೆ ಮಿಂಚಲಿದ್ದಾರೆ. 'ಬಿಗ್ ಬಾಸ್ ಕನ್ನಡ 10'ರ ಖ್ಯಾತಿಯ ವಿನಯ್ ಗೌಡ ಜೊತೆ ವೆಬ್ ಸೀರೀಸ್ ನಾಯಕಿಯಾಗಿ ಮೋಕ್ಷಿತಾ ನಟಿಸುತ್ತಿದ್ದಾರೆ.
ಇದಕ್ಕೆ ಸಂಬಂಧಿಸಿದ ವಿಡಿಯೋವೊಂದು ಸೋಷಿಯಲ್ ಮೀಡಿಯಾದಲ್ಲಿ ಭಾರೀ ಸದ್ದು ಮಾಡುತ್ತಿದೆ. ಧೃತಿ ಕ್ರಿಯೇಷನ್ಸ್‌ನಲ್ಲಿ ಇದನ್ನು ನಿರ್ಮಾಣ ಮಾಡುತ್ತಿದೆ. ಜೀ5 ಒಟಿಟಿಯಲ್ಲಿ ಇದು ಪ್ರಸಾರವಾಗಲಿದೆ.
'ಬಿಗ್ ಬಾಸ್' ಬಳಿಕ ಕಾಣಿಸಿಕೊಳ್ಳುತ್ತಿರುವ ಮೊದಲ ಪ್ರಾಜೆಕ್ಟ್ ಇದಾಗಿದೆ. ಹೀಗಾಗಿ ವಿನಯ್ ಗೌಡ ಮತ್ತು ಮೋಕ್ಷಿತಾ ಜೋಡಿ ನೋಡಲು ಅಭಿಮಾನಿಗಳು ಕಾಯ್ತಿದ್ದಾರೆ. 'ಮಿಡಲ್ ಕ್ಲಾಸ್ ರಾಮಾಯಣ' ಎಂಬ ಸಿನಿಮಾದಲ್ಲಿ ಮೋಕ್ಷಿತಾ ಪೈ ನಟಿಸುತ್ತಿದ್ದು, ಈ ಮೂಲಕ ಸ್ಯಾಂಡಲ್‌ವುಡ್‌ಗೆ ನಾಯಕಿಯಾಗಿ ಅವರು ಪಾದಾರ್ಪಣೆ ಮಾಡಿದ್ದಾರೆ. ಈ ಚಿತ್ರದಲ್ಲಿ ಕಪ್ಪು ಹುಡುಗಿಯ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಮೋಕ್ಷಿತಾ ಪಾತ್ರವೇ ಚಿತ್ರದ ಹೈಲೆಟ್ ಆಗಿದ್ದು, ಈ ಸಿನಿಮಾ ರಿಲೀಸ್ ಬಗ್ಗೆ ಶೀಘ್ರದಲ್ಲೇ ಚಿತ್ರತಂಡ ಮಾಹಿತಿ ನೀಡುವ ನಿರೀಕ್ಷೆ ಇದೆ.

# ಜಾವಾದಲ್ಲಿ ರಾಗಿಣಿ ಬೋಲ್ಡ್ ಅವತಾರ

ತುಪ್ಪದ ಬೆಡಗಿ ರಾಗಿಣಿ ದ್ವಿವೇದಿ ಇನ್ನೂ ಎರಡ್ಮೂರು ವರ್ಷ ಕಾಲ್‌ಶೀಟ್‌ಗೆ ಸಿಗಲ್ಲ, ಅಷ್ಟರಮಟ್ಟಿಗೆ ಬ್ಯಾಕ್ ಟು ಬ್ಯಾಕ್ ಸಿನಿಮಾಗಳಲ್ಲಿ ಅವರು ಬ್ಯುಸಿಯಾಗಿದ್ದಾರೆ. 'ಜಾವಾ' ಎಂಬ ಸಿನಿಮಾ ಮೂಲಕ ನಟಿ ಭಾರೀ ಸದ್ದು ಮಾಡ್ತಿದ್ದಾರೆ. ಈ ಚಿತ್ರದ ಪೋಸ್ಟರ್ ರಿಲೀಸ್ ಆಗಿ ಸೋಷಿಯಲ್ ಮೀಡಿಯಾದಲ್ಲಿ ಹಂಗಾಮ ಎಬ್ಬಿಸಿದೆ. ಹಿರಿಯ ಡಿಂಗ್ರಿ ನಾಗಾರಾಜ್ ಪುತ್ರ ರಾಜ್ ವರ್ಧನ್‌ಗೆ ಜೊತೆಯಾಗಿ ರಾಗಿಣಿ 'ಜಾವಾ' ಸಿನಿಮಾದಲ್ಲಿ ನಟಿಸಿದ್ದಾರೆ. ಮೇ 24ರಂದು ರಾಗಿಣಿ ಬರ್ತ್‌ಡೇ ಹಿನ್ನೆಲೆ ಅವರ ಪಾತ್ರದ ಲುಕ್ ಅನ್ನು ಚಿತ್ರತಂಡ ಅನಾವರಣ ಮಾಡಿದೆ. ಪೋಸ್ಟರ್‌ನಲ್ಲಿ ರಾಗಿಣಿ ಬೋಲ್ಡ್ ಆಗಿ ಕಾಣಿಸಿಕೊಂಡಿದ್ದು, ಅದಕ್ಕೆ R QUEEN BRAND AMBASSADOR OF ದುರಹಂಕಾರ ಎಂದು ಬರೆಯಲಾಗಿದೆ. 'ಜಾವಾ'ದಲ್ಲಿ ರಾಗಿಣಿ ಪವರ್‌ಫುಲ್ ಪಾತ್ರದಲ್ಲಿ ಕಾಣಿಸಿಕೊಳ್ತಿದ್ದಾರೆ. ಈ ಚಿತ್ರ ಕನ್ನಡ, ತಮಿಳು ಸೇರಿದಂತೆ ಬಹುಭಾಷೆಗಳಲ್ಲಿ ನಿರ್ಮಾಣ ಆಗುತ್ತಿದ್ದು, ದೇವಾ ಚಕ್ರವರ್ತಿ ನಿರ್ದೇಶಿಸಲಿದ್ದಾರೆ. ಜುಲೈನಲ್ಲಿ ಸಿನಿಮಾ ಶೂಟಿಂಗ್ ಶುರು ಆಗಲಿದೆ. 'ಜಾವಾ' ಚಿತ್ರದ ಜೊತೆ ಸಿಂಧೂರಿ, ಸರ್ಕಾರಿ ನ್ಯಾಯ ಬೆಲೆ ಅಂಗಡಿ, ಮೋಹನ್ ಲಾಲ್ ಜೊತೆ 'ವೃಷಭ' ಸಿನಿಮಾ ಮಾಡ್ತಿದ್ದಾರೆ ರಾಗಿಣಿ. ಈ ಚಿತ್ರಕ್ಕೆ ಕನ್ನಡದ ನಿರ್ದೇಶಕ ನಂದ ಕಿಶೋರ್ ನಿರ್ದೇಶನ ಮಾಡಿದ್ದಾರೆ. ಇದರೊಂದಿಗೆ ಬಾಲಿವುಡ್ ಚಿತ್ರ ಮತ್ತು ತಮಿಳಿನಲ್ಲೊಂದು ಸಿನಿಮಾ ಮುಗಿಸಿ ಕೊಟ್ಟಿದ್ದಾರೆ. 'ಶ್ಲೋಕ್' ಎಂಬ ಸಂಸ್ಕೃತ ಚಿತ್ರದಲ್ಲಿಯೂ ನಟಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಮುಕ್ತಿಯನ್ನು ಹೊಂದುವ ಸನ್ಯಾಸಿನಿಯ ಪಾತ್ರದಲ್ಲಿ ಅವರು ನಟಿಸಿದ್ದಾರೆ. ಇದನ್ನು ಸ್ಮಶಾನದಲ್ಲಿ ಚಿತ್ರೀಕರಿಸಲಾಗಿದೆ. ಒಟ್ನಲ್ಲಿ ರಾಗಿಣಿ ಕಹಿ ಘಟನೆಯಿಂದ ಹೊರಬಂದು ಸಿನಿಮಾ ಮಾಡ್ತಿದ್ದಾರೆ. ಚಿತ್ರರಂಗದಲ್ಲಿ ಅವರಿಗೆ ಒಂದೊಳ್ಳೆಯ ಕಾಲ ಶುರುವಾಗಿದೆ. ರಾಗಿಣಿ ಒಪ್ಪಿಕೊಂಡಿರುವ ಈ ಸಿನಿಮಾಗಳಿಂದ ಸಕ್ಸಸ್ ಸಿಗುತ್ತಾ



ಸನ್ಯಾಸಿನಿಯ ಪಾತ್ರದಲ್ಲಿ ತುಪ್ಪದ ಬೆಡಗಿ

# ದರ್ಶನ್ ಜೊತೆ ವಿಜಯಲಕ್ಷ್ಮಿ ಎತ್ತಿನಗಾಡಿ ಸವಾರಿ



ನಟ ದರ್ಶನ್ ಜೊತೆ ಪತ್ನಿ ವಿಜಯಲಕ್ಷ್ಮಿ ಎತ್ತಿನಗಾಡಿಯಲ್ಲಿ ಸವಾರಿ ಮಾಡಿರುವ ವಿಡಿಯೋವನ್ನು ಇನ್ಸ್ಟಾದಲ್ಲಿ ಶೇರ್ ಮಾಡಿದ್ದಾರೆ. ಪತಿ ದರ್ಶನ್ ಜೊತೆ ಎತ್ತಿನಗಾಡಿಯಲ್ಲಿ ವಿಜಯಲಕ್ಷ್ಮಿ ರೌಂಡ್ ಹೊಡೆದಿದ್ದಾರೆ. ಎತ್ತಿನಗಾಡಿಯಲ್ಲಿ ಸವಾರಿ ಮಾಡ್ತಿರೋ ವಿಡಿಯೋವನ್ನು ಇನ್ಸ್ಟಾ ಸ್ಟೋರಿಯಲ್ಲಿ ಶೇರ್ ಮಾಡಿ, ಸೂರ್ಯ ಮತ್ತು ಚಂದ್ರ ನಮ್ಮ ಸ್ಟಾರ್ ಎಂದು ಕ್ಯಾಪ್ಷನ್ ಕೊಟ್ಟಿದ್ದಾರೆ.
ಮೇ 19ರಂದು ದರ್ಶನ್ ಮತ್ತು ವಿಜಯಲಕ್ಷ್ಮಿ 22ನೇ ವೆಡ್ಡಿಂಗ್ ಆಯನಿವರ್ಸರಿ ಆಚರಿಸಿಕೊಂಡಿದ್ದರು. ಆ ದಿನ ರೆಸಾರ್ಟ್‌ವೊಂದರಲ್ಲಿ ಇಬ್ಬರೂ ಕೇಕ್ ಕತ್ತರಿಸಿ, ಮಸ್ತ್ ಆಗಿ ಡ್ಯಾನ್ಸ್ ಮಾಡಿ ಸಂಭ್ರಮಿಸಿದ್ದರು. ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಬೇಲ್ ಮೇಲೆ ದರ್ಶನ್ ಹೊರಬಂದ್ಮೇಲೆ ಪತಿಯ ವ್ಯವಹಾರವನ್ನು ವಿಜಯಲಕ್ಷ್ಮಿಯವರೇ ನೋಡಿಕೊಳ್ತಿದ್ದಾರೆ. ದರ್ಶನ್‌ಗೆ ಎಲ್ಲೇ ಶೂಟಿಂಗ್ ಇದ್ರೂ, ಅಥವಾ ಯಾವುದೇ ಕಾರ್ಯಕ್ರಮ ಆಗಿದ್ರೂ, ಪತ್ನಿ ಜೊತೆಯಲ್ಲಿ ಇರುತ್ತಾರೆ.
ಇದು ಫ್ಯಾನ್ಸ್‌ಗೆ ಖುಷಿ ಕೊಟ್ಟಿದೆ. ಈ ಜೋಡಿ ಮೇಲೆ ಕೆಟ್ಟ ದೃಷ್ಟಿ ಬೀಳದಿರಲಿ ಎಂದು ಅಭಿಮಾನಿಗಳು ಹಾರೈಸುತ್ತಿದ್ದಾರೆ. ಇದೆಲ್ಲದರ ನಡುವೆ, ಡೆವಿಲ್ ಸಿನಿಮಾದ ಚಿತ್ರೀಕರಣವು ಭರದಿಂದ ಸಾಗುತ್ತಿದೆ.

# ಮಾರ್ನಮಿ ರಿವೀಲಾಯ್ತು ಚೈತ್ರಾ ರೋಲ್

ದೀಕ್ಷಾ ಎಂಬ ಪಾತ್ರ



ಕನ್ನಡ ಚಿತ್ರರಂಗದ ಪ್ರತಿಭಾವಂತ ನಟಿ ಚೈತ್ರಾ ಆಚಾರ್, ಯಾವುದೇ ಪಾತ್ರ ಕೊಟ್ಟರೂ ಅದಕ್ಕೆ ಜೀವ ತುಂಬಬಲ್ಲರು. ಈಗ ಅವರು ಮಾರ್ನಮಿಗೆ ಮದುವೆಯಾಗೋದಿಕ್ಕೆ ಹೊರಟಿದ್ದಾರೆ. ಅರೇ! ಚೈತ್ರಾ ಮದುವೆನಾ ಅಂತಾ ಹುಬ್ಬೇರಿಸಬೇಡಿ. ಮದುವೆ ನಿಜವೇ, ಆದ್ರೆ ರೀಲ್‌ನಲ್ಲಿ. ಕರಾವಳಿ ಭಾಗದ ಪ್ರೇಮಕಥೆಯುಳ್ಳ 'ಮಾರ್ನಮಿ' ಸಿನಿಮಾದಲ್ಲಿ ಚೈತ್ರಾ ಆಚಾರ್ ನಾಯಕಿಯಾಗಿ ನಟಿಸುತ್ತಿದ್ದಾರೆ.
ಅವರ ಪಾತ್ರದ ಪರಿಚಯದ ಟೀಸರ್ ಮೇ 25 ಬಿಡುಗಡೆಯಾಗಿದೆ. 'ಮಾರ್ನಮಿ'ಯಲ್ಲಿ ಚೈತ್ರಾ, ದೀಕ್ಷಾ ಎಂಬ ಪಾತ್ರದಲ್ಲಿ ಅಭಿನಯಿಸುತ್ತಿದ್ದು, ತನ್ನ ಪ್ರೀತಿ, ಮದುವೆ ಬಗ್ಗೆ ಕರಾವಳಿ ಭಾಷೆಯಲ್ಲಿ ಪರಿಚಯ ಮಾಡಿಕೊಳ್ಳುತ್ತಾರೆ. ಡಿ ಗ್ಲಾಮ್ ಲುಕ್‌ನಲ್ಲಿ ಕಾಣಿಸಿಕೊಂಡಿದ್ದು, ಮೋಹಕ ತಾರೆ ರಮ್ಯಾ ತಮ್ಮ ಇನ್ಸ್ಟಾಗ್ರಾಂ ಟೀಸರ್ ಬಿಡುಗಡೆ ಮಾಡಿ ಇಡೀ ತಂಡಕ್ಕೆ ಶುಭಾಶಯ ತಿಳಿಸಿದ್ದಾರೆ. ಕುಂದಾಪುರದ ಪಡುಕೋಣೆಯ ರಿಶಿತ್ ಶೆಟ್ಟಿ 'ಮಾರ್ನಮಿ' ಸಿನಿಮಾದ ಸೂತ್ರಧಾರ. ಕರಾವಳಿ ಭಾಗದ ಹುಲಿವೇಷದ ಹಿನ್ನೆಲೆ ಸಂಸ್ಕೃತಿಯ ಜೊತೆಗೆ ಪ್ರೇಮಕಥೆ, ಆಕ್ಷನ್, ಎಮೋಷನ್, ಕಾಮಿಡಿ ಮಿಶ್ರಣದ ಮಾರ್ನಮಿ ಚಿತ್ರವನ್ನು ಗುನಾಢ್ಯ ಬ್ಯಾನರ್ ಅಡಿಯಲ್ಲಿ ಶಿಲ್ಪಾ ನಿಶಾಂತ್ ನಿರ್ಮಾಣ ಮಾಡುತ್ತಿದ್ದಾರೆ. ಈ ಸಿನಿಮಾದಲ್ಲಿ ಗಿಣಿರಾಮ, ನಿನಗಾಗಿ ಸೀರಿಯಲ್ ಖ್ಯಾತಿಯ ರಿತ್ವಿಕ್ ಮಠದ್ ನಾಯಕನಾಗಿ ಅಭಿನಯಿಸಿದ್ದಾರೆ. ಪ್ರಕಾಶ್ ತುಮಿನಾಡು, ಸೋನು ಗೌಡ, ಜ್ಯೋತೀಶ್ ಶೆಟ್ಟಿ, ರೋಚಿತ್, ಸ್ವರಾಜ್ ಶೆಟ್ಟಿ, ಮೈಮ್ ರಾಮದಾಸ್ ಹಾಗೂ ಚೈತ್ರ ಶೆಟ್ಟಿ ಸೇರಿದಂತೆ ಹಲವರು ತಾರಾಬಳಗದಲ್ಲಿದ್ದಾರೆ. ಈ ಚಿತ್ರಕ್ಕೆ ಚರಣ್ ರಾಜ್ ಸಂಗೀತ ನಿರ್ದೇಶನವಿದ್ದು, ಶಿವಸೇನ ಛಾಯಾಗ್ರಹಣ ನಿರ್ವಹಿಸುತ್ತಿದ್ದಾರೆ.

# ಜಸ್‌ಪ್ರೀತ್ ಬುಮ್ರಾ ಎಲ್ಲಾ ಪಂದ್ಯಗಳನ್ನಾಡುವುದು ಡೌಟ್

ಕರಣ್ ಸ್ಫೋಟಕ ಬ್ಯಾಟಿಂಗ್



ಭಾರತ ಮತ್ತು ಇಂಗ್ಲೆಂಡ್ ನಡುವಣ ಟೆಸ್ಟ್ ಸರಣಿಯು ಜೂನ್ 20 ರಿಂದ ಶುರುವಾಗಲಿದೆ. ಆಂಗ್ಲರ ನಾಡಿನಲ್ಲಿ ನಡೆಯಲಿರುವ ಈ ಸರಣಿಯಲ್ಲಿ ಟೀಮ್ ಇಂಡಿಯಾ 5 ಪಂದ್ಯಗಳನ್ನಾಡಲಿದೆ. ಈ ಸರಣಿಯ ನಡುವೆ ಟೀಮ್ ಇಂಡಿಯಾ ವೇಗಿ ಜಸ್‌ಪ್ರೀತ್ ಬುಮ್ರಾ ವಿಶ್ರಾಂತಿ ಪಡೆಯಲಿದ್ದಾರೆ.
ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಗೆ ಭಾರತ ತಂಡದ ಘೋಷಣೆಯಾಗಿದೆ. ನಿರೀಕ್ಷೆಯಂತೆ ಟೀಮ್ ಇಂಡಿಯಾಗೆ ಹೊಸ ನಾಯಕನಾಗಿ ಶುಭ್‌ಮನ್ ಗಿಲ್ ಆಯ್ಕೆಯಾಗಿದ್ದಾರೆ. ಆದರೆ ಈ ಹಿಂದೆ ಉಪನಾಯಕನಾಗಿ ಜಸ್‌ಪ್ರೀತ್ ಬುಮ್ರಾ ಅವರನ್ನು ವೈಸ್ ಕ್ಯಾಪ್ಟನ್ ಪಟ್ಟದಿಂದ ಕೆಳಗಿಳಿಸಲಾಗಿದೆ. ಬದಲಿಗೆ ರಿಷಭ್ ಪಂತ್‌ಗೆ ಉಪನಾಯಕತ್ವ ನೀಡಲಾಗಿದೆ. ಈ ಹಿಂದೆ ರೋಹಿತ್ ಶರ್ಮಾ ಬಳಿಕ ಬುಮ್ರಾ ಅವರಿಗೆ ಟೀಮ್ ಇಂಡಿಯಾ ನಾಯಕತ್ವ ಒಲಿಯಲಿದೆ ಎನ್ನಲಾಗಿತ್ತು. ಆದರೀಗ ಜಸ್‌ಪ್ರೀತ್ ಬುಮ್ರಾ ಅವರನ್ನು ಎಲ್ಲಾ ರೀತಿಯ ನಾಯಕತ್ವದಿಂದಲೂ ಕೆಳಗಿಳಿಸಲಾಗಿದೆ. ಬಿಸಿಸಿಐ ಇಂತಹದೊಂದು ನಿರ್ಧಾರ ತೆಗೆದುಕೊಳ್ಳಲು ಮುಖ್ಯ ಕಾರಣ ಅವರ ಕೆಲಸದ ಒತ್ತಡ. ಅಂದರೆ ಟೀಮ್ ಇಂಡಿಯಾದ ಪ್ರಮುಖ ವೇಗಿಯಾಗಿರುವ ಬುಮ್ರಾ ಅವರನ್ನು ಎಲ್ಲಾ ಪಂದ್ಯಗಳಲ್ಲಿ ಆಡಿಸುವ ಸಾಧ್ಯತೆಯಿಲ್ಲ. ಈ ಹಿಂದೆ ಸತತ ಪಂದ್ಯಗಳಿಂದಾಗಿ ಅವರು ಬೆನ್ನು ನೋವಿನ ಸಮಸ್ಯೆಗೆ ಸಿಲುಕಿದ್ದರು. ಹೀಗಾಗಿ ಬುಮ್ರಾ ಅವರು ಮತ್ತೊಮ್ಮೆ ಬೆನ್ನು ನೋವಿನ ಸಮಸ್ಯೆಗೆ ಸಿಲುಕಿದರೆ, ಅದು ಅವರ ಟೆಸ್ಟ್ ವೃತ್ತಿಜೀವನದ ಗಂಭೀರ ಪರಿಣಾಮ ಬೀರಬಹುದು. ಇದನ್ನು ತಪ್ಪಿಸಲು ಮುಂಬರುವ ಇಂಗ್ಲೆಂಡ್ ವಿರುದ್ಧದ ಸರಣಿಯ ನಡುವೆ ಜಸ್‌ಪ್ರೀತ್ ಬುಮ್ರಾಗೆ ವಿಶ್ರಾಂತಿ ನೀಡುವ ಸಾಧ್ಯತೆಯಿದೆ. ಇದನ್ನೇ ಪ್ರಸ್ತಾಪಿಸಿ ಬಿಸಿಸಿಐ ಆಯ್ಕೆ ಸಮಿತಿ ಮುಖ್ಯಸ್ಥ ಅಜಿತ್ ಅಗರ್ಕರ್ ಅವರು ಜಸ್‌ಪ್ರೀತ್ ಬುಮ್ರಾ ಎಲ್ಲಾ ಪಂದ್ಯಗಳಿಗೆ ಲಭ್ಯರಿರುವುದಿಲ್ಲ ಎಂದಿದ್ದಾರೆ. ಅಂದರೆ ಇಂಗ್ಲೆಂಡ್ ವಿರುದ್ಧದ ಸರಣಿಯಲ್ಲಿ ಟೀಮ್ ಇಂಡಿಯಾ ಒಟ್ಟು 5 ಪಂದ್ಯಗಳನ್ನಾಡಲಿದೆ. ಈ ವೇಳೆ ಅವರು 2 ಪಂದ್ಯಗಳಿಂದ ಹೊರಗುಳಿಯಬಹುದು. ಟೀಮ್ ಇಂಡಿಯಾ ಮೊದಲ ಎರಡು ಪಂದ್ಯಗಳಲ್ಲಿ ಜಯ ಸಾಧಿಸಿದರೆ, ಜಸ್‌ಪ್ರೀತ್ ಬುಮ್ರಾ ಮೂರನೇ ಪಂದ್ಯದ ವೇಳೆ ವಿಶ್ರಾಂತಿ ಪಡೆಯುವ ಸಾಧ್ಯತೆಯಿದೆ. ಇಲ್ಲದಿದ್ದರೆ ಅವರು ನಾಲ್ಕನೇ ಪಂದ್ಯಕ್ಕೆ ಅಲಭ್ಯರಾಗಬಹುದು. ಇತ್ತ ಜಸ್‌ಪ್ರೀತ್ ಬುಮ್ರಾ ಅಲಭ್ಯತೆಯ ನಡುವೆ ಟೀಮ್ ಇಂಡಿಯಾ ಮೊಹಮ್ಮದ್ ಸಿರಾಜ್ ಅವರನ್ನು ಆಶ್ರಯಿಸಲಿದೆ. ಏಕೆಂದರೆ ಫಿಟ್‌ನೆಸ್ ಸಮಸ್ಯೆಯ ಕಾರಣ ಮೊಹಮ್ಮದ್ ಶಮಿ ಈ ಸರಣಿಗೆ ಆಯ್ಕೆಯಾಗಿಲ್ಲ. ಅತ್ತ ಇಂಗ್ಲೆಂಡ್‌ನಲ್ಲಿ ಆಡಿದ ಅನುಭವ ಹೊಂದಿರುವುದು ಮೊಹಮ್ಮದ್ ಸಿರಾಜ್‌ಗೆ ಮಾತ್ರ. ಹೀಗಾಗಿ ಜಸ್‌ಪ್ರೀತ್ ಬುಮ್ರಾ ಕೆಲ ಪಂದ್ಯಗಳಿಂದ ಹೊರಗುಳಿದರೆ, ಮೊಹಮ್ಮದ್ ಸಿರಾಜ್ ಟೀಮ್ ಇಂಡಿಯಾ ಬೌಲಿಂಗ್ ಲೈನಪ್ ಅನ್ನು ಮುನ್ನಡೆಸಲಿದ್ದಾರೆ. ಸಿರಾಜ್ ಜೊತೆ ಪ್ರಸಿದ್ಧ್ ಕೃಷ್ಣ ಹಾಗೂ ಅರ್ಷದೀಪ್ ಸಿಂಗ್ ಕೂಡ ಕಾಣಿಸಿಕೊಳ್ಳಲಿದ್ದಾರೆ.

# ಅಯೋಧ್ಯೆಯಲ್ಲಿ ಶ್ರೀರಾಮನ ದರ್ಶನ ಪಡೆದ ಕೊಹ್ಲಿ-ಅನುಷ್ಕಾ



ಟೀಮ್ ಇಂಡಿಯಾದ ಸ್ಟಾರ್ ಆಟಗಾರ ವಿರಾಟ್ ಕೊಹ್ಲಿ ಕುಟುಂಬ ಸಮೇತ ಅಯೋಧ್ಯೆಗೆ ತೆರಳಿ ಶ್ರೀರಾಮನ ದರ್ಶನ ಪಡೆದಿದ್ದಾರೆ. ಪತ್ನಿ ಅನುಷ್ಕಾ ಶರ್ಮಾ ಜೊತೆ ಭಾನುವಾರ ಅಯೋಧ್ಯಾ ಧಾಮ್‌ಗೆ ಆಗಮಿಸಿದ ಕೊಹ್ಲಿ ರಾಮ ಮಂದಿರಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು. ಆ ಬಳಿಕ ಅಯೋಧ್ಯೆಯಲ್ಲಿರುವ ಹನುಮಾನ ಗುಡಿಗೂ ಭೇಟಿ ನೀಡಿ ಪ್ರಾರ್ಥಿಸಿದರು. ವಿರಾಟ್ ಕೊಹ್ಲಿ ಸದ್ಯ ಲಕ್ನೋದಲ್ಲಿದ್ದು, ಹೀಗಾಗಿ ಬಿಡುವಿನ ವೇಳೆ ದೇವರ ದರ್ಶನಕ್ಕೆ ತೆರಳಿದ್ದಾರೆ. ಆರ್‌ಸಿಬಿ ತಂಡವು ತನ್ನ ಮುಂದಿನ ಪಂದ್ಯವನ್ನು ಲಕ್ನೋನ ಏಕಾನ ಸ್ಟೇಡಿಯಂನಲ್ಲಿ ಆಡಲಿದೆ. ಈ ಪಂದ್ಯದಲ್ಲಿ ಆರ್‌ಸಿಬಿ ಲಕ್ನೋ ಸೂಪರ್ ಜೈಂಟ್ಸ್ ತಂಡವನ್ನು ಎದುರಿಸಲಿದೆ.
ಕೊನೆಯ ಲೀಗ್ ಮ್ಯಾಚ್‌ನಲ್ಲಿ ಆರ್‌ಸಿಬಿ ತಂಡವು ಭರ್ಜರಿ ಜಯ ಸಾಧಿಸಿದರೆ, ಅಂಕ ಪಟ್ಟಿಯಲ್ಲಿ ಮೊದಲ ಸ್ಥಾನ ಅಥವಾ ದ್ವಿತೀಯ ಸ್ಥಾನಕ್ಕೇರುವ ಮೂಲಕ ಮೊದಲ ಕ್ವಾಲಿಫೈಯರ್ ಪಂದ್ಯವಾಡಲು ಅರ್ಹತೆ ಪಡೆಯಬಹುದು. ಹೀಗಾಗಿ ಆರ್‌ಸಿಬಿ ಪಾಲಿಗೆ ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧದ ಪಂದ್ಯವು ತುಂಬಾ ಮಹತ್ವದ್ದಾಗಿ ಮಾರ್ಪಟ್ಟಿದೆ.

# ಮುದುಡಿದ ಗುಜರಾತ್ ಟೈಟಾನ್ಸ್

## ಅಗ್ರಸ್ಥಾನಕ್ಕೇರುವ ಆರ್‌ಸಿಬಿ ಕನಸಿಗೆ ಮತ್ತೆ ರೆಕ್ಕೆಪುಕ್ಕ!



ಈ ಬಾರಿಯ ಸೀಸನ್ ಉದ್ದಕ್ಕೂ ಸೋಲಿನ ಕಹಿ ಉಂಡ ಕೊನೆಯ ಸ್ಥಾನಿ ಚೆನ್ನೈ ಸೂಪರ್ ಕಿಂಗ್ಸ್ ತಂಡ ಅಂಕಪಟ್ಟಿಯಲ್ಲಿ ಅಗ್ರಸ್ಥಾನಿಯಾಗಿರುವ ಗುಜರಾತ್ ಜೈಂಟ್ಸ್ ವಿರುದ್ಧ ಭರ್ಜರಿ 83 ಜಯ ದಾಖಲಿಸಿದೆ. ಈ ಮೂಲಕ ಗೌರವದಿಂದ ಈ ಬಾರಿಯ ಸೀಸನ್ ಗೆ ಮಂಗಳ ಹಾಡಿದೆ. ಇದೇವೇಳೆ ಅಂಕಪಟ್ಟಿಯಲ್ಲಿ 17 ಅಂಕ ಗಳಿಸಿರುವ ರಾಯಲ್ ಚಾಲೆಂಜರ್ಸ್ ತಂಡಕ್ಕೆ ಅಗ್ರಸ್ಥಾನಕ್ಕೇರಲು ಅವಕಾಶ ಸಿಕ್ಕಂತಾಗಿದೆ.
ಅಹಮದಾಬಾದ್ ನ ಮೋದಿ ಕ್ರೀಡಾಂಗಣದಲ್ಲಿ ಭಾನುವಾರ ನಡೆದ ಪಂದ್ಯದಲ್ಲಿ ಗೆಲ್ಲಲು 231 ರನ್ ಗಳ ಬೃಹತ್ ಗುರಿ ಪಡೆದ ಗುಜರಾತ್ ಟೈಟಾನ್ಸ್ 18.3 ಓವರ್ ಗಳಲ್ಲಿ 147 ರನ್ ಗಳಿಗೆ ಸರ್ವಪತನ ಕಂಡಿತು. ಗುಜರಾತ್ ತಂಡದಲ್ಲಿ ಆರಂಭಿಕ ಸಾಯಿ ಸುದರ್ಶನ್ ಅವರನ್ನು ಹೊರತುಪಡಿಸಿದರೆ ಮತ್ತಾರೂ ಉತ್ತಮ ಪ್ರದರ್ಶನ ನೀಡಲಿಲ್ಲ. ಅವರು 28 ಎಸೆತಗಳಲ್ಲಿ 6 ಬೌಂಡರಿಗಳಿದ್ದ 41 ರನ್ ಗಳಿಸಿತು. ನಾಯಕ ಶುಭ್ಮನ್ ಗಿಲ್ 13 ರನ್ ಗಳಿಸಿ ಔಟಾದರು. ಅಂತಿಮ ಹಂತದಲ್ಲಿ ಅರ್ಶದ್ ಖಾನ್(20) ಬಿರುಸಿನ ಆಟವಾಡಲು ಪ್ರಯತ್ನಿಸಿದರೂ ನೂರ್ ಅಹ್ಮದ್ ಅವರನ್ನು ಕ್ಲೀನ್ ಬೌಲ್ಡ್ ಮಾಡುವಲ್ಲಿ ಯಶಸ್ವಿಯಾದರು. ಚೆನ್ನೈ ಸೂಪರ್ ಕಿಂಗ್ಸ್ ತಂಡದ ಅನ್ಶುಲ್ ಕಾಂಬೋಜ್ 13 ರನ್ ಗೆ 3 ವಿಕೆಟ್ ಪಡೆದರು. ಸ್ಪಿನ್ನರ್ ನೂರ್ ಅಹ್ಮದ್ ಅವರು ಸಹ 21 ರನ್ ಗೆ 3 ವಿಕಟ್ ಕಬಳಿಸಿದರು. ಆಲ್ರೌಂಡರ್ ರವೀಂದ್ರ ಜಡೇಜಾ 17 ರನ್ ಗೆ 2 ವಿಕೆಟ್ ಗಳಿಸಿದರು. ಉಳಿದೆರಡು ವಿಕೆಟ್ ಗಳು ಖಲೀಲ್ ಅಹ್ಮದ್ ಮತ್ತು ಮಹೀಶ್ ಪತಿರಣ ಅವರು ಹಂಚಿಕೊಂಡರು. ಇದಕ್ಕೂ ಮೊದಲು ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡ ಮಹೇಂದ್ರ ಸಿಂಗ್ ಧೋನಿಯ ಅವರ ಲೆಕ್ಕಾಚಾರವನ್ನು ಚೆನ್ನೈ ಸೂಪರ್ ಕಿಂಗ್ಸ್ ತಂಡದ ಬ್ಯಾಟರ್ ಗಳು ಸುಳ್ಳಾಗಿಸಲಿಲ್ಲ.

# ಬೌಲರ್‌ಗಳ ಮಾರಕ ದಾಳಿಗೆ ಕೆಕೆಆರ್ ಧೂಳೀಪಟ!



279 ರನ್‌ಗಳ ಬೃಹತ್ ಗುರಿ ಬೆನ್ನಟ್ಟಿದ ಕೋಲ್ಕತ್ತಾ ನೈಟ್ ರೈಡರ್ಸ್ 18.4 ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು 168 ರನ್‌ಗಳಿಗೆ ಆಲೌಟ್ ಅಗುವ ಮೂಲಕ ಟೂರ್ನಿಯಲ್ಲಿ 8ನೇ ಸ್ಥಾನಕ್ಕೆ ಕುಸಿದು ತನ್ನ ಅಭಿಯಾನ ಅಂತ್ಯಗೊಳಿಸಿತು.
ಐಪಿಎಲ್ 2025ರ 68ನೇ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಗೆಲುವಿನೊಂದಿಗೆ ಅಂಕಪಟ್ಟಿಯಲ್ಲಿ 7ನೇ ಸ್ಥಾನಿಯಾಗಿ ತಮ್ಮ ಅಭಿಯಾನ ಅಂತ್ಯಗೊಳಿಸಿದೆ. ಭಾನುವಾರ ನಡೆದ ಡೆಲ್ಲಿಯ ಅರುಣ್ ಜೇಟ್ಲಿ ಮೈದಾನದಲ್ಲಿ ನಡೆದ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ದ 110 ರನ್‌ಗಳಿಂದ ಗೆದ್ದು ಸಂಭ್ರಮಿಸಿತು. ಇದು ಎರಡೂ ತಂಡಗಳಿಗೂ ಕೊನೆಯ ಪಂದ್ಯವಾಗಿದ್ದು, ವಿಜಯಲಕ್ಷ್ಮಿ ಹೈದರಾಬಾದ್ ತಂಡಕ್ಕೆ ಒಲಿಯಿತು. 279 ರನ್‌ಗಳ ಬೃಹತ್ ಗುರಿ ಬೆನ್ನಟ್ಟಿದ ಕೋಲ್ಕತ್ತಾ ನೈಟ್ ರೈಡರ್ಸ್ 18.4 ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು 168 ರನ್‌ಗಳಿಗೆ ಆಲೌಟ್ ಅಗುವ ಮೂಲಕ ಟೂರ್ನಿಯಲ್ಲಿ 8ನೇ ಸ್ಥಾನಕ್ಕೆ ಕುಸಿದು ತನ್ನ ಅಭಿಯಾನ ಅಂತ್ಯಗೊಳಿಸಿತು. 279ರನ್‌ಗಳ ಬೃಹತ್ ಚೇಸ್ ಆರಂಭಿಸಿದ ಕೆಕೆಆರ್‌ಗೆ ನಿರೀಕ್ಷಿತ ಆರಂಭ ಸಿಗಲಿಲ್ಲ. ಸುನಿಲ್ ನರೈನ್ 16 ಎಸೆತಗಳಲ್ಲಿ ತಲಾ 3 ಬೌಂಡರಿ, 3 ಸಿಕ್ಸರ್ಗಳ ಸಹಿತ 31 ರನ್‌ಗಳಿಸಿ ಉನಾದ್ಕಟ್ ಬೌಲಿಂಗ್‌ನಲ್ಲಿ ಬೌಲ್ಡ್ ಆದರು. ಟಾಸ್ ಗೆದ್ದು ಬ್ಯಾಟಿಂಗ್ ಮಾಡಿದ ಹೈದರಾಬಾದ್ ಪವರ್ ಪ್ಲೇನಲ್ಲೇ 79 ರನ್ ಸೇರಿಸಿತು. ಒಟ್ಟಾರೆ ಮೊದಲ ವಿಕೆಟ್‌ಗೆ 92 ರನ್‌ಗಳ ಜೊತೆಯಾಟ ನೀಡಿದರು
ಅಭಿಷೇಕ್ ಶರ್ಮಾ ಕೇವಲ 16 ಎಸೆತಗಳಲ್ಲಿ 4 ಬೌಂಡರಿ, 2 ಸಿಕ್ಸರ್‌ಗಳ ನೆರವಿನಿಂದ 32 ರನ್‌ಗಳಿಸಿ ನರೈನ್ ಬೌಲಿಂಗ್‌ನಲ್ಲಿ ಔಟ್ ಆದರು. ಆದರೆ 2ನೇ ವಿಕೆಟ್‌ಗೆ ಒಂದಾದ ಹೆಡ್ ಹಾಗೂ ಕ್ಲಾಸೆನ್ ಕೆಕೆಆರ್ ಬೌಲರ್‌ಗಳನ್ನ ಚೆಂಡಾಡಿದರು. ಈ ಜೋಡಿ 2ನೇ ವಿಕೆಟ್ ಜೊತೆಯಾಟದಲ್ಲಿ ಕೇವಲ 35 ಎಸೆತಗಳಲ್ಲಿ 83 ರನ್‌ಗಳ ಬೃಹತ್ ಜೊತೆಯಾಟ ನಡೆಸಿದರು.

# ಗಿಲ್ ನಾಯಕನಾಗಲು ದ್ರಾವಿಡ್ ಕಾರಣ!



ಕಿರಿಯರ ತಂಡದ ಕೋಚ್ ಆಗಿದ್ದ ವೇಳೆ ಗಿಲ್ ನಾಯಕ

ಭಾರತ ಮತ್ತು ಇಂಗ್ಲೆಂಡ್ ನಡುವಣ ಟೆಸ್ಟ್ ಸರಣಿಯು ಜೂನ್ 20 ರಿಂದ ಶುರುವಾಗಲಿದೆ. 5 ಪಂದ್ಯಗಳ ಈ ಸರಣಿಯ ಮೊದಲ ಪಂದ್ಯ ಲೀಡ್ಸ್‌ನಲ್ಲಿ ನಡೆದರೆ, ಎರಡನೇ ಪಂದ್ಯವು ಬರ್ಮಿಂಗ್‌ಹ್ಯಾಮ್‌ನಲ್ಲಿ ಜರುಗಲಿದೆ. ಇನ್ನು ಮೂರನೇ ಪಂದ್ಯಕ್ಕೆ ಲಾರ್ಡ್ಸ್ ಮೈದಾನವು ಆತಿಥ್ಯವಹಿಸಲಿದೆ. ಹಾಗೆಯೇ 4ನೇ ಮತ್ತು 5ನೇ ಪಂದ್ಯಗಳು ಮ್ಯಾಂಚೆಸ್ಟರ್ ಹಾಗೂ ಲಂಡನ್‌ನಲ್ಲಿ ನಡೆಯಲಿದೆ. ಈ ಪಂದ್ಯಗಳಲ್ಲಿ ಟೀಮ್ ಇಂಡಿಯಾವನ್ನು ಶುಭ್‌ಮನ್ ಗಿಲ್ ಮುನ್ನಡೆಸಲಿದ್ದಾರೆ.
ಭಾರತ ಟೆಸ್ಟ್ ತಂಡದ ನೂತನ ನಾಯಕನಾಗಿ ಶುಭ್‌ಮನ್ ಗಿಲ್ ಆಯ್ಕೆಯಾಗಿದ್ದಾರೆ. ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿ ಮೂಲಕ ಗಿಲ್ ನಾಯಕನಾಗಿ ಪಾದಾರ್ಪಣೆ ಮಾಡಲಿದ್ದು, ಈ ಮೂಲಕ ಟೀಮ್ ಇಂಡಿಯಾವನ್ನು ಟೆಸ್ಟ್‌ನಲ್ಲಿ ಮುನ್ನಡೆಸಿದ 37ನೇ ಕ್ಯಾಪ್ಟನ್ ಎನಿಸಿಕೊಳ್ಳಲಿದ್ದಾರೆ. ಇದಕ್ಕೂ ಮುನ್ನ ಭಾರತ ಟೆಸ್ಟ್ ತಂಡದ ನಾಯಕತ್ವದ ರೇಸ್‌ನಲ್ಲಿ ಜಸ್‌ಪ್ರೀತ್ ಬುಮ್ರಾ, ಕೆಎಲ್ ರಾಹುಲ್ ಹೆಸರುಗಳು ಮುಂಚೂಣಿಯಲ್ಲಿದ್ದವು. ಇದಾಗ್ಯೂ ಗಿಲ್‌ಗೆ ಪಟ್ಟ ಕಟ್ಟಲು ಮುಖ್ಯ ಕಾರಣ ಟೀಮ್ ಇಂಡಿಯಾದ ಮಾಜಿ ಕೋಚ್ ರಾಹುಲ್ ದ್ರಾವಿಡ್ ಎಂದು ವರದಿಯಾಗಿದೆ.
ರಾಹುಲ್ ದ್ರಾವಿಡ್ ಅವರ ಸೂಚನೆ ಮೇರೆಗೆ ಶುಭ್‌ಮನ್ ಗಿಲ್ ಅವರಿಗೆ ಬಿಸಿಸಿಐ ನಾಯಕತ್ವವನ್ನು ನೀಡಿದೆ ಎಂದು ಹಿಂದೂಸ್ತಾನ್ ಟೈಮ್ಸ್ ವರದಿ ಮಾಡಿದೆ. ರೋಹಿತ್ ಶರ್ಮಾ ಟೆಸ್ಟ್ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ ಬೆನ್ನಲ್ಲೇ ಆಯ್ಕೆ ಸಮಿತಿ ಹೊಸ ನಾಯಕನ ಹುಡುಕಾಟಕ್ಕೆ ಇಳಿದಿತ್ತು. ಈ ವೇಳೆ ಆಯ್ಕೆ ಸಮಿತಿ ಸದಸ್ಯರು ಭಾರತ ತಂಡದ ಮಾಜಿ ಕೋಚ್ ರಾಹುಲ್ ದ್ರಾವಿಡ್ ಅವರಿಂದ ಕೆಲ ಸಲಹೆಗಳನ್ನು ಪಡೆದಿದ್ದಾರೆ.
ಭಾರತ ತಂಡದ ಟೆಸ್ಟ್ ನಾಯಕತ್ವವನ್ನು ರಿಷಭ್ ಪಂತ್ ಅಥವಾ ಶುಭ್‌ಮನ್ ಗಿಲ್‌ಗೆ ನೀಡುವ ಬಗ್ಗೆ ಆಯ್ಕೆ ಸಮಿತಿಯಲ್ಲಿ ಚರ್ಚೆಗಳು ಮುಂದುವರೆದಿತ್ತು. ಈ ವೇಳೆ ರಾಹುಲ್ ದ್ರಾವಿಡ್ ಅವರ ಅಭಿಪ್ರಾಯವನ್ನು ಕೇಳಲಾಗಿದೆ. ಇತ್ತ ದ್ರಾವಿಡ್, ಶುಭ್‌ಮನ್ ಗಿಲ್ ಅವರಲ್ಲಿನ ನಾಯಕತ್ವದ ಗುಣಗಳ ಬಗ್ಗೆ ವಿವರಿಸಿ ತಿಳಿಸಿದ್ದಾರೆ. ಹೀಗಾಗಿ ಅಂತಿಮವಾಗಿ ಶುಭ್‌ಮನ್ ಗಿಲ್ ಅವರನ್ನು ಕ್ಯಾಪ್ಟನ್ ಮಾಡಲು ನಿರ್ಧರಿಸಲಾಯಿತು ಎಂದು ಹಿಂದೂಸ್ತಾನ್ ಟೈಮ್ಸ್ ವರದಿಯಲ್ಲಿ ತಿಳಿಸಲಾಗಿದೆ.
ರಾಹುಲ್ ದ್ರಾವಿಡ್ ಅವರಿಗೆ ಅಂಡರ್-19 ತಂಡದಿಂದಲೂ ಶುಭ್‌ಮನ್ ಗಿಲ್ ಚಿರಪರಿಚಿತ. ದ್ರಾವಿಡ್ ಭಾರತ ಕಿರಿಯರ ತಂಡದ ಕೋಚ್ ಆಗಿದ್ದ ವೇಳೆ ಗಿಲ್ ನಾಯಕರಾಗಿದ್ದರು. ಹೀಗಾಗಿ ನಾಯಕನಾಗಿ ಗಿಲ್ ಅವರ ಸಾಮರ್ಥ್ಯದ ಬಗ್ಗೆ ಅವರಿಗೆ ಉತ್ತಮ ಅರಿವಿತ್ತು. ಇದೇ ಕಾರಣದಿಂದಾಗಿ ಶುಭ್‌ಮನ್ ಗಿಲ್ ಅವರನ್ನು ಕ್ಯಾಪ್ಟನ್ ಆಗಿ ಆಯ್ಕೆ ಮಾಡುವುದು ಸೂಕ್ತ ಎಂದು ದ್ರಾವಿಡ್ ತಿಳಿಸಿದ್ದರು.
ಹೀಗಾಗಿಯೇ ಯುವ ಆಟಗಾರನಿಗೆ ನಾಯಕತ್ವ ನೀಡಲು ನಿರ್ಧರಿಸಿದೆವು ಎಂದು ಬಿಸಿಸಿಐ ಮೂಲಗಳು ತಿಳಿಸಿವೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966